22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 295 | ನವದೆಹಲಿ | ಬೆಲೆ ₹ 10 | ಮೇ 1, 2025, ಗುರುವಾರ

## ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರ ನಿರ್ಧಾರ



**ನವದೆಹಲಿ, ಏ.30:** ಸ್ವಾತಂತ್ರ್ಯದ ನಂತರದ ಮೊದಲ ಹೆಜ್ಜೆಯಾಗಿ ವ್ ೧ ೧ ೦ ಬ ೦ ೧ ವ್ ಜನಗಣತಿಯಲ್ಲಿ ಜಾತಿ ಗಣತಿಯನ್ನು ಸೇರಿಸಲು ಸರ್ಕಾರ ಬುಧವಾರ ನಿರ್ಧರಿಸಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯ ರಾಜಕೀಯ ವ್ಯವಹಾರಗಳ ಸಂಪುಟ ಸಮಿತಿ ಈ ನಿರ್ಧಾರವನ್ನು ತೆಗೆದು ಕೊಂಡಿದೆ. ಭಾರತದ ಸಂವಿಧಾನದ 246 ನೇ ವಿಧಿಯ ಪ್ರಕಾರ, ಜನಗಣತಿ ವಿಷಯವನ್ನು ಏಳನೇ ವೇಳಾಪಟ್ಟಿಯಲ್ಲಿ ಕೇಂದ್ರ ಪಟ್ಟಿಯಲ್ಲಿ 69 ರಲ್ಲಿ ಪಟ್ಟಿ ಮಾಡಲಾಗಿದೆ. ಭಾರತದ ಸಂವಿಧಾನದ ಪ್ರಕಾರ, ಜನಗಣತಿಯು ಕೇಂದ್ರ ವಿಷಯವಾಗಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವೆ ಅಶ್ವಿನಿ ವೈಷ್ಣವ್ ಮಾಧ್ಯಮಗೋಷ್ಠಿಯಲ್ಲಿ ಹೇಳಿದರು. .

## ರಾಷ್ಟ್ರೀಯ ಭದ್ರತಾ ಸಲಹಾ ಮಂಡಳಿಯ ಮುಖ್ಯಸ್ಥರಾಗಿ ಅಲೋಕ್ ಜೋಶಿ ನೇಮಕ



**ನವದೆಹಲಿ, ಏ.30:** ಕೇಂದ್ರ ಸರ್ಕಾರವು ಬುಧವಾರ ರಾಷ್ಟ್ರೀಯ ಭದ್ರತಾ ಸಲಹಾ ಮಂಡಳಿಯನ್ನು ಪುನರ್ರಚಿಸಿದ್ದು, ಕ್ರಾಂತಿಕಾರ ನಿರ್ಧಾರ ಮಾಡಿದೆ. ಏಳು ಮಂದಿ ನೂತನ ಸದಸ್ಯರನ್ನು ಮಂಡಳಿಗೆ ನೇಮಿಸಿದೆ. ಮಾಜಿ ಸಂಶೋಧನಾ ಮತ್ತು ವಿಶ್ಲೇಷಣಾ ವಿಭಾಗದ (RAW) ಮುಖ್ಯಸ್ಥ ಅಲೋಕ್ ಜೋಶಿ ಅವರನ್ನು ಹೊಸ ಅಧ್ಯಕ್ಷರನ್ನಾಗಿ ನೇಮಿಸಿದೆ. ಉಳಿದಂತೆ, ಮಾಜಿ ಏರ್‌ಕಮಾಂಡರ್ ಪಿಎಂ ಸಿನ್ಹಾ, ಮಾಜಿ ಸೇನಾಧಿಕಾರಿ ಎ.ಕೆ.ಸಿಂಗ್ ಹಾಗೂ ಮಾಜಿ ಸೇನಾಧಿಕಾರಿ ಮೌಂಟಿ ಖನ್ನಾರನ್ನು ತಂಡಕ್ಕೆ ಸೇರ್ಪಡೆ ಮಾಡಲಾಗಿದೆ. ಇವರೊಟ್ಟಿಗೆ ಇಬ್ಬರು ಮಾಜಿ ಐಪಿಎಸ್ ಅಧಿಕಾರಿಗಳನ್ನೂ ಸಮಿತಿಗೆ ನೇಮಿಸಲಾಗಿದೆ. ಈ ಪೈಕಿ ಮಾಜಿ ಐಪಿಎಸ್ ಅಧಿಕಾರಿ ರಾಜನ್ ವರ್ಮಾ, ಮನಮೋಹನ್ ಸಿಂಗ್ ರನ್ನು ಸೇರ್ಪಡೆ ಮಾಡಲಾಗಿದೆ. ಅಂತಿಮವಾಗಿ ಮಾಜಿ ಐಎಫ್ ಎಸ್ ಅಧಿಕಾರಿ ಬಿ ವೆಂಕಟೇಶ್ ವರ್ಮಾರಿಗೂ ಅವಕಾಶ ನೀಡಲಾಗಿದೆ.

## ಪ್ರಧಾನಿ ನರೇಂದ್ರ ಮೋದಿ ಆಧುನಿಕ ಪ್ರಪಂಚದ ಕಾಯಕಯೋಗಿ ಬಸವಣ್ಣ: ವಿ.ಸೋಮಣ್ಣ ಬಣ್ಣನೆ

**ನವದೆಹಲಿ, ಏ.30:** ನವದೆಹಲಿಯ ಸಂಸತ್ತಿನ ಪ್ರೇರಣಾ ಸ್ಥಳದಲ್ಲಿ ಜಗಜ್ಯೋತಿ ಬಸವೇಶ್ವರರ 894ನೇ ಜಯಂತಿಯನ್ನು ಆಚರಿಸಲಾಯಿತು. ಈ ಕಾರ್ಯಕ್ರಮವನ್ನು ರೇಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ತಮ್ಮ ಇಲಾಖೆಯ ಮುಖೇನ ಆಯೋಜಸಿ, ಅತ್ಯಂತ ಯಶಸ್ವಿಯಾಗಿ ದೆಹಲಿಯ ಸಂಸತ್ತಿನ ಪ್ರೇರಣಾ ಸ್ಥಳದಲ್ಲಿ ಬಸವ ಜಯಂತಿಯನ್ನು ಆಯೋಜಿಸುವಲ್ಲಿ ಸಫಲರಾಗಿದ್ದಾರೆ. ಕಾರ್ಯಕ್ರಮಕ್ಕೆ ಕೇಂದ್ರದ ಸಚಿವರನ್ನು, ರಾಜ್ಯದ ಸಂಸದರನ್ನು, ಮಠಾಧೀಶರನ್ನು ಮತ್ತು ಬಸವಾಭಿಮಾನಿಗಳನ್ನು, ದೆಹಲಿ ಕನ್ನಡಿಗರನ್ನು ವಿ.ಸೋಮಣ್ಣನವರು ಆಹ್ವಾನಿಸಿದ್ದರು.

ಸಂಸದೀಯ ವ್ಯವಹಾರಗಳ ಸಚಿವ ಕಿರಣ ರಿಜಿಜು, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಮತ್ತು ನೂತನ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಸಚಿವ ಪ್ರಲ್ಹಾದ್ ಜೋಶಿ, ಕಾರ್ಮಿಕ ಮತ್ತು ಉದ್ಯೋಗ ಖಾತೆಯ ರಾಜ್ಯ ಸಚಿವೆ ಕು. ಶೋಭಾ ಕರಂದ್ಲಾಜೆ, ರೇಲ್ವೆ ರಾಜ್ಯ ಖಾತೆಯ ಸಚಿವ ರವನೀತ ಸಿಂಗ್, ಜಲಶಕ್ತಿ ರಾಜ್ಯ ಖಾತೆಯ ಸಚಿವ ರಾಜಬೂಷಣ್ ಚೌಧರಿ, ಸಂಸದರಾದ ಪಿ.ಸಿ.ಗದ್ದಿಗೌಡರ, ತೇಜಸ್ವಿ ಸೂರ್ಯ, ಮಾಜಿ ಸಂಸದರಾದ ಡಾ. ಉಮೇಶ್ ಜಾದವ್, ಅಣ್ಣಾಸಾಹೇಬ್ ಜೊಲ್ಲೆ, ಶಾಸಕ ಬಿ.ಪಿ. ಹರೀಶ್, ವಿಧಾನ ಪರಿಷತ್ ಸದಸ್ಯ ಡಾ.ಎಮ್. ಜಿ. ಮುಳೆ, ಮಾಜಿ ಸಚಿವೆ ಶಶಿಕಲಾ ಜೊಲ್ಲೆ ಮತ್ತು ಬಸವ ಮೃತ್ಯುಂಜಯ ಸ್ವಾಮಿಗಳು, ಡಾ. ಬಸವ ಪ್ರಕಾಶ ಸ್ವಾಮಿ, ಬಸವಕುಮಾರ ಸ್ವಾಮಿ ಹಾಗೂ ಮತ್ತು ಅಸಂಖ್ಯಾತ ಕನ್ನಡಿಗರು ಇಂದು ಸಂಸತ್ತಿನ ಪ್ರೇರಣಾ ಸ್ಥಳದಲ್ಲಿ ಬಸವ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಲ್ಲಿಸಿದ್ದಾರೆ. ಕಾರ್ಯಕ್ರಮದ ಆಯೋಜನೆಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅನುಮತಿ ನೀಡಿ ಬಸವೇಶ್ವರರ ಪುತ್ಥಳಿಗೆ ಅಪಾರ ಗೌರವ ಸಲ್ಲಿಸಲು ಕಾರಣರಾಗಿದ್ದಾರೆಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ವಿ. ಸೋಮಣ್ಣ, ಜಾತಿರಹಿತ ಮತ್ತು ವರ್ಗರಹಿತ ಸಮಾಜದ ಕಲ್ಪನೆಯನ್ನು ಜಗತ್ತಿಗೆ ತೋರಿಸಿದವರು ಬಸವಣ್ಣನವರು, ಕಾಯಕವೇ ಕೈಲಾಸ ಎಂಬ ತತ್ವದೊಂದಿಗೆ ಆರೋಗ್ಯವಂತ ಸಮಾಜಕ್ಕೆ ಅಡಿಪಾಯ ಹಾಕಿದವರು ಬಸವೇಶ್ವರರು ಎಂದಿದ್ದಾರೆ.

ಬಸವಣ್ಣನವರ ಸಾರಥ್ಯದಲ್ಲಿ ನಡೆದ ಸುಧಾರಣೆಯ ಪ್ರಯತ್ನ ಒಂದು ಸಾಮಾಜಿಕ ಚಳವಳಿಯಾಗಿ ರೂಪುಗೊಂಡಿತ್ತು. ಸಾಮಾನ್ಯ ಬದುಕಿನ ಎಲ್ಲಾ ಸ್ತರಗಳು ಆ ಚಳುವಳಿಯ ಒಂದು ಭಾಗವಾದ್ದದ್ದು ಶರಣರ



ಪೂರ್ಣ ದೃಷ್ಟಿಯ ಸಂಕೇತ ಎಂದು ಮಾಧ್ಯಮಕ್ಕೆ ತಿಳಿಸಿದ್ದಾರೆ.

ಬಸವಣ್ಣನವರು ವಿದ್ಯೆಯೆಂಬ ಆಯುಧವನ್ನು ಸಮಾಜದ ಎಲ್ಲಾ ವರ್ಗದ ಹಿಂದುಳಿದವರ, ಶೋಷಿತ ವರ್ಗದ ಹಾಗೂ ಮಹಿಳೆಯರ ಉದ್ಧಾರಕ್ಕಾಗಿ ತೊಡಗಿಸಿಕೊಂಡಿದ್ದರು. ಜೀವನದ ಸತ್ಯತೆಗಳನ್ನು ಸಾಮಾನ್ಯರಿಗೆ ತಲುಪಿಸುವಲ್ಲಿ ಬಸವಣ್ಣನವರ ವಚನಗಳು ಬಹು ಮುಖ್ಯ ಪಾತ್ರ ವಹಿಸಿದೆ ಎಂದು ಸೋಮಣ್ಣ ದೆಹಲಿಯ ಸಂಸತ್ತಿನ ಪ್ರೇರಣಾ ಸ್ಥಳದಲ್ಲಿ ಇಂದು ಮಾತನಾಡಿದ್ದಾರೆ.

ಬಸವಣ್ಣನವರ ಅನುಭವ ಮಂಟಪ ಸಮಾಜದ ಎಲ್ಲಾ ವರ್ಗಗಳ ಪ್ರತಿನಿಧಿತ್ವದೊಂದಿಗೆ ಲಿಂಗಭೇದ ರಹಿತ ಸಮಾನತೆಯೊಂದಿಗೆ ಅಭಿವ್ಯಕ್ತಿ ಸ್ವಾತಂತ್ರ್ಯದ ವೇದಿಕೆಯಾಗಿತ್ತು. ಅನುಭವ ಮಂಟಪದ ಆ ವೇದಿಕೆಯೆ ಇಂದಿನ ನಮ್ಮ ಮುಂದಿರುವ ಸಂಸತ್ತು ಎಂದು ವಿ. ಸೋಮಣ್ಣ ಪುನರುಚ್ಚರಿಸಿದ್ದಾರೆ.

ಇಂಗ್ಲೆಂಡ್‌ನಲ್ಲಿ ಮ್ಯಾಗ್ನಾ ಕಾರ್ಟ ಪರಿಕಲ್ಪನೆಯ ಸಂಸತ್ತು ಜಾರಿಗೆ ಬರುವ ಮೊದಲೇ ಭಾರತದಲ್ಲಿ ಅದರಲ್ಲೂ ಕರ್ನಾಟಕದಲ್ಲಿ ಬಸವಣ್ಣನವರು ಸಂಸತ್ತಿನ ಪರಿಕಲ್ಪನೆ ಸೃಷ್ಟಿಸಿದ್ದು, ಅನುಭವ ಮಂಟಪ ರೂವಾರಿಯಾಗಿದ್ದರು ಎಂದು ಅನುಭವ ಮಂಟಪದ ಹಿರಿಮೆ ಗರಿಮೆಯನ್ನು ಇಂದು ಸೋಮಣ್ಣ ಸಂಸತ್ತಿನಲ್ಲಿ ಆವರಣದಲ್ಲಿ ಕೊಂಡಾಡಿದ್ದಾರೆ.

ಶ್ರೀ ಬಸವಣ್ಣನವರ ಕಾಯಕ ತತ್ವದ ಪ್ರತಿಪಾದನೆಯಲ್ಲಿಯೇ ಸನ್ಮಾನ್ಯ ಪ್ರಧಾನ ಮಂತ್ರಿ ಶ್ರೀ ನರೇಂದ್ರಮೋದಿಯವರು ಈ ದೇಶವನ್ನು ಮುನ್ನೆಡಿಸುತ್ತಿದ್ದಾರೆ.

ಬಸವಣ್ಣನವರು 12ನೇ ಶತಮಾನದಲ್ಲಿ; ಇವನಾರವ, ಇವನಾರವ, ಇವನಾರವನೆಂದೆನಿಸದಿರಯ್ಯಾ – ಇವ ನಮ್ಮವ, ಇವ ನಮ್ಮವ, ಇವ ನಮ್ಮವನೆಂದೆನಿಸಯ್ಯಾ, ನಿಮ್ಮ ಮನೆಯ ಮಗನೆಂದೆನಿಸಯ್ಯಾ ಎಂಬ ಸೂತ್ರವನ್ನು ಜಗಜ್ಯೋತಿ ಬಸವಣ್ಣನವರು ಜಗತ್ತಿಗೆ ಪರಿಚಯಿಸಿದರು (ಪುಟ 4ಕ್ಕೆ)

## ಸಮಾನತೆಯ ಹರಿಕಾರ ಜಗಜ್ಯೋತಿ ಬಸವಣ್ಣ ವಿಶ್ವಗುರು: ಮುಖ್ಯಮಂತ್ರಿ

**ಬಸವಣ್ಣನನ್ನು ಸ್ಮರಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ**



**ಬೆಂಗಳೂರು, ಏ.30:** ಅಂಥವರನ್ನು ನೆನೆಸುವುದು ಪ್ರತಿಯೊಬ್ಬ ಕನ್ನಡಿಗರ ಹಾಗೂ ಭಾರತೀಯನ ಕರ್ತವ್ಯ. ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಬಸವ ಸಮಿತಿ ಆಯೋಜಿಸಿದ್ದ ವಿಶ್ವ ಗುರು ಬಸವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸರ್ಕಾರ ಅವರಿಗೆ ಕೃತಜ್ಞತೆಯನ್ನು ಸಲ್ಲಿಸುವ ಸಲುವಾಗಿ ಸಾಂಸ್ಕೃತಿಕ ನಾಯಕ ಎಂದು ಗುರುತಿಸಿದೆ. ಬಸವಣ್ಣ ವಿಶ್ವ ಗುರುಗಳಾಗಿದ್ದು, ಅವರು ಕೇವಲ ಸಾಮಾಜಿಕ ಕ್ರಾಂತಿ ಮಾಡಿದವರಲ್ಲ, ಸಮಾಜದ ಪರಿವರ್ತನೆಗೆ ಇತಿಹಾಸದಲ್ಲಿ ಶಾಶ್ವತವಾಗಿ ನೆಲೆಸುವ, ಜನರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿಯುವ ಕೆಲಸವನ್ನು ಬಸವಣ್ಣ ತಮ್ಮ ಜೀವಿತ ಕಾಲದಲ್ಲಿ ಮಾಡಿದ್ದಾರೆ ಎಂದು ತಿಳಿಸಿದ ಮುಖ್ಯಮಂತ್ರಿಗಳು ಬಸವ ಜಯಂತಿಯ ಶುಭಾಶಯಗಳನ್ನು ತಿಳಿಸಿದರು. (ಪುಟ 5ಕ್ಕೆ)


ಕಾರ್ಮಿಕ ಇಲಾಖೆ
ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

"ಕಾರ್ಮಿಕ ದಿನಾಚರಣೆಯ" ಶುಭಾಶಯಗಳು



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

ಕಳೆದ ಎರಡು ವರ್ಷಗಳಲ್ಲಿ
ಕಾರ್ಮಿಕ ಇಲಾಖೆಯ ವತಿಯಿಂದ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಅನುಷ್ಠಾನಗೊಳಿಸಿದ ಪ್ರಮುಖ ಯೋಜನೆಗಳು ಮತ್ತು ಕಾರ್ಯಕ್ರಮಗಳು

ಕಾರ್ಮಿಕ ಆಯುಕ್ತಾಲಯ
- ಕರ್ನಾಟಕ ಕಡ್ಡಾಯ ಉಪಧನ ವಿಮಾ ನಿಯಮಗಳು 2024 ಜಾರಿಗೊಳಿಸಿ ಕಾರ್ಮಿಕರ ಉಪಧನವನ್ನು ಸಂರಕ್ಷಿಸಲಾಗುತ್ತಿದೆ.
- ಕನಿಷ್ಠ ವೇತನವನ್ನು ಪರಿಷ್ಕರಿಸಲಾಗಿದೆ. ಇದರಿಂದ ರಾಜ್ಯಾದ್ಯಂತ ಒಟ್ಟು 1.7 ಕೋಟಿ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರಿಗೆ ಪರಿಷ್ಕೃತ ವೇತನದ ಸೌಲಭ್ಯ ದೊರಕಲಿದೆ.
- ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ-1961ರ ಅನ್ವಯಿಸುವಿಕೆಯನ್ನು ರಾಜ್ಯದ ಎಲ್ಲಾ ಭೂ ಭಾಗಗಳಿಗೂ ವಿಸ್ತರಿಸಿ ಅಧಿಸೂಚನೆಯನ್ನು ಹೊರಡಿಸಿ ಕಾರ್ಮಿಕರ ಹಿತರಕ್ಷಿಸಲಾಗುತ್ತಿದೆ.

ಕರ್ನಾಟಕ ರಾಜ್ಯ ಕಾರ್ಮಿಕ ಅಧ್ಯಯನ ಸಂಸ್ಥೆ, ಬೆಂಗಳೂರು
- ಕಾರ್ಮಿಕ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಕೈಗಾರಿಕೆ ಹಾಗೂ ಕಾರ್ಖಾನೆಗಳ ವಿವಿಧ ಬಗೆಯ ನೌಕರರಿಗೆ ತರಬೇತಿಯನ್ನು ನೀಡುವುದು, ಇದರಿಂದಾಗಿ ಕಾರ್ಮಿಕ ಇಲಾಖೆಯನ್ನು ಉತ್ಕೃಷ್ಟವಾಗಿ ಹಾಗೂ ಅಭಿವೃದ್ಧಿ ದಿಸೆಯಲ್ಲಿ ಕಾರ್ಯನಿರ್ವಹಿಸುವುದು ಈ ಸಂಸ್ಥೆಯ ಮುಖ್ಯೋದ್ದೇಶವಾಗಿದೆ.
- ಕಳೆದ ಎರಡು ವರ್ಷದ ಅವಧಿಯಲ್ಲಿ 1572 ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿರುತ್ತದೆ ಹಾಗೂ ಇಲ್ಲಿಯವರೆಗೂ ಸಂಸ್ಥೆಯ ವತಿಯಿಂದ ಒಟ್ಟು 154 ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.




ನಿಮ್ಮ ಶ್ರಮ, ಸಮರ್ಪಣೆ ಹಾಗೂ ದೇಶದ ಅಭಿವೃದ್ಧಿಯಲ್ಲಿ ನೀವು ವಹಿಸಿದ ಪಾತ್ರಕ್ಕೆ ಸರ್ಕಾರದ ಪರವಾಗಿ ಧನ್ಯವಾದಗಳನ್ನು ಅರ್ಪಿಸಲು ಇಚ್ಛಿಸುತ್ತೇನೆ.
||ಶ್ರಮ ಮೇವ ಜಯತೇ||
- ಸಂತೋಷ್ ಲಾಡ್ ಮಾನ್ಯ ಕಾರ್ಮಿಕ ಸಚಿವರು

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ
- 36.29 ಲಕ್ಷ ಫಲಾನುಭವಿಗಳಿಗೆ 2078.91 ಕೋಟಿ ವೆಚ್ಚದಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲಾಗಿದೆ.
- ರಾಜ್ಯಾದ್ಯಂತ ಮುನ್ನೆಚ್ಚರಿಕಾ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಲಾಗಿದ್ದು, 11.38 ಲಕ್ಷ ಕಾರ್ಮಿಕರು ಯೋಜನೆಯ ಪ್ರಯೋಜನೆಯನ್ನು ಪಡೆದಿರುತ್ತಾರೆ.
- ಮಂಡಳಿಯ ವತಿಯಿಂದ ನೋಂದಾಯಿತ ನಿರ್ಮಾಣ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ನೂತನವಾಗಿ ರಾಜ್ಯಾದ್ಯಂತ 100 ಸಂಚಾರಿ ಆರೋಗ್ಯ ಘಟಕ ವಾಹನಗಳನ್ನು ಪ್ರಾರಂಭಿಸಲಾಗಿದೆ.
- 6.12 ಲಕ್ಷ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳಾಗಿ ನೋಂದಾಯಿಸಲಾಗಿದೆ.
- ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ 2370 ಕೋಟಿ ಮೊತ್ತದಷ್ಟು ಸುಂಕ ಸಂಗ್ರಹಿಸಲಾಗಿದೆ.
- 43 ಸುಸಜ್ಜಿತ ಡಾ. ಬಿ.ಆರ್. ಅಂಬೇಡ್ಕರ್ ಕಾರ್ಮಿಕ ಸೇವಾ ಕೇಂದ್ರಗಳನ್ನು ಸ್ಥಾಪಿಸಲು ಕ್ರಮವಹಿಸಲಾಗುತ್ತಿದೆ.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ
- ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಕಾಯ್ದೆ, 2024 ಜಾರಿಗೊಳಿಸಿ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.
- ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯನ್ನು ಜಾರಿಗೊಳಿಸಿ ಇ-ಕಾಮರ್ಸ್ ವಲಯದ ಗಿಗ್ ಕಾರ್ಮಿಕರಿಗೆ ಜೀವ ವಿಮೆ, ಅಪಘಾತ ವಿಮೆ ಮತ್ತು ಆಸ್ಪತ್ರೆ ವೆಚ್ಚಗಳ ಮರುಪಾವತಿ ಸೇರಿದಂತೆ ರೂ. 4.00 ಲಕ್ಷಗಳ ವಿಮಾ ಸೌಲಭ್ಯವನ್ನು ಒದಗಿಸಲಾಗುತ್ತಿದೆ.
- ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ಕಾಯ್ದೆ, 2024ನ್ನು ಜಾರಿಗೊಳಿಸಲಾಗಿದೆ.
- ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪ್ರಯೋಜನ ಮತ್ತು ಆರೋಗ್ಯ ಪ್ರಯೋಜನ ಯೋಜನೆಯನ್ನು ಜಾರಿಗೊಳಿಸಲಾಗಿದೆ.
- ಆಶಾದೀಪ ಯೋಜನೆ: ಖಾಸಗಿ ವಲಯದ ಉದ್ದಿಮೆಗಳಲ್ಲಿ ಪ.ಜಾತಿ/ಪ.ಪಂಗಡ ವರ್ಗಗಳಿಗೆ ಉದ್ಯೋಗಾವಕಾಶಗಳನ್ನು ಒದಗಿಸುವ ಆಶಾದೀಪ ಯೋಜನೆಯನ್ನು ಪರಿಷ್ಕರಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ
- 56,183 ಫಲಾನುಭವಿಗಳ ಮಕ್ಕಳಿಗೆ ರೂ. 5103.04 ಲಕ್ಷಗಳ ಶೈಕ್ಷಣಿಕ ಪ್ರೋತ್ಸಾಹ ಧನ ವಿತರಣೆ.
- 10 ಫಲಾನುಭವಿಗಳಿಗೆ ರೂ. 1.55 ಲಕ್ಷಗಳ ವೈದ್ಯಕೀಯ ನೆರವು ನೀಡಲಾಗಿದೆ.
- ಮೃತ ಕಾರ್ಮಿಕರ ಅಂತ್ಯ ಸಂಸ್ಕಾರಕ್ಕೆ ಒಟ್ಟು 808 ಫಲಾನುಭವಿಗಳಿಗೆ ರೂ. 80.80 ಲಕ್ಷಗಳನ್ನು ಧನ ಸಹಾಯವಾಗಿ ನೀಡಲಾಗಿದೆ.
- ಹೆರಿಗೆ ಭತ್ಯೆ ಸೌಲಭ್ಯದಡಿ 1408 ಮಹಿಳಾ ಫಲಾನುಭವಿಗಳಿಗೆ ರೂ. 140.80 ಲಕ್ಷಗಳನ್ನು ಧನ ಸಹಾಯವಾಗಿ ನೀಡಲಾಗಿದೆ.
- ಕಾರ್ಮಿಕರ ಉಪಯೋಗಕ್ಕಾಗಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ, ಗದಗ ಜಿಲ್ಲೆಯ ನರಗುಂದ, ಹಾವೇರಿ ಜಿಲ್ಲೆಯ ರಟ್ಟಿಹಳ್ಳಿ ಹಾಗೂ ಬಳ್ಳಾರಿಯಲ್ಲಿ ಒಟ್ಟು ರೂ. 21.5 ಕೋಟಿ ವೆಚ್ಚದಲ್ಲಿ ಸಮುದಾಯ ಭವನಗಳನ್ನು ನಿರ್ಮಾಣ ಮಾಡಲಾಗಿದೆ.

ಕಾರ್ಖಾನೆಗಳು ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ
- ವ್ಯವಹಾರವನ್ನು ಸುಲಭಗೊಳಿಸಲು, ವಿವಿಧ ಸುಧಾರಣೆಗಳನ್ನು ಕೈಗೊಳ್ಳಲಾಗಿದೆ.
  1. ವಾರಕ್ಕೆ 48 ಗಂಟೆಗಳ ಮಿತಿಯನ್ನು ಬದಲಾಯಿಸದೆ ದೈನಂದಿನ ಕೆಲಸದ ಸಮಯದಲ್ಲಿ ನಮ್ಯತೆ.
  2. ಓವರ್‌ಟೈಮ್ 3 ತಿಂಗಳ ಅವಧಿಯಲ್ಲಿ 144 ಗಂಟೆಗಳವರೆಗೆ ಹೆಚ್ಚುವರಿ ಕೆಲಸ ನಿರ್ವಹಿಸಲು ಅವಕಾಶ
  3. ಮಹಿಳಾ ಕಾರ್ಮಿಕರಿಗೆ ಮೂರು ಪಾಳಿಗಳಿಗೂ ಮತ್ತು ಕಾಲಾನಂತರದಲ್ಲಿಯೂ ಅವಕಾಶ ನೀಡಲಾಗಿದೆ.
- ಸುರಕ್ಷತೆ ಆರೋಗ್ಯ ಮತ್ತು ಅಪಘಾತ ತಡೆಗಟ್ಟುವಿಕೆಯ ಕುರಿತು ಜಾಗೃತಿ ಮೂಡಿಸಲು, 212 ತರಬೇತಿ ಕಾರ್ಯಕ್ರಮಗಳು ಮತ್ತು 21 ವಿಚಾರ ಸಂಕಿರಣಗಳನ್ನು ನಡೆಸಲಾಗಿದೆ.
- ಇಲಾಖೆಯು 21,737 ತಪಾಸಣೆಗಳನ್ನು ನಡೆಸಿದೆ ಮತ್ತು 309 ಪ್ರಕರಣಗಳಿಗೆ ಕಾನೂನು ಕ್ರಮಗಳನ್ನು ಪ್ರಾರಂಭಿಸಲಾಗಿದೆ.

ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಯ ನಿರ್ದೇಶನಾಲಯ (ಇ.ಎಸ್.ಐ.ಎಸ್)
- ರಾಜ್ಯಾದ್ಯಂತ 37 ಲಕ್ಷ ವಿಮಾದಾರರು ಹಾಗೂ 1.88 ಕೋಟಿ ವಿಮಾದಾರರ ಅವಲಂಭಿತರಿಗೆ ವೈದ್ಯಕೀಯ ಸೇವೆಗಳನ್ನು ರಾಜ್ಯದ 07 ಕಾ.ರಾ.ವಿ ಆಸ್ಪತ್ರೆಗಳಲ್ಲಿ, 02 ರೋಗ ಪತ್ತೆ ಹಚ್ಚುವ ಕೇಂದ್ರಗಳಲ್ಲಿ ಮತ್ತು 125 ಕಾ.ರಾ.ವಿ ಚಿಕಿತ್ಸಾಲಯಗಳ ಮುಖಾಂತರ ಒದಗಿಸಲಾಗುತ್ತಿದೆ.
- ಚಿಂಚೋಳಿ. ಅರಸೀಕೆರೆ, ಗಂಜಿಮಟ ಮತ್ತು ಪಡುಬಿದ್ರಿಯಲ್ಲಿ ಹೊಸ ಇಎಸ್ಐ ಚಿಕಿತ್ಸಾಲಯಗಳನ್ನು ತೆರೆಯಲಾಗಿದೆ.
- 2024-25 ರ ಬಜೆಟ್‌ನಲ್ಲಿ ಸೂಪರ್ ಸ್ಪೆಷಾಲಿಟಿ ಸೇವೆಗಳು, ಡಿಜಿಟಲ್ ಡಯಾಗ್ನೋಸ್ಟಿಕ್ ಕಿಯೋಸ್ಕ್, ಮೊಬೈಲ್ ಹೆಲ್ತ್ ಯೂನಿಟ್, ಸಮಗ್ರ ಆರೋಗ್ಯ ತಪಾಸಣೆಯನ್ನು ಒಟ್ಟು ರೂ. 311 ಕೋಟಿಗಳಲ್ಲಿ ಜಾರಿಗೆ ತರಲು ಇಎಸ್ಐ ಯೋಜನೆಗಳನ್ನು ರೂಪಿಸಲಾಗಿದೆ.



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ರವರು ಮತ್ತು ಕಾರ್ಮಿಕ ಇಲಾಖೆ ಸಚಿವರು ಹಾಗೂ ಮಂಡಳಿಯ ಅಧ್ಯಕ್ಷರಾದ ಶ್ರೀ ಸಂತೋಷ್ ಎಸ್ ಲಾಡ್ ರವರು ಇಲಾಖಾ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿರುವುದು.

https://karbwwb.karnataka.gov.in WorkersBoard workerswelfare /kbocwwb /kbocwwb
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ : ಕಾರ್ಮಿಕ ಅಧಿಕಾರಿಗಳು, ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರ ಕಛೇರಿ

ಡಾ|| ಎನ್.ವಿ. ಪ್ರಸಾದ್ ಭಾ.ಆ.ಸೇ., ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ
ಡಾ. ಹೆಚ್.ಎನ್. ಗೋಪಾಲಕೃಷ್ಣ ಭಾ.ಆ.ಸೇ., ಆಯುಕ್ತರು, ಕಾರ್ಮಿಕ ಇಲಾಖೆ
ಭಾರತಿ ಡಿ. ಭಾ.ಆ.ಸೇ., ಸಿ.ಇ.ಓ ಮತ್ತು ಕಾರ್ಯದರ್ಶಿ, ಕ.ಕ ಮತ್ತು ಇ.ನಿ.ಕಾ.ಕ ಮಂಡಳಿ

ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು - ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

## ನಿತ್ಯ ಪಂಚಾಂಗ 1.05.2025 ಗುರುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ವೈಶಾಖ ಶುದ್ಧ

ಚೌತಿ, ಮೃಗಶಿರ ನಕ್ಷತ್ರ,
ಮೇ ದಿನ/ಕಾರ್ಮಿಕ ದಿನಾಚರಣೆ,
ವಿನಾಯಕೀ ಚತುರ್ಥಿ,
ಮಿತ್ರನಡ್ಕ ಮಲರಾಯ ಧ್ವಜ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಮನುವಾದಿಗಳು ಬೇಕೋ, ಬಸವವಾದಿಗಳು ಬೇಕೋ ನೀವೇ ನಿರ್ಧರಿಸಿ: ಸಿಎಂ

**ಕೂಡಲಸಂಗಮ, ಏ.29:** ಮನ್ ಕೀ ಬಾತ್‌ನಲ್ಲಿ ಚರ್ಚೆ ಇಲ್ಲ. ಏಕಮುಖವಾಗಿ ಹೇಳಿದ್ದನ್ನು ಕೇಳಬೇಕು ಎನ್ನುವ ಧೋರಣೆ ಇದೆ. ಇದು ಸರ್ವಾಧಿಕಾರಿ ಲಕ್ಷಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟೀಕಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಸವ ಜಯಂತಿ ಪ್ರಯುಕ್ತ ಆಯೋಜಿಸಿದ್ದ "ಶರಣರ ವೈಭವ–2025" ನ್ನು ಉದ್ಘಾಟಿಸಿ, ಬಸವ ಶ್ರೀ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ಚರ್ಚೆ ಇರುತ್ತದೆ. ಸರ್ವಾಧಿಕಾರದಲ್ಲಿ ಚರ್ಚೆಗೆ ಅವಕಾಶ ಇಲ್ಲ. ಏಕಮುಖವಾಗಿ ನಾನು ಹೇಳಿದ್ದನ್ನು ನೀವು ಕೇಳಿ" ಎನ್ನುವುದಷ್ಟೆ. ಮನ್ ಕೀ ಬಾತ್ ರೀತಿ ನಾನು ಹೇಳ್ತೀನಿ, ನೀವು ಕೇಳಿ ಅನ್ನೋದು ಸರ್ವಾಧಿಕಾರಿ ಧೋರಣೆ ಎಂದು ಟೀಕಿಸಿದರು.

ವಚನ ಎಂದರೆ ಮಾತು. ಶರಣರ ವಚನ ಜನರ ಭಾಷೆಯಲ್ಲಿವೆ. ಆದ್ದರಿಂದ ವಚನ ಸಾಹಿತ್ಯ, ಜನರ ಸಾಹಿತ್ಯ ಆಗಿದೆ. ಹಿಂದೆ ಸಂಸ್ಕೃತ ಕಲಿತರೆ ಕಲಿಯುವ ಶೂದ್ರರ ಕಿವಿಗೆ ಕಾದ ಸೀಸ ಹೊಯ್ಯುವ ಶಿಕ್ಷೆ ಇತ್ತು. ಇದರಿಂದಲೇ ಭಾರತೀಯ ಶೂದ್ರ ಸಮುದಾಯ ಅಕ್ಷರ ಸಂಸ್ಕೃತಿಯಿಂದ ವಂಚಿತರಾದರು. ಶಿಕ್ಷಣ ಇಲ್ಲದ ಕಾರಣಕ್ಕೆ ಅಸಮಾನತೆ ಬೆಳೆಯಿತು ಎಂದರು. "ನಮ್ಮ ಸಂವಿಧಾನ ವೈರುಧ್ಯತೆ ಇರುವ ಸಮಾಜದಲ್ಲಿ ಜಾರಿ ಆಗುತ್ತಿದೆ. ಪ್ರಜಾಪ್ರಭುತ್ವದ ಕಾರಣದಿಂದ ರಾಷ್ಟ್ರಪತಿಯಿಂದ ಪೌರಕಾರ್ಮಿಕರವರೆಗೂ ಎಲ್ಲರಿಗೂ ಒಂದೇ ಮತ ಎನ್ನುವ ರಾಜಕೀಯ ಸ್ವಾತಂತ್ರ್ಯ ಸಿಕ್ಕಿದೆ. ಆದರೆ, ಸಾಮಾಜಿಕ ಮತ್ತು ಆರ್ಥಿಕ ಸ್ವಾತಂತ್ರ್ಯ ಇನ್ನೂ ಸಿಕ್ಕಿಲ್ಲ. ಇದು ಸಿಗದೆ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಇಲ್ಲ ಎನ್ನುವ ಅಂಬೇಡ್ಕರ್ ಅವರ ಮಾತನ್ನು ಉಲ್ಲೇಖಿಸಿದರು.

ಇವನಾರವ ಇವನಾರವ ಎಂದು ವಚನ ಹೇಳೋದು, ಈ ಕಡೆ ಬಂದು ಅವನು ಯಾವ ಜಾತಿ ಎಂದು ಕೇಳೋದು ನಡೆಯುತ್ತಿದೆ. ಹೀಗಾದರೆ ಬಸವಣ್ಣನವರ ಆಶಯದಂತೆ ಜಾತಿ ನಿರ್ಮೂಲನೆ ಆಗಲ್ಲ. ಜಾತಿಗೆ ಚಲನೆಯಿಲ್ಲ. ವರ್ಗಕ್ಕೆ ಚಲನೆ ಇದೆ. ಎಲ್ಲಾ ಜಾತಿಗಳಿಗೂ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಕೂಡಲ ಸಂಗಮ ಬಾಗಲಕೋಟ ಜಿಲ್ಲೆಯಲ್ಲಿ ಶರಣರ ವೈಭವ ಬಸವ ಜಯಂತಿಯನ್ನು ಉದ್ಘಾಟಿಸಿದರು.

ಆರ್ಥಿಕ ಚಲನೆ ಸಿಕ್ಕಾಗ ಮಾತ್ರ ಜಾತಿ ನಿರ್ಮೂಲನೆ ಸಾಧ್ಯ ಎಂದರು. ಇವನಾರವ ಇವನಾರವ ಎಂದು ವಚನ ಹೇಳುತ್ತಲೇ ಜಾತಿ ಮಾಡುವವರು ಇದ್ದಾರೆ. ಬಸವಣ್ಣನವರು ಮತ್ತು ಶರಣರು ಕರ್ಮಸಿದ್ಧಾಂತದ ವಿರುದ್ಧ ಹೋರಾಟ ನಡೆಸಿದರು. ಆದರೆ ಈಗ ಶಿಕ್ಷಣ ಪಡೆದವರೇ ಜನ್ಮ ಜನ್ಮಗಳಲ್ಲಿ ನಂಬಿಕೆ ಇಟ್ಟು ಕರ್ಮಸಿದ್ಧಾಂತ ಆಚರಿಸುತ್ತಿದ್ದಾರೆ. ಒಂದು ಕಡೆ ಬಸವ ಜಯಂತಿ ಆಚರಿಸೋದು ಮತ್ತೊಂದು ಕಡೆ ಕರ್ಮಸಿದ್ಧಾಂತ ಆಚರಿಸೋದು ಮಾಡಿದರೆ ಬಸವ ಜಯಂತಿಗೆ ಅರ್ಥ ಇಲ್ಲ ಎಂದರು. ಬಸವಣ್ಣ ಅರ್ಥ ಆಗ್ಬೇಕು ಅಂದ್ರೆ ಮೊದಲು ಕರ್ಮಸಿದ್ಧಾಂತ ಮತ್ತು ಹಣೆಬರಹ ಎನ್ನುವ ಮೌಢ್ಯವನ್ನು ಬಿಡುವ ಶಪಥ ಮಾಡಬೇಕು ಎಂದು ಕರೆ ನೀಡಿದರು. ಆಚಾರವೇ ಸ್ವರ್ಗ–ಅನಾಚಾರವೇ ನರಕ ಎನ್ನುವ ಬಸವಣ್ಣನವರ ಮೌಲ್ಯ ಪಾಲಿಸುವ ಶಪಥ ಮಾಡಿ ನೋಡೋಣ. ಧರ್ಮ ಎಂದರೆ ಭಯಾನಕವಾಗಿ ರಾಶಿರಾಶಿ ಏನೇನೋ ಹೇಳ್ತಾರೆ. ಇದ್ಯಾವುದೂ ಧರ್ಮ ಅಲ್ಲ. ಬಸವಣ್ಣನವರು ಬಹಳ ಸರಳವಾಗಿ "ದಯೆಯೇ ಧರ್ಮದ ಮೂಲವಯ್ಯ" ಎಂದಿದ್ದಾರೆ. ಇಷ್ಟು ಸರಳ ಮತ್ತು ಸುಂದರವಾದ ಮೌಲ್ಯವೇ ಧರ್ಮ ಎಂದರು. ಬಸವಣ್ಣನವರ ಆಶಯಗಳು, ಬಸವಣ್ಣನವರ ಮೌಲ್ಯಗಳು, ಅಂಬೇಡ್ಕರ್ ಅವರ ಸಂವಿಧಾನದ ಆಶಯ ಮತ್ತು ಮೌಲ್ಯಗಳು ಒಂದೇ ಆಗಿವೆ. ಇದನ್ನು ಅರ್ಥ ಮಾಡಿಕೊಂಡು, ಪಾಲಿಸದೇ ಹೋದರೆ ಕೇವಲ ಬಸವಣ್ಣನವರ ಬಗ್ಗೆ ಭಾಷಣ ಮಾಡುವುದರಿಂದ ಸಮಾಜಕ್ಕೆ ಏನೂ ಒಳ್ಳೆಯದು ಮಾಡಲು ಸಾಧ್ಯವಿಲ್ಲ ಎಂದರು. ಗೋರುಚ ಅವರ ಸಮಿತಿ ವರದಿಯಂತೆ ಅನುಭಾವಿಗಳ ಅನುಭವ ಮಂಟಪ ಮಾಡುವ ಕೆಲಸ ಆಗಿದ್ದು ನಮ್ಮಿಂದ. ಇದನ್ನು ಈ ವರ್ಷವೇ ಪೂರ್ಣಗೊಳಿಸುತ್ತೇವೆ. ಬಸವಣ್ಣರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ನಾವೇ. ಅಕ್ಕಮಹಾದೇವಿ ವಿಶ್ವ ವಿದ್ಯಾಲಯ ನಾಮಕಾರಣ ಮಾಡಿದ್ದು ನಾವೇ ಎಂದರು. ಕನಕದಾಸರು, ಬಸವಣ್ಣ ಇಬ್ಬರೂ ಸಂಸ್ಕೃತದಲ್ಲಿ ಏನೂ ಹೇಳಲಿಲ್ಲ. ಜನರ ಭಾಷೆಯಲ್ಲಿ, ಜನರಿಗೆ ಅರ್ಥ ಆಗುವ ರೀತಿ ಅತ್ಯಂತ ಸರಳವಾಗಿ ಧರ್ಮ ಮತ್ತು ಮೌಲ್ಯವನ್ನು ಸಾರಿದರು. ಯಾವ ಭಾಷೆಯನ್ನಾದರೂ ಕಲಿಯಿರಿ. ಆದರೆ ಜನರಾಡುವ ಭಾಷೆಯಲ್ಲಿ ಮಾತನಾಡಿ, ಮೌಲ್ಯಗಳನ್ನು ವಿವರಿಸಿ ಎಂದರು. ಮಾತೃಭಾಷೆ, ತಾಯಿ ಭಾಷೆ, ನಮ್ಮ ನೆಲದ ಭಾಷೆಯಲ್ಲಿ ಬಸವಾದಿ ಶರಣರು ತಮ್ಮ ಅನುಭಾವಗಳನ್ನು ಜನರಿಗೆ ತಿಳಿಸಿದ್ದನ್ನು ವಿವರಿಸಿದರು. ಬಸವಾದಿ ಶರಣರ ಆಶಯ ಮತ್ತು ಮೌಲ್ಯಗಳನ್ನು ನಾನು ಜಾರಿಗೆ ತರಲು ಮುಂದಾದರೆ ಅದಕ್ಕೂ ಅಡ್ಡಿ ಪಡಿಸುವವರು, ವಿರೋಧಿಸುವವರು ಇದ್ದಾರೆ. ಆದ್ದರಿಂದ ಸಮ ಸಮಾಜ ಬೇಕೋ, ಜಾತಿ ಸಮಾಜ ಬೇಕೋ ಎನ್ನುವ ನಿರ್ಧಾರವನ್ನು ನಿಮಗೇ ಬಿಡುತ್ತೇನೆ ಎಂದರು. ದೇವರಿಗೂ ಜನರಿಗೂ ನಡುವೆ ಮಧ್ಯವರ್ತಿಗಳು ಇರಬಾರದು ಎನ್ನುವುದೇ ಬಸವಣ್ಣನವರ ಮಾತಾಗಿತ್ತು. ಅದಕ್ಕೇ ದೇಹವೇ ದೇಗುಲ ಎಂದು ವಚನ ರಚಿಸಿದರು ಎಂದರು. ಬಸವಾದಿ ಶರಣರ ಆಶಯದಂತೆ ಇಷ್ಟಲಿಂಗ ಪೂಜೆ ಮಾಡುವಾಗಲಾದರೂ ಮಧ್ಯವರ್ತಿಗಳು ಇರಬಾರದು ಎಂದರು. ಮನುವಾದಿಗಳು ಬಸವತತ್ವದ ವಿರೋಧಿಗಳು. ಮನುಷ್ಯ ತತ್ವಕ್ಕೆ ವಿರುದ್ಧ ಇರುವವರು ಮನುವಾದಿಗಳು. ಮನುಷ್ಯತ್ವ ಪಾಲಿಸುವವರು ಬಸವವಾದಿಗಳು. ಆಯ್ಕೆ ನಿಮ್ಮದು. ಮನುವಾದಿಗಳು ಬೇಕೋ, ಬಸವವಾದಿಗಳು ಬೇಕೋ ನೀವೇ ನಿರ್ಧರಿಸಿ ಎಂದರು. ಪ್ರಜಾಪ್ರಭುತ್ವ ಹುಟ್ಟಿದ್ದು ಇಂಗ್ಲೆಂಡ್ ನಲ್ಲಿ ಅಲ್ಲ. 900 ವರ್ಷಗಳ ಹಿಂದೆ ಸ್ಥಾಪಿತವಾದ ಅನುಭವ ಮಂಟಪವೇ ಮೊದಲ ಪ್ರಜಾಪ್ರಭುತ್ವ ಕೇಂದ್ರ ಎಂದರು. ಆರ್ಥಿಕ ಅಸಮಾನತೆ ಗುಲಾಮಗಿರಿ ಬೆಳೆಸುತ್ತದೆ. ಸ್ವಾಭಿಮಾನ ಅಳಿಸುತ್ತದೆ. ಕಾಯಕ ಮತ್ತು ದಾಸೋಹ ಬಸವಾದಿ ಶರಣರು ನಮಗೆ ಕೊಟ್ಟಿರುವ ಆರ್ಥಿಕ ಸಿದ್ಧಾಂತ. ಇದನ್ನು ಪಾಲಿಸಿದರೆ ಮಾತ್ರ ಬಸವ ಜಯಂತಿ ಆಚರಣೆಗೆ ಅರ್ಥ ಬರುತ್ತದೆ ಎಂದರು. ಕಲ್ಯಾಣಮ್ಮ ಜನಸ್ಥಳವನ್ನು ಅಭಿವೃದ್ಧಿ ಪಡಿಸಲಾಗಿವುದು, ಬಸವಣ್ಣ ನೀಲಾಂಬಿಕೆಯ ವಿಗ್ರಹವನ್ನೂ ಮಾಡಿಸೋಣ. ಇವೆಲ್ಲವನ್ನೂ ನಾವು ಮಾಡ್ತೀವಿ. ಆದರೆ ನೀವೂ ಸ್ವಲ್ಪ ಬದಲಾಗಿ, ಎಲ್ಲರನ್ನೂ "ಇವ ನಮ್ಮವ" ಎನ್ನಿ ಎಂದು ಕರೆ ನೀಡಿದರು. ಸಚಿವರಾದ ಎಂ.ಬಿ.ಪಾಟೀಲ್, ಆರ್.ಬಿ.ತಿಮ್ಮಾಪುರ, ಶಿವರಾಜ್ ತಂಗಡಗಿ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

# ಭಯೋತ್ಪಾದನೆಯ ಮೂಲೋತ್ಪಾಟನೆಯಾಗಲಿ ಮುಖ್ಯಮಂತ್ರಿ ಸಿದ್ದರಾಮಯ್ಯ

**ಬಾಗಲಕೋಟೆ, ಏ.30:** ಪಾಕಿಸ್ತಾನದ ಮೇಲೆ ಯುದ್ಧ ಅನಿವಾರ್ಯವಾದರೆ ಯುದ್ಧ ಮಾಡಬೇಕು ಅದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಭಯೋತ್ಪಾದನೆಯ ಮೂಲೋತ್ಪಾಟನೆ ಯಾಗಬೇಕು. ಎಲ್ಲರಿಗೂ ಭದ್ರತೆಯನ್ನು ಕೇಂದ್ರ ಸರ್ಕಾರ ಒದಗಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಕೂಡಲ ಸಂಗಮ ಸಭಾಭವನ ಹತ್ತಿರ ಮಾಧ್ಯಮದೊಂದಿಗೆ ಮಾತನಾಡಿದರು. ಹಿಂದೆ ಇಂದಿರಾ ಗಾಂಧಿಯವರು 1971ರಲ್ಲಿ ಯುದ್ಧ ಮಾಡಿ ಪಾಕಿಸ್ತಾನವನ್ನು ಬಗ್ಗು ಬಡಿದಿದ್ದರು. ಪಾಕಿಸ್ತಾನದ ಸುಮಾರು 80 ಸಾವಿರ ಸೈನಿಕರು ಶರಣಾಗತ ರಾಗಿದ್ದರು ಎಂದರು. ಸಾಮಾಜಿಕ ನ್ಯಾಯ ಒದಗಿಸಲು ಸಾಮಾಜಿಕ ಆರ್ಥಿಕ ಸಮೀಕ್ಷೆ ಮುಖ್ಯ ನಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಸಾಮಾಜಿಕ, ಆರ್ಥಿಕ ಮತ್ತು ಜಾತಿಗಣತಿ ಆಗಬೇಕೆಂದು ಹೇಳಿದ್ದು, ಕೇಂದ್ರ ಸರ್ಕಾರ ಜಾತಿಗಣತಿ ಮಾಡುತ್ತಾರೋ ಅಥವಾ ಸಾಮಾಜಿಕ ಆರ್ಥಿಕ ಸಮೀಕ್ಷೆ ಮಾಡುತ್ತಾರೋ ತಿಳಿದಿಲ್ಲ. ಕೇಂದ್ರ ಸರ್ಕಾರ ಜಾತಿ ಮತ್ತು ಜನಗಣತಿ ಮಾಡುವುದಾಗಿ ಹೇಳಿದೆ. ಸಾಮಾಜಿಕ ನ್ಯಾಯ ಒದಗಿಸಲು ಸಾಮಾಜಿಕ ಆರ್ಥಿಕ ಸಮೀಕ್ಷೆ ಯಾಗಬೇಕಿರುವುದು ಬಹಳ ಮುಖ್ಯ ಎಂದರು. ಸಾಮಾಜಿಕ, ಶೈಕ್ಷಣಿಕ ಆರ್ಥಿಕ ಸಮೀಕ್ಷೆಯನ್ನು ಸಚಿವ ಸಂಪುಟದಲ್ಲಿ ಮಂಡಿಸಲಾಗಿದ್ದು, ಈ ಬಗ್ಗೆ ಸಚಿವರು ಲಿಖಿತವಾಗಿ ತಮ್ಮ ಅಭಿಪ್ರಾಯಗಳನ್ನು ಸಲ್ಲಿಸುವುದಾಗಿ ತಿಳಿಸಿದ್ದು, ಅದು ಸಲ್ಲಿಕೆಯಾದ ನಂತರ ಪುನಃ ಸಚಿವ ಸಂಪುಟ ಕರೆದು ಚರ್ಚೆ ಮಾಡುತ್ತೇವೆ ಎಂದರು.



ವಿಜಯಪುರದಲ್ಲಿ ಬುಧವಾರ ಆಯೋಜಿಸಿದ್ದ, ಜಗಜ್ಯೋತಿ ಬಸವೇಶ್ವರರ ಜಯಂತ್ಯೋತ್ಸವ ಅಂಗವಾಗಿ ಕೆ.ಪ್ರಕಾಶ ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು ವಿಜಯಪುರ, ಎಸ್.ಕೆ. ಶಹಾಪೂರ ವಾಣಿಜ್ಯ ತೆರಿಗೆಗಳ ಸಹಾಯಕಆಯುಕ್ತರು, ಬಿ.ಜಿ.ಚಿಮ್ಮಲಗಿ ವಾಣಿಜ್ಯ ತೆರಿಗೆಗಳ ಸಹಾಯಕಆಯುಕ್ತರು, ಎಸ್.ಟಿ.ಕನಕ ವಾಣಿಜ್ಯ ತೆರಿಗೆಗಳ ಸಹಾಯಕಆಯುಕ್ತರು, ಕಾಳಪ್ಪ ಬಡಿಗೇರ ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು, ವಾಣಿಜ್ಯ ತೆರಿಗೆ ಅಧಿಕಾರಿ ಸಿದ್ಧರಾಮ ಸಂಗೋಳಗಿ, ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

# ಯುವಕನ ಹತ್ಯೆ ಪ್ರಕರಣ: 20 ಮಂದಿ ಬಂಧನ

**ಬೆಂಗಳೂರು,ಏ.30:** ಮಂಗಳೂರು: ಕ್ರಿಕೆಟ್ ಪಂದ್ಯದ ವೇಳೆ ಪ್ರೇಕ್ಷಕರ ಮುಂದೆ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದ್ದಕ್ಕಾಗಿ ಮಂಗಳೂರಿನ ಕುಡುಪುವಿನ ಅಶ್ರಫ್ ಎಂಬ ಯುವಕನನ್ನು ಗುಂಪೊಂದು ಥಳಿಸಿ ಕೊಂದಿದೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ 20 ಜನರನ್ನು ಅರೆಸ್ಟ್ ಮಾಡಿದ್ದಾರೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ಮಾಹಿತಿ ನೀಡಿದ್ದಾರೆ.



ಏಪ್ರಿಲ್ 27ರಂದು ಸಂಜೆ ಸುಮಾರು 5:30 ಸುಮಾರಿಗೆ ಮಂಗಳೂರಿನ ಕುಡುಪು ಭಟ್ರಕಲ್ಲುರ್ಟಿ ದೈವಸ್ಥಾನದ ಸಮೀಪ ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆಯಾಗಿತ್ತು. ತಕ್ಷಣ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ, ಅನುಮಾನಾಸ್ಪದ ಅಸ್ವಾಭಾವಿಕ ಸಾವು ಪ್ರಕರಣ ದಾಖಲಿಸಿದ್ದರು. ಮರಣೋತ್ತರ ಪರೀಕ್ಷೆಯಲ್ಲಿ ಮೃತನ ಬೆನ್ನಿಗೆ ಬಲವಾದ ಹೊಡೆತ ಬಿದ್ದು, ರಕ್ತಸ್ರಾವ, ಶಾಕ್ ನಿಂದ ಸೂಕ್ತ ಸಮಯದಲ್ಲಿ ಚಿಕಿತ್ಸೆ ಸಿಗದೆ ಆತ ಸಾವನ್ನಪ್ಪಿದ್ದಾನೆ ಎಂದು ತಿಳಿದು ಬಂದಿತ್ತು.ಇದೀಗ ಘಟನೆ ಬಗ್ಗೆ ಮಾಹಿತಿ ನೀಡಿರುವ ಗೃಹ ಸಚಿವರು, ಮಂಗಳೂರಲ್ಲಿ ವ್ಯಕ್ತಿಯನ್ನು ಕೊಲೆ ಮಾಡಿದ್ದಾರೆ. ಪಾಕಿಸ್ತಾನ್ ಜಿಂದಾಬಾದ್ ಎಂದವನನ್ನು ಕೊಲೆ ಮಾಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ 20 ಜನ ಅರೆಸ್ಟ್ ಆಗಿದ್ದಾರೆ. ಆ ವ್ಯಕ್ತಿ ಎಲ್ಲಿಂದ ಬಂದ ಎಂಬ ಬಗ್ಗೆ ತನಿಖೆ ಮಾಡುತ್ತಿದ್ದೇವೆ ಎಂದರು.ಈ ವಿಚಾರವನ್ನು ಗಂಭೀರವಾಗಿ ತೆಗೆದುಕೊಂಡಿದ್ದೇವೆ. ಕ್ರಿಕೆಟ್ ಆಡಲು ಹೋದವರು ತುಂಬಾ ಜನ ಇದ್ದರು. ಅವರೆಲ್ಲರನ್ನು ಕರೆದು ಹೇಳಿಕೆಗಳನ್ನು ತೆಗೆದುಕೊಳ್ಳಲಾಗಿದೆ. ತನಿಖೆ ಇನ್ನೂ ನಡೆಯುತ್ತಿದೆ. ಘಟನೆಯ ಇಡೀ ರಿಪೋರ್ಟ್ ಬಂದ ಮೇಲೆ ವಿಚಾರ ಬಹಿರಂಗಪಡಿಸುತ್ತೇನೆ ಎಂದು ಅವರು ತಿಳಿಸಿದರು.

## ಪಾಕಿಸ್ತಾನದ ಪರ ಘೋಷಣೆ ದೇಶದ್ರೋಹ: ಮುಖ್ಯಮಂತ್ರಿ

ಪಾಕಿಸ್ತಾನದ ಪರವಾಗಿ ಯಾರೇ ಮಾತನಾಡಿದರೂ ಅದು ದೇಶದ್ರೋಹ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಆದಾಗ್ಯೂ, ಮಂಗಳೂರಿನಲ್ಲಿ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ ಆರೋಪದ ಮೇಲೆ ವ್ಯಕ್ತಿಯೊಬ್ಬನನ್ನು ಗುಂಪು ಥಳಿಸಿ ಹತ್ಯೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು.ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದ್ದರೆ ಅದು ತಪ್ಪು, ಅದು ಯಾರೇ ಆಗಿರಲಿ. ವಿಚಾರಣೆ ಇನ್ನೂ ನಡೆಯುತ್ತಿದೆ. ಪ್ರಕರಣ ದಾಖಲಿಸಲಾಗಿದೆ. ವರದಿ ಬರಲಿ. ಯಾರ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಬೇಕು ಎಂಬುದು ಸ್ಪಷ್ಟವಾಗುತ್ತದೆ ಎಂದು 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ್ದಕ್ಕಾಗಿ ಮಂಗಳೂರಿನಲ್ಲಿ ವ್ಯಕ್ತಿಯೊಬ್ಬನನ್ನು ಹತ್ಯೆ ಮಾಡಿದ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಸಿದ್ದರಾಮಯ್ಯ ಉತ್ತರಿಸಿದರು.



## ದುಷ್ಕರ್ಮಿಗಳು ಕೃತ್ಯದಲ್ಲಿ ಭಾಗಿ: ಹೆಡೆಮುರಿ ಕಟ್ಟುವುದು ಖಚಿತ

ಇನ್ನೂ ಕೆಲವು ದುಷ್ಕರ್ಮಿಗಳು ಈ ಕೃತ್ಯದಲ್ಲಿ ಭಾಗಿಯಾಗಿದ್ದು ಅವರ ಹೆಡೆಮುರಿ ಕಟ್ಟುವುದು ಖಂಡಿತ ಎಂಬುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.ಈ ಬಗ್ಗೆ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವಂತ ಅವರು, ಕೊಲೆ ಪ್ರಕರಣವನ್ನು ತ್ವರಿತವಾಗಿ ಬೇಧಿಸಿ ಆರೋಪಗಳನ್ನು ಬಂಧಿಸಿದ ಮಂಗಳೂರು ಪೊಲೀಸರಿಗೆ ನಾನು ಅಭಿನಂದನೆ ಸಲ್ಲಿಸುತ್ತೇನೆ. ಅದೇ ರೀತಿ ಜಿಲ್ಲೆಯ ಸೌಹಾರ್ದತೆ ಕಾಪಾಡುವುದು ಕೂಡ ಪೊಲೀಸರ ಜವಾಬ್ದಾರಿ. ಈ ಘಟನೆಯ ಬಳಿಕ ಕೆಲ ಸಮಾಜಘಾತಕ ಶಕ್ತಿಗಳು ದ್ವೇಷ ಹರಡುವ ಪ್ರಯತ್ನ ನಡೆಸುವ ಸಾಧ್ಯತೆಯಿದೆ. ಕೋಮು ಸಂಘರ್ಷ ಹುಟ್ಟು ಹಾಕುವ ಮೂಲಕ ನಮ್ಮ ಸರ್ಕಾರಕ್ಕೆ ಕೆಟ್ಟ ಹೆಸರು ತರಬೇಕೆನ್ನುವುದು ಕೆಲ ಪಟ್ಟಭದ್ರ ಹಿತಾಸಕ್ತಿಗಳ ಉದ್ದೇಶವಾಗಿದೆ. ಕಾನೂನು ಕೈಗೆತ್ತಿಕೊಳ್ಳುವ, ಸಮಾಜದ ಸ್ವಾಸ್ಥ್ಯ ಕೆಡಿಸುವ, ಸಾಮರಸ್ಯಕ್ಕೆ ಕೊಳ್ಳಿ ಇಡುವ ಯಾವುದೇ ದುಷ್ಟ ಪ್ರಯತ್ನಕ್ಕೆ ನಮ್ಮ ಸರ್ಕಾರ ಅವಕಾಶ ಮಾಡಿಕೊಡುವುದಿಲ್ಲ.






ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಫೈನಾನ್ಸಿಯಲ್ ಎಕ್ಸ್‌ಪ್ರೆಸ್ ಮೊಬಿಲಿಟಿ 2025ರ ರಾಷ್ಟ್ರೀಯ ಪ್ರಶಸ್ತಿಯನ್ನು ಅತ್ಯುತ್ತಮ ಸಾರ್ವಜನಿಕ ಸಾರಿಗೆ ಉಪಕ್ರಮದಡಿ ಪಡೆದಿದೆ. ನಿಗಮಕ್ಕೆ ಫೈನಾನ್ಸಿಯಲ್ ಎಕ್ಸ್‌ಪ್ರೆಸ್ ಮೊಬಿಲಿಟಿ ಪ್ರಶಸ್ತಿಯನ್ನು ಅತ್ಯುತ್ತಮ ಸಂಪರ್ಕ, ಸಾರ್ವಜನಿಕ ಲಭ್ಯತೆ ಹಾಗೂ ಉತ್ತಮ ಸಾರ್ವಜನಿಕ ಸಾರಿಗೆ ಸೇವೆಗಾಗಿ ನೀಡಲಾಗಿರುತ್ತದೆ. ಬುಧವಾರ ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ, ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಈ ಪ್ರಶಸ್ತಿಯನ್ನು ನಿಗಮದ ಮುಖ್ಯ ತಾಂತ್ರಿಕ ಶಿಲ್ಪಿ ಕೆ.ಎಚ್ ಶ್ರೀನಿವಾಸ್ ಅವರಿಗೆ ಪ್ರದಾನ ಮಾಡಿದರು.

# ಪಕ್ಷದಿಂದ ಸಿಎಂ ಉಚ್ಚಾಟನೆ ಮಾಡೋ ಧಮ್ ಇದೆಯೇ: ಅಶೋಕ್ ಪ್ರಶ್ನೆ

**ಬೆಂಗಳೂರು, ಏ,30;** ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸಿದ್ದ ಸಿದ್ದರಾಮಯ್ಯ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡೋ ಧಮ್ ಇದೆಯಾ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಉಪಮುಖ್ಯ ಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.



ಈ ಬಗ್ಗೆ ಟ್ವೀಟ್ ಮಾಡಿರುವ ಅವರು, ಉತ್ತರನ ಪೌರುಷ ಒಲೆಯ ಮುಂದೆ ಎನ್ನುವ ಹಾಗೆ ನಿಮ್ಮ ಪ್ರತಾಪ ಬರೀ ಮಾಧ್ಯಮಗಳ ಮುಂದೆ ಡೈಲಾಗ್ ಹೊಡೆಯೋದಕ್ಕೆ ಮಾತ್ರ ಸೀಮಿತನಾ. ರಾಜ್ಯದಲ್ಲಿ ಬಿಜೆಪಿಗೆ ಒಂದೇ ಒಂದು ಸಭೆ ಮಾಡಲೂ ಬಿಡುವುದಿಲ್ಲ ಎಂದು ಧಮ್ಕಿ ಹಾಕಿದ್ದೀರಲ್ಲ, ನಿಮಗೆ ನಿಜವಾಗಿಯೂ ತಾಕತ್ತಿದ್ದರೆ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರಿಗೆ ಕಪ್ಪು ಬಾವುಟ ತೋರಿಸಿದ್ದ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ ಪಕ್ಷದಿಂದ ಉಚ್ಚಾಟನೆ ಮಾಡಿ ನೋಡೋಣ ಎಂದು ಸವಾಲು ಹಾಕಿದ್ದಾರೆ. ನಿಮ್ಮ ಪಕ್ಷದ ಸರ್ವೋಚ್ಚ ನಾಯಕಿ ಪ್ರಧಾನಿ ಆಗಿದ್ದಾಗ ಕಪ್ಪು ಬಾವುಟ ತೋರಿಸಿದ್ದ ವ್ಯಕ್ತಿಯನ್ನು ಪಕ್ಷಕ್ಕೆ ಕರೆತಂದು ಎರಡು ಬಾರಿ ಮುಖ್ಯಮಂತ್ರಿ ಮಾಡಿ, ಅವರ ಋಣದಲ್ಲಿ ಅಧಿಕಾರ ಅನುಭವಿಸುತ್ತಿದ್ದೀರಲ್ಲ, ಬಿಜೆಪಿ ಮಾಡುವ ಪ್ರತಿಭಟನೆಗೆ ಧಮ್ಕಿ ಹಾಕುವ ಯಾವ ನೈತಿಕತೆ ನಿಮಗಿದೆ ಎಂದಿದ್ದಾರೆ.

## ಬಿಬಿಎಂಪಿ ನೂತನ ಮುಖ್ಯ ಆಯುಕ್ತರಾಗಿ ಮಹೇಶ್ವರ ರಾವ್ ಆಡಳಿತಗಾರಾಗಿ ತುಷಾರ್ ಗಿರಿನಾಥ್ ಅಧಿಕಾರ ಸ್ವೀಕಾರ

**ಬೆಂಗಳೂರು, ಏ.30:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನೂತನ ಆಡಳಿತಗಾರರಾಗಿ ತುಷಾರ್ ಗಿರಿನಾಥ್ ಹಾಗೂ ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್ ಸರ್ಕಾರದಿಂದ ನೇಮಕ ಗೊಂಡಿದ್ದು, ಇಂದು ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದರು.



ರಾಜ್ಯ ಸರ್ಕಾರದಿಂದ ಬಿಬಿಎಂಪಿ ಮುಖ್ಯ ಆಯುಕ್ತರಾಗಿದ್ದ ತುಷಾರ್ ಗಿರಿನಾಥ್ ಅವರನ್ನು ವರ್ಗಾವಣೆ ಮಾಡಿ ಆದೇಶಿಸಿತ್ತು. ಅವರ ಸ್ಥಾನಕ್ಕೆ ಮಹೇಶ್ವರ್ ರಾವ್ ಅವರನ್ನು ನೇಮಕ ಮಾಡಿತ್ತು. ಈ ಹಿನ್ನೆಲೆಯಲ್ಲಿ ಇಂದು ಬಿಬಿಎಂಪಿಯ ಮುಖ್ಯ ಆಯುಕ್ತರ ಕಚೇರಿಯಲ್ಲಿ ನೂತನ ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್ ಅವರು. ಅಧಿಕಾರ ಸ್ವೀಕರಿಸಿದರು. ಅಲ್ಲದೇ ಬಿಬಿಎಂಪಿಯ ನೂತನ ಆಡಳಿತಗಾರರಾಗಿ ತುಷಾರ್ ಗಿರಿನಾಥ್ ಅವರು ಕೂಡ ಅಧಿಕಾರ

ಈ ಸಂದರ್ಭದಲ್ಲಿ ವಿಶೇಷ ಆಯುಕ್ತ ಅವಿನಾಶ್ ಮೆನನ್ ರಾಜೇಂದ್ರನ್, ವಲಯ ಆಯುಕ್ತ ಕರೀಗೌಡ, ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಪ್ರಹ್ಲಾದ್ ಮತ್ತಿತರರು ಉಪಸ್ಥಿತರಿದ್ದರು.

# 12,692 ಪೌರ ಕಾರ್ಮಿಕರ ನೇಮಕ: ಆದೇಶ ಪತ್ರ ವಿತರಣೆ

**ಬೆಂಗಳೂರು,ಏ.30:** ಕಾರ್ಮಿಕರ ದಿನಾಚರಣೆ ಆದ ನಾಳೆ(ಮೇ.1) ಬಿಬಿಎಂಪಿಯಲ್ಲಿ ಗುತ್ತಿಗೆ ಮತ್ತು ನೇರ ವೇತನದಲ್ಲಿ ಕೆಲಸ ಮಾಡುತ್ತಿರುವ 12,692 ಪೌರ ಕಾರ್ಮಿಕರನ್ನು ನೇಮಕ ಆದೇಶ ಪತ್ರಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯಸಭಾ ವಿರೋಧ ಪಕ್ಷದ ನಾಯಕ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಿತರಣೆ ಮಾಡಲಿದ್ದಾರೆ. ನಾಳೆ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಪಾಲಿಕೆ ವತಿಯಿಂದ ಪೌರ–ಕಾರ್ಮಿಕರ ದಿನಾಚರಣೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನೇರ ವೇತನದಡಿ ಕರ್ತವ್ಯ ನಿರ್ವಹಿಸುತ್ತಿರುವ 12,692 ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಿಸುವ ಅಭೂತಪೂರ್ವ ಹಾಗೂ ಐತಿಹಾಸಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಇನ್ನೂ, ಪೌರ ಕಾರ್ಮಿಕರ ಸೇವೆ ಕಾಯಂ ಆದ ತಕ್ಷಣವೇ ವೇತನವು 17 ಸಾವಿರ ರೂ. ನಿಂದ 32–33 ಸಾವಿರ ರೂ.ಗಳಿಗೆ ಏರಿಕೆಯಾಗುತ್ತದೆ. ಗ್ರೂಪ್ ?ಡಿ? ವೃಂದಕ್ಕೆ ಸೇರ್ಪಡೆಯಾಗುತ್ತಾರೆ.

**ವಲಯವಾರು ಆಯ್ಕೆ ಪಟ್ಟಿ**

- *ಪೂರ್ವ–2,341
- *ಪಶ್ಚಿಮ–2,564
- *ದಕ್ಷಿಣ–3,012
- *ಬೊಮ್ಮನಹಳ್ಳಿ–1,019
- *ಆರ್.ಆರ್.ನಗರ–1,118
- *ಮಹದೇವಪುರ–1,369
- *ದಾಸರಹಳ್ಳಿ–468
- *ಮಹದೇವಪುರ–1,367
- ಒಟ್ಟು–12,692

ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರೇ ಪೌರ ಕಾರ್ಮಿಕರ ವೇತನವನ್ನು 17 ಸಾವಿರಕ್ಕೆ ಏರಿಕೆ ಮಾಡಿ, ನೇರ ಪಾವತಿ ವ್ಯವಸ್ಥೆ ಜಾರಿಗೆ ತಂದರು. ಆ ಮೂಲಕ ಗುತ್ತಿಗೆದಾರರ ಸಂಕೋಲೆಯಲ್ಲಿದ್ದ ಪೌರ ಕಾರ್ಮಿಕರನ್ನು ವಿಮುಕ್ತಿಗೊಳಿಸಿದರು. ಗುತ್ತಿಗೆದಾರರಡಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಪೌರ ಕಾರ್ಮಿಕರು ಸಾಕಷ್ಟು ಶೋಷಣೆಗೀಡಾಗುತ್ತಿದ್ದರು. ಸೂಕ್ತ ಸಂಬಳ, ಇಎಸ್‌ಐ, ಪಿಎಫ್ ಸೌಲಭ್ಯವಿಲ್ಲದಿಂದ ವಂಚಿತರಾಗಿದ್ದರು.

# ಎಸ್.ಎಂ.ಕೃಷ್ಣ ಹೆಸರಲ್ಲಿ 8 ದತ್ತಿನಿಧಿ ಸ್ಥಾಪನೆ: ದಿನೇಶ್ ಗೂಳಿಗೌಡ

**ಬೆಂಗಳೂರು,ಏ.30:** ರಾಜ್ಯದ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಿರಿಯ ಮುತ್ಸದ್ದಿ ನಾಯಕರಾಗಿದ್ದ ಎಸ್.ಎಂ.ಕೃಷ್ಣ ರವರು 1932ರ ಮೇ 1ರಂದು ಜನಿಸಿದ್ದು, ಅವರ 93ನೇ ಹುಟ್ಟುಹಬ್ಬದ ಸವಿನೆನಪಿನಲ್ಲಿ ಮಂಡ್ಯ ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಅವರ ಅಭಿಮಾನಿಗಳು ಅವರ ಹೆಸರನ್ನು ಚಿರಸ್ಥಾಯಿಗೊಳಿಸಲು ಪ್ರತಿವರ್ಷ ವಿವಿಧ ಕ್ಷೇತ್ರದ ಸಾಹಿತಿಗಳು, ಗಣ್ಯರು. ರೈತರು, ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲು ದತ್ತಿನಿಧಿಗಳನ್ನು ಸ್ಥಾಪಿಸಿದ್ದಾರೆ.

ಮಂಡ್ಯ ಜಿಲ್ಲೆಯಲ್ಲಿ ಹುಟ್ಟಿ ಅದನ್ನು ಕರ್ಮ ಭೂಮಿಯಾಗಿಸಿಕೊಂಡು ರಾಜ್ಯ ಹಾಗೂ ರಾಷ್ಟ್ರದ ಹಲವು ಸಾಂವಿಧಾನಿಕ ಹುದ್ದೆಗಳನ್ನು ಅಲಂಕರಿಸಿದ್ದ ಎಸ್.ಎಂ. ಕೃಷ್ಣ ರವರು ಒಬ್ಬ ಆದರ್ಶನೀಯ ಜನನಾಯಕರಾಗಿ ಬೆಳೆದವರು. ಬೆಂಗಳೂರನ್ನು ಐಟಿ ರಾಜಧಾನಿಯಾಗಿ ಮಾಡಿ ಪ್ರಪಂಚವನ್ನು ಬೆಂಗಳೂರು ಕಡೆಗೆ ತಿರುಗುವಂತೆ ಮಾಡಿ ಲಕ್ಷಾಂತರ ಉದ್ಯೋಗ ಸೃಷ್ಟಿಸಿ ರಾಜ್ಯದ ಅಭಿವೃದ್ಧಿಗೆ ಹೊಸ ಭಾಷ್ಯ ಬರೆದ ಶ್ರೀಯುತರ ಜೀವನ ಯುವ ಪೀಳಿಗೆಗೆ ದಾರಿದೀಪ.

ತುಂಬು ಜೀವನ ನಡೆಸಿ ಕಳೆದ ಡಿಸೆಂಬರ್‌ನಲ್ಲಿ ಭೌತಿಕವಾಗಿ ಅಗಲಿದ ಎಸ್.ಎಂ. ಕೃಷ್ಣ ರವರ ಸಾಧನೆ ಮತ್ತು ಅವರ ಬದುಕನ್ನು ಸದಾ ಹಸಿರಾಗಿಡುವ ಸದುದ್ದೇಶದಿಂದ ಅವರ ಹೆಸರಿನಲ್ಲಿ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ ಸೇರಿದಂತೆ ಹಲವು ಶಾಸಕರು ದಿವ್ಯ ಚೇತನ ಎಸ್.ಎಂ.ಕೃಷ್ಣ ದತ್ತಿನಿಧಿ ಸ್ಥಾಪಿಸಿ ಅದನ್ನು ಈ ಕೆಳಕಂಡ ವಿಶ್ವವಿದ್ಯಾನಿಲಯಗಳು ಮತ್ತು ಪ್ರತಿಷ್ಠಿತ ಸಂಸ್ಥೆಗಳು ಪ್ರತಿವರ್ಷ ದತ್ತಿನಿಧಿಯಿಂದ ಬರುವ ಹಣದಿಂದ ತಲಾ ಒಬ್ಬರಿಗೆ ಪ್ರಶಸ್ತಿ ಅಥವಾ ಉತ್ತಮ ವಿದ್ಯಾರ್ಥಿಗಳಿಗೆ ಚಿನ್ನದ ಪದಕವನ್ನು ಎಸ್.ಎಂ. ಕೃಷ್ಣ ಅವರ ಹೆಸರಿನಲ್ಲಿ ನೀಡಲು ಕ್ರಮವಹಿಸಲಾಗಿದೆ.

**ಮಂಡ್ಯ ಜಿಲ್ಲೆಯ ಸಚಿವರು, ಶಾಸಕರು ದಿವ್ಯ ಚೇತನ ಎಸ್.ಎಂ.ಕೃಷ್ಣರವರ ಹೆಸರಿನಲ್ಲಿ ದತ್ತಿ ನಿಧಿ ಸ್ಥಾಪಿಸಿರುವ ವಿವರಗಳು ಈ ಕೆಳಕಂಡಂತೆ ಇವೆ.**

1. ಎನ್.ಚೆಲುವರಾಯ ಸ್ವಾಮಿ, ಸಚಿವರು, ಮಂಡ್ಯ ಉಸ್ತುವಾರಿ: ಗಾಂಧಿ ಕೃಷಿ ವಿಶ್ವ ವಿದ್ಯಾನಿಲಯ (ಜಿಕೆವಿಕೆ)ಬೆಂಗಳೂರು ಪ್ರಗತಿಪರ ರೈತನಿಗೆ (ದತ್ತಿ ನಿಧಿ 5 ಲಕ್ಷ ರೂ.ಗಳು)

2.ಎನ್.ಚೆಲುವರಾಯ ಸ್ವಾಮಿ, ಸಚಿವರು, ಮಂಡ್ಯ ಉಸ್ತುವಾರಿಗಳು: ಕರ್ನಾಟಕ ಸಂಘ, ಮಂಡ್ಯ ಸಮಾಜ ಸೇವೆಗಾಗಿ ಉತ್ತಮ ಪ್ರಶಸ್ತಿ (ದತ್ತಿ ನಿಧಿ 5 ಲಕ್ಷ ರೂ.ಗಳು)

3. ಕೆ.ಎಂ.ಉದಯ್, ಶಾಸಕರು, ಮದ್ದೂರು ಕ್ಷೇತ್ರ: ಮೈಸೂರು ವಿಶ್ವ ವಿದ್ಯಾನಿಲಯದಲ್ಲಿ ಪ್ರಥಮ ರಂಟಜ ಟಜಜಚಿಟ ತೆಗೆದುಕೊಂಡ ಇಬ್ಬರು ವಿದ್ಯಾರ್ಥಿಗಳಿಗೆ ಚಿನ್ನದ ಪದಕ. (ದತ್ತಿ ನಿಧಿ 10 ಲಕ್ಷ ರೂ.)

4. ಪಿ.ಎಂ.ನರೇಂದ್ರ ಸ್ವಾಮಿ, ಶಾಸಕರು, ಅಧ್ಯಕ್ಷರು, ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಮಳವಳ್ಳಿ ವಿಧಾನಸಭಾ ಕ್ಷೇತ್ರ:

ಕಾನೂನು ವಿಶ್ವವಿದ್ಯಾನಿಲಯದಲ್ಲಿ ಪ್ರಥಮ ಸ್ಥಾನಗಳಿಸಿದ ವಿದ್ಯಾರ್ಥಿಗೆ ಚಿನ್ನದ ಪದಕ (ದತ್ತಿ ನಿಧಿ 5 ಲಕ್ಷ ರೂ.ಗಳು)

5. ಎ. ಬಿ. ರಮೇಶ್ ಬಂಡಿಸಿದ್ದೇಗೌಡ, ಶಾಸಕರು, ಅಧ್ಯಕ್ಷರು, ಚಾಮುಂಡೇಶ್ವರಿ ವಿದ್ಯುತ್ ನಿಗಮ:

ಕರ್ನಾಟಕ ಚಿತ್ರಕಲಾ ಪರಿಷತ್ ವತಿಯಿಂದ ಪ್ರತಿ ವರ್ಷ ಒಬ್ಬರು ಉತ್ತಮ ಚಿತ್ರಕಲಾವಿದರಿಗೆ ನಗದು ಮತ್ತು ಪ್ರಶಸ್ತಿ ಪತ್ರ (ದತ್ತಿ ನಿಧಿ 5 ಲಕ್ಷ ರೂ.ಗಳು)



6. ರವಿಕುಮಾರ್ ಗಣಿಗ, ಶಾಸಕರು. ಮಂಡ್ಯ ಕ್ಷೇತ್ರ:

ಮಂಡ್ಯ ವಿಶ್ವ ವಿದ್ಯಾನಿಲಯದಲ್ಲಿ ರಂಟಜ ಟಜಜಚಿಟ ಪಡೆದ ವಿದ್ಯಾರ್ಥಿಗೆ ಚಿನ್ನದ ಪದಕ (ದತ್ತಿ ನಿಧಿ 5 ಲಕ್ಷ ರೂ.ಗಳು)

7. ಸ್ಟಾರ್ ಚಂದ್ರು (ವೆಂಕಟರಮಣೇಗೌಡ) ಸಮಾಜ ಸೇವಕರು, ಲೋಕಸಭಾ ಅಭ್ಯರ್ಥಿ:

ಕಸಾಪ ಪ್ರತಿ ವರ್ಷ ಒಬ್ಬ ಸಾಹಿತಿಗೆ ನಗದು, ಪ್ರಶಸ್ತಿ ಪತ್ರ ನೀಡಿ ಗೌರವಿಸುವುದು (ದತ್ತಿ ನಿಧಿ 5 ಲಕ್ಷ ರೂ.ಗಳು)

8. ದಿನೇಶ್ ಗೂಳಿಗೌಡ, ಶಾಸಕರು, ಕರ್ನಾಟಕ ವಿಧಾನ ಪರಿಷತ್, ಮಂಡ್ಯ ಜಿಲ್ಲೆ:

ರಾಮಕೃಷ್ಣ ಆಶ್ರಮ ಮೈಸೂರು. ಇಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗೆ ಪ್ರತಿ ವರ್ಷ ಪ್ರಥಮ ಸ್ಥಾನ ಪಡೆದವರಿಗೆ ಚಿನ್ನದ ಪದಕ. (ದತ್ತಿ ನಿಧಿ 5 ಲಕ್ಷ ರೂ.ಗಳು)

ಎಸ್.ಎಂ ಕೃಷ್ಣರವರ ಹೆಸರಿನಲ್ಲಿ ಪ್ರತಿ ವರ್ಷ ಒಬ್ಬ ಪ್ರಗತಿಪರ ರೈತನಿಗೆ, ಸಮಾಜಮುಖಿ ಸೇವೆ ಸಲ್ಲಿಸಿದ ಒಬ್ಬರಿಗೆ, ಮೈಸೂರು ವಿಶ್ವವಿದ್ಯಾನಿಲಯ, ಕಾನೂನು ವಿಶ್ವವಿದ್ಯಾನಿಲಯ, ಚಿತ್ರಕಲಾ ಪರಿಷತ್, ಮಂಡ್ಯ ವಿಶ್ವ ವಿದ್ಯಾನಿಲಯ, ಕನ್ನಡ ಸಾಹಿತ್ಯ ಪರಿಷತ್, ರಾಮಕೃಷ್ಣ ಆಶ್ರಮ ವತಿಯಿಂದ ಶ್ರೀಯುತರ ಹೆಸರಿನಲ್ಲಿ ಆಯಾ ಸಂಸ್ಥೆಗಳು ಪ್ರಶಸ್ತಿ ನೀಡಿ ಗೌರವಿಸಲು ಸಂಬಂಧ ಪಟ್ಟ ಸಂಸ್ಥೆಗಳಿಗೆ ಡಿಡಿ ಮುಖಾಂತರ ಠೇವಣಿಯನ್ನು ಕಳುಹಿಸಿಕೊಡಲಾಗಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಜಗತ್ತಿನ ಮೊದಲ ಸಂಸತ್ ರಚನೆಗೆ ಶ್ರೀಕಾರ ಹಾಡಿದ್ದ ಬಸವಣ್ಣ



**ನವದೆಹಲಿ, ಏ.30:** ಹನ್ನೆರಡನೇ ಶತಮಾನದಲ್ಲೇ ಜಗಜ್ಯೋತಿ ಬಸವಣ್ಣ ಅವರು ಅನುಭವ ಮಂಟಪದ ಮೂಲಕ ಮೊದಲ ಸಂಸತ್ ರಚನೆಗೆ ಶ್ರೀಕಾರ ಹಾಡಿದರು ಎಂದು ಕೇಂದ್ರ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಸ್ಮರಿಸಿದರು.

ನವದೆಹಲಿಯಲ್ಲಿ ಇಂದು ಬಸವ ಜಯಂತಿ ಪ್ರಯುಕ್ತ ಜಗಜ್ಯೋತಿ ಬಸವೇಶ್ವರರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ, ಪ್ರಸ್ತುತ ಸಮಾಜಕ್ಕೆ ಬಸವೇಶ್ವರರ ತತ್ವಾದರ್ಶಗಳು ಅತ್ಯಗತ್ಯವಾಗಿವೆ ಎಂದು ಪ್ರತಿಪಾದಿಸಿದರು. ಬಸವಣ್ಣನವರು 12ನೇ ಶತಮಾನದಲ್ಲಿಯೇ ಜಗತ್ತಿನ ಮೊದಲ ಸಂಸತ್ ಆಗಿ ಅನುಭವ ಮಂಟಪ ನಿರ್ಮಿಸಿ ವಿವಿಧ ಕ್ಷೇತ್ರಗಳಲ್ಲಿ ಅನುಭವ ಹಂಚಿಕೊಳ್ಳಲು ಅನುವು ಮಾಡಿಕೊಟ್ಟ ಕೀರ್ತಿಗೆ ಪಾತ್ರರಾದರು. ಅಂದಿನ ಅನುಭವ ಮಂಟಪದಲ್ಲಿ ಸಮಾಜ ಸುಧಾರಣೆ ಬಗ್ಗೆ ನಡೆಸುತ್ತಿದ್ದ ಚಿಂತನ–ಮಂಥನ, ಚರ್ಚೆ ಅವಿಸ್ಮರಣೀಯ ಎಂದು ಬಣ್ಣಿಸಿದರು.

ಸಮಾಜದಲ್ಲಿನ ಶೋಷಣೆ, ಜಾತೀಯತೆ ತೊಡೆದು ಹಾಕಿ, ಕಾಯಕ ತತ್ವ, ಸ್ತ್ರೀ ಸಮಾನತೆ, ಲಿಂಗಪೂಜೆ ಹೀಗೆ ಸಾಮಾಜಿಕ, ಸಾಂಸ್ಕೃತಿಕ–ಧಾರ್ಮಿಕ ಸೌಹಾರ್ದತೆಗೆ ಒತ್ತು ನೀಡಿ ಲೋಕೋದ್ಧಾರಕ್ಕೆ ಶ್ರಮಿಸಿದ ಮತ್ತು ಪ್ರಜಾಪ್ರಭುತ್ವವನ್ನು ಪ್ರತಿಪಾದಿಸಿದ ನಿಜಶರಣ ಕಾಯಕಯೋಗಿ, ಜಗಜ್ಯೋತಿ ಬಸವೇಶ್ವರರು ಎಂದು ಸಚಿವ ಜೋಶಿ ಹೇಳಿದರು. ದೆಹಲಿಯ ನೂತನ ಸಂಸತ್ ಭವನದ ಭೂಮಿಪೂಜೆ ನೆರವೇರಿಸಿದ್ದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಜಗಜ್ಯೋತಿ ಬಸವೇಶ್ವರರ ಅನುಭವ ಮಂಟಪದ ಪ್ರೇರಣೆಯೇ ಸುಂದರ ಸಂಸತ್ ಭವನ ನಿರ್ಮಾಣಕ್ಕೆ ನಾಂದಿಯಾಯಿತೆಂದು ಸ್ಮರಿಸಿದ್ದನ್ನು ಸಚಿವರು ಪ್ರಸ್ತಾಪಿಸಿದರು.

ದಾರ್ಶನಿಕ ಬಸವಣ್ಣನವರು ಸಾಮಾಜಿಕ ಕ್ರಾಂತಿಯ ಹರಿಕಾರರು. ಅವರ ತತ್ವಾದರ್ಶಗಳು ಆಚರಣೆಗಷ್ಟೇ ಸೀಮಿತವಾಗಬಾರದು. ಪ್ರತಿಯೊಬ್ಬರೂ ಅನುಸರಿಸಬೇಕು. ಜಾತಿರಹಿತ ಸಮಾಜ ನಿರ್ಮಾಣಕ್ಕೆ ಮೇಲ್ಪಂಕ್ತಿ ಹಾಕಿದ್ದಲ್ಲದೆ, ಸಮ ಸಮಾಜದ ಪರಿಕಲ್ಪನೆ ಹೊಂದಿದ್ದರು. ಅಂಥವರ ಜೀವನಾದರ್ಶ ನಮಗೆ ಮಾದರಿಯಾಗಿದೆ ಎಂದು ಹೇಳಿದರು.

12ನೇ ಶತಮಾನದಲ್ಲಿ ಬಸವಾದಿ ಶರಣರು ಸಮಾಜ ಸುಧಾರಣೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟರು. ಆದರೆ, ಇಂದು ನ್ಯಾಯ ಮತ್ತು ಮಾನವೀಯ ಮೌಲ್ಯಗಳೇ ಸಮಾಜದಿಂದ ಮರೆಯಾಗುತ್ತಿವೆ. ಇಂಥ ಸಂದರ್ಭದಲ್ಲಿ ಶರಣರ ಆಶೀರ್ವಚನಗಳ ಸಾರವನ್ನು ಅರ್ಥೈಸಿಕೊಂಡು ಅನುಸರಿಸಬೇಕೆಂದು ಸಚಿವರು ಆಶಿಸಿದರು. ಈ ಸಂದರ್ಭದಲ್ಲಿ ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿ, ಕೇಂದ್ರ ಸಚಿವರಾದ ಅಶ್ವಿನ್ ವೈಷ್ಣವ್, ಕಿರಣ್ ರಿಜಿಜು, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ ಸೇರಿದಂತೆ ಹಲವು ಗಣ್ಯರು ಹಾಜರಿದ್ದರು.

# ಜನಗಣತಿ–ಜಾತಿಗಣತಿಗೆ ಕೇಂದ್ರದ ಒಪ್ಪಿಗೆ: ಸಿಎಂ ಸಂತಸ

**ಬೆಂಗಳೂರು ಏ.30:** ಜನಗಣತಿ ಜೊತೆಯಲ್ಲಿ ಜಾತಿ ಗಣತಿಯನ್ನೂ ನಡೆಸುವ ಕೇಂದ್ರ ಸರ್ಕಾರದ ತೀರ್ಮಾನವನ್ನು ನಮ್ಮ ಸರ್ಕಾರ ಸ್ವಾಗತಿಸುತ್ತದೆ. ಇದೇ ಸಂದರ್ಭದಲ್ಲಿ ಜಾತಿ ಗಣತಿ ಜೊತೆ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನೂ ನಡೆಸಬೇಕೆಂದು ಕೇಂದ್ರ ಸರ್ಕಾರವನ್ನು ಆಗ್ರಹಿಸುತ್ತಿದ್ದೇನೆ. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ

ಕರ್ನಾಟಕದಲ್ಲಿ ನಾವು ಕೇವಲ ಜಾತಿ ಗಣತಿ ನಡೆಸದೆ ಅದರ ಜೊತೆ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆಯನ್ನು ನಡೆಸಿದ್ದೇವೆ. ಈ ದತ್ತಾಂಶಗಳ ಆಧಾರದಲ್ಲಿ ಈಗಿನ ಮೀಸಲಾತಿ ನೀತಿಯನ್ನು ಪರಿಷ್ಕರಿಸಿ ಅದರ ಮಿತಿಯನ್ನು ಹೆಚ್ಚಿಸುವ ಪ್ರಯತ್ನ ಕೂಡಾ ನಡೆದಿದೆ. ಜಾತಿಗಣತಿಯ ಜೊತೆಯಲ್ಲಿ ಈ ಪ್ರಕ್ರಿಯೆಯನ್ನು ಕೂಡಾ ಕೇಂದ್ರ ಸರ್ಕಾರ ಪೂರ್ಣಗೊಳಿಸಲಿದೆ ಎಂದು ನಂಬಿದ್ದೇನೆ. ವೈಜ್ಞಾನಿಕವಾದ ಮೀಸಲಾತಿ ನೀತಿಯನ್ನು ರೂಪಿಸುವುದೇ ಜಾತಿ ಆಧಾರಿತ ಸಾಮಾಜಿಕ, ಆರ್ಥಿಕ



ಮತ್ತು ಶೈಕ್ಷಣಿಕ ಸಮೀಕ್ಷೆಯ ಮೂಲ ಉದ್ದೇಶವಾಗಿದೆ. ಪ್ರತಿ ಬಾರಿ ಮೀಸಲಾತಿಗೆ ಸಂಬಂಧಿಸಿದ ಪ್ರಕರಣಗಳು ವಿಚಾರಣೆಗೆ ಬಂದಾಗೆಲ್ಲ ಸುಪ್ರೀಂಕೋರ್ಟ್ ಇಂತಹದ್ದೊಂದು ಸಮೀಕ್ಷೆ ನಡೆಸುವ ಅಗತ್ಯವನ್ನು ಪದೇಪದೇ ಹೇಳುತ್ತಾ ಬಂದಿದೆ ಎನ್ನುವುದನ್ನು ಕೇಂದ್ರ ಸರ್ಕಾರ ಗಮನಿಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ನಾನು ಧರ್ಮಸಿಂಗ್ ಸರ್ಕಾರದಲ್ಲಿ ಉಪಮುಖ್ಯ ಮಂತ್ರಿಯಾಗಿದ್ದ ಕಾಲದಲ್ಲಿಯೇ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ರಚಿಸಿ ಜಾತಿಯ ಜೊತೆಯಲ್ಲಿ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸುವ ತೀರ್ಮಾನ ಕೈಗೊಂಡಿದ್ದೆ. ಕಾರಣಾಂತರಗಳಿಂದ ಅನುಷ್ಠಾನಗೊಳ್ಳದೆ ನೆನೆಗುದಿಗೆ ಬಿದ್ದ ಆ ನಿರ್ಧಾರವನ್ನು ಕಾರ್ಯರೂಪಕ್ಕೆ ತರಲು ಮತ್ತೆ ನಾನು ರಾಜ್ಯದ ಮುಖ್ಯಮಂತ್ರಿ ಆಗಬೇಕಾಯಿತು. ಜಾತಿ ಗಣತಿ ಜೊತೆಯಲ್ಲಿ ಮೀಸಲಾತಿ ಮಿತಿ ಏರಿಕೆಯ ನಿರ್ಧಾರವನ್ನು ಸಂಪೂರ್ಣ ಬೆಂಬಲಿಸಿ ಅದನ್ನು ನಮ್ಮ ಪಕ್ಷದ ರಾಷ್ಟ್ರೀಯ ಕಾರ್ಯಕ್ರಮವನ್ನಾಗಿ ರೂಪಿಸಿ ದೇಶಾದ್ಯಂತ ಪ್ರಚಾರ ಮಾಡುತ್ತಾ ಬಂದ ಕಾಂಗ್ರೆಸ್ ಪಕ್ಷದ ನಾಯಕರಾದ ರಾಹುಲ್ ಗಾಂಧಿಯವರನ್ನು ಈ ಸಂದರ್ಭದಲ್ಲಿ ಅಭಿನಂದಿಸುತ್ತೇನೆ. ಅವರ ಅವಿರತ ಪ್ರಯತ್ನದ ಒತ್ತಡದಿಂದಾಗಿಯೇ ಇಂದು ಪ್ರಧಾನಿ ನರೇಂದ್ರ ಮೋದಿಯವರು ಜಾತಿ ಗಣತಿ ನಡೆಸುವ ನಿರ್ಧಾರವನ್ನು ಕೈಗೊಂಡಿದ್ದಾರೆ ಎನ್ನುವುದನ್ನು ಅವರು ಒಪ್ಪಿಕೊಳ್ಳದೆ ಇರಬಹುದು, ಆದರೆ ದೇಶ ಖಂಡಿತಾ ಒಪ್ಪುತ್ತದೆ.

# ಜನಗಣತಿಯೊಂದಿಗೆ ಜಾತಿಗಣತಿ; ಮೋದಿ ಅವರಿಂದ ದಿಟ್ಟ ನಿರ್ಧಾರ: ಎಚ್.ಡಿ.ಕುಮಾರಸ್ವಾಮಿ ಪ್ರಶಂಸೆ

**ರಾಜ್ಯ ಮಟ್ಟದ ಸಮೀಕ್ಷೆಗಳು ವಿಶ್ವಾಸಾರ್ಹತೆ, ಏಕರೂಪತೆ ಹೊಂದಿರುವುದಿಲ್ಲ ಎಂದ ಕೇಂದ್ರ ಸಚಿವರು**

**ರಾಷ್ಟ್ರೀಯ ಗಣತಿಯಿಂದ ಪಾರದರ್ಶಕ ದತ್ತಾಂಶ ಲಭ್ಯ**



**ನವದೆಹಲಿ, ಏ.30:** ಮುಂಬರುವ ಜನಗಣತಿಯೊಂದಿಗೆ ಜಾತಿಗಣತಿಯನ್ನು ನಡೆಸಲು ಕೇಂದ್ರ ಸಂಪುಟ ನಿರ್ಧರಿದ್ದು, ಇದು ಪ್ರಧಾನಿ ನರೇಂದ್ರ ಮೋದಿ ಅವರ ದಿಟ್ಟ ನಿರ್ಧಾರ ಎಂದು ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರು ಬಣ್ಣಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು; ಮುಂಬರುವ ಜನಗಣತಿ ಜೊತೆಯಲ್ಲಿಯೇ ಜಾತಿ ಗಣತಿಯನ್ನೂ ನಡೆಸುವ ಮಹತ್ವದ ನಿರ್ಧಾರವನ್ನು ಮೋದಿಯವರ ನೇತೃತ್ವದಲ್ಲಿ ಕೈಗೊಳ್ಳಲಾಗಿದೆ. ಅವರ ಕ್ರಿಯಾಶೀಲ ನಾಯಕತ್ವದಲ್ಲಿ ಇದು ಐತಿಹಾಸಿಕ ಮತ್ತು ದೂರದೃಷ್ಟಿಯ ನಿರ್ಧಾರವಾಗಿದೆ. ಜಾತಿಗಣತಿಯು 1931ರ ನಂತರ ಇದೇ ಮೊದಲ ಬಾರಿಗೆ ಮುಂಬರುವ ರಾಷ್ಟ್ರೀಯ ಜನಗಣತಿಯ ಭಾಗವಾಗಲಿದೆ ಎಂಬುದು ಗಮನಾರ್ಹ ಎಂದಿದ್ದಾರೆ. ಈ ಮಹತ್ವದ ಹೆಜ್ಜೆಯು ಭಾರತವು ಅಧಿಕೃತ, ವೈಜ್ಞಾನಿಕ ಮತ್ತು ಪಾರದರ್ಶಕವಾದ ಜಾತಿ ದತ್ತಾಂಶ ಹೊಂದಲಿದೆ. ಕೇವಲ ರಾಜಕೀಯ ಪ್ರೇರಿತ ರಾಜ್ಯ ಮಟ್ಟದ ಸಮೀಕ್ಷೆಗಳು ವಿಶ್ವಾಸಾರ್ಹತೆ, ಏಕರೂಪತೆ ಹೊಂದಿರುವುದಿಲ್ಲ ಎಂಬುದು ನನ್ನ ಸ್ಪಷ್ಟ ಅಭಿಪ್ರಾಯ ಎಂದು ಅವರು ಹೇಳಿದ್ದಾರೆ.

ಈ ದಿಟ್ಟ ಕ್ರಮದೊಂದಿಗೆ ಪ್ರಧಾನಿ ಮೋದಿ ಅವರು ಸಮಗ್ರ ಆಡಳಿತ ಮತ್ತು ದತ್ತಾಂಶ ಚಾಲಿತ ನೀತಿ ನಿರೂಪಣೆ ಬಗ್ಗೆ ಹೊಂದಿರುವ ತಮ್ಮ ಅಚಲ ಬದ್ಧತೆಯನ್ನು ಪ್ರದರ್ಶಿಸಿದ್ದಾರೆ. ಅಲ್ಲದೇ, ಈ ಗಣತಿಯು ಕಲ್ಯಾಣ ಕಾರ್ಯಕ್ರಮಗಳನ್ನು ಬಲಗೊಳಿಸುತ್ತದೆ, ಸಾಮಾಜಿಕ ನ್ಯಾಯವನ್ನು ಇನ್ನಷ್ಟು ಖಚಿತಪಡಿಸುತ್ತದೆ ಹಾಗೂ ಸರ್ವರಿಗೂ ಸಮಾನ ಅವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಅವರು ಪ್ರತಿಪಾದಿಸಿದ್ದಾರೆ. ರಾಷ್ಟ್ರದ ಹಿತದೃಷ್ಟಿಯಿಂದ ಈ ನಿರ್ಣಾಯಕ ಮತ್ತು ದೂರದೃಷ್ಟಿಯ ನಿರ್ಧಾರಕ್ಕಾಗಿ ಪ್ರಧಾನಮಂತ್ರಿಯವರಿಗೆ ನನ್ನ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ಈ ನಿರ್ಧಾರವನ್ನು ನಾನು, ನಮ್ಮ ಪಕ್ಷವು ಸ್ವಾಗತಿಸುತ್ತದೆ ಎಂದು ಕೇಂದ್ರ ಸಚಿವರು ಹೇಳಿದ್ದಾರೆ.

## ಜಾತಿಗಣತಿ: ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ನೆಲೆಯಲ್ಲಿ ಆಗಲಿ- ಈಶ್ವರಖಂಡ್ರೆ

**ಬೀದರ್, ಏ.30:** ಕೇಂದ್ರ ಸರ್ಕಾರ ಜಾತಿ ಗಣತಿಗಷ್ಟೇ ಸೀಮಿತವಾಗದೆ, ಯಾವುದೇ ಜಾತಿ, ಜನಾಂಗಕ್ಕೆ ಅನ್ಯಾಯವಾಗದ ರೀತಿಯಲ್ಲಿ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗತಿಯ ಸಮೀಕ್ಷೆಯನ್ನೂ ನಡೆಯಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಒತ್ತಾಯಿಸಿದ್ದಾರೆ. ಕೇಂದ್ರ ಸರ್ಕಾರವೇ ಜಾತಿ ಗಣತಿ ಮಾಡುವ ಘೋಷಣೆ ಮಾಡಿರುವ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಲೋಕಸಭಾ ಚುನಾವಣೆ ವೇಳೆ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲೇ ಜಾತಿ ಗಣತಿ ನಡೆಸುವ ಆಶ್ವಾಸನೆ ನೀಡಿತ್ತು. ಕೇಂದ್ರ ಸರ್ಕಾರ ಈಗ ನಮ್ಮ ನಿಲುವನ್ನು ಬೆಂಬಲಿಸಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ಕೇವಲ ಜಾತಿಗಳ ತಲೆ ಎಣಿಕೆ ಮಾಡಿದರೆ ಸಾಲದು, ದೇಶದ ಎಲ್ಲ ಜಾತಿಗಳ ಜನರ ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಪರಿಸ್ಥಿತಿಯ ನಿಖರ ಸಮೀಕ್ಷೆ ನಡೆಸಬೇಕು. ಆಗ ಮಾತ್ರ ಸರ್ವರಿಗೂ ನ್ಯಾಯ ಸಿಗಲು ಸಾಧ್ಯ ಎಂದು ಖಂಡ್ರೆ ಅಭಿಪ್ರಾಯಪಟ್ಟರು.



ಚಾಣಕ್ಯಪುರಿಯ 10, ಕೌಟಿಲ್ಯ ಮಾರ್ಗದಲ್ಲಿರುವ ಕರ್ನಾಟಕ ಭವನ–1ರ ಕಾವೇರಿಯಲ್ಲಿ ಬಸವ ಜಯಂತಿಯನ್ನು ಆಚರಿಸಲಾಯಿತು. ನವದೆಹಲಿಯ ಕರ್ನಾಟಕ ಭವನದ ಅಪರ ನಿವಾಸಿ ಆಯುಕ್ತೆ ಆಕೃತಿ ಬನ್ಸಾಲ್ ಹಾಗೂ ಸಹಾಯಕ ನಿವಾಸಿ ಆಯುಕ್ತ ಸಿ.ಮೋಹನ್ ಕುಮಾರ್ ಜಗಜ್ಯೋತಿ ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಭವನದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.



ಕರ್ನಾಟಕ ಭವನ– 3 (ಭೀಮ) ಕೆಎಸ್‌ಟಿಡಿಸಿ ವತಿಯಿಂದ ಬಸವ ಜಯಂತಿಯನ್ನು ಆಚರಿಸಲಾಯಿತು. ಮಾಜಿ ದೆಹಲಿ ವಿಶೇಷ ಪ್ರತಿನಿಧಿ ಶಂಕರ್‌ಗೌಡ ಪಾಟೀಲ್, ಬಸವಣ್ಣವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಈ ಸಂದರ್ಭದಲ್ಲಿ ವ್ಯವಸ್ಥಾಪಕರು ಹಾಗೂ ಘಟಕದ ಸಿಬ್ಬಂದಿ ಹಾಜರಿದ್ದರು




# ಗಡಿಯಲ್ಲಿ ಭಾರತ–ಪಾಕ್ ಸೇನೆಯಿಂದ ಗುಂಡಿನ ದಾಳಿ–ಪ್ರತಿದಾಳಿ



**ಶ್ರೀನಗರ, ಏ.30:** ಜಮ್ಮು ಮತ್ತು ಕಾಶ್ಮೀರದ ಅನಂತ್‌ನಾಗ್‌ನ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದ ಬಳಿಕ ಪಾಕಿಸ್ತಾನವು ಪದೇ ಪದೇ ಕದನ ವಿರಾಮ ಉಲ್ಲಂಘನೆ ಮಾಡುತ್ತಿದ್ದು, ಭಾರತೀಯ ಸೇನೆಗೆ ಯುದ್ಧಕ್ಕೆ ಪ್ರಚೋದನೆ ನೀಡುತ್ತಿದೆ. ಸತತ ಆರನೇ ದಿನವೂ ರಾತ್ರಿ ಗಡಿಯಲ್ಲಿ ಪಾಕ್ ಸೇನೆ ಗುಂಡಿನ ದಾಳಿ ನಡೆಸಿದ್ದು, ಭಾರತೀಯ ಸೇನೆ ತಕ್ಕ ಪ್ರತ್ಯುತ್ತರ ನೀಡಿದೆ. ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿ ನಡೆಸಿದ ಪಾಕಿಸ್ತಾನಿ ಪಡೆಗಳಿಗೆ ಸೂಕ್ತ ಉತ್ತರ ನೀಡಿದೆ.

ಪಾಕ್ ಸೇನೆಯು ಏ.29–30 ತಡರಾತ್ರಿ ಜಮ್ಮುಕಾಶ್ಮೀರ ಕೇಂದ್ರಾಡಳಿತ ಪ್ರದೇಶದ ನೌಶೇರಾ, ಸುಂದರ್‌ಬಾನಿ ಮತ್ತು ಅಖ್ನೂರ್ ಸೆಕ್ಟರ್‌ಗಳ ಎದುರು ನಿಯಂತ್ರಣ ರೇಖೆಯುದ್ದಕ್ಕೂ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿ ನಡೆಸಿದ್ದವು. ಭಾರತೀಯ ಸೇನಾ ಪಡೆಗಳು ತ್ವರಿತವಾಗಿ ಮತ್ತು ಪ್ರಮಾಣಾನುಗುಣವಾಗಿ ಪ್ರತಿಕ್ರಿಯಿಸಿವೆ.ಏ.22ರಂದು ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಓರ್ವ ಸ್ಥಳೀಯ, 25 ಪ್ರವಾಸಿಗರು ಸೇರಿ 26 ಮಂದಿಸಾವನ್ನಪ್ಪಿದ್ದರು. ಇದಾದ ನಂತರ, ನಂತರ ಎರಡೂ ನೆರೆಯ ರಾಷ್ಟ್ರಗಳ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವಂತೆಯೇ ಇತ್ತೀಚಿನ ಬೆಳವಣಿಗೆ ಸಂಭವಿಸಿದೆ.

ಮಂಗಳವಾರ, ಜಮ್ಮು ಮತ್ತು ಕಾಶ್ಮೀರದ ಅಖ್ನೂರ್ ವಲಯದ ಜೊತೆಗೆ ಕುಪ್ವಾರಾ ಮತ್ತು ಬಾರಾಮುಲ್ಲಾ ಜಿಲ್ಲೆಗಳ ಎದುರಿನ ಪ್ರದೇಶಗಳಲ್ಲಿ ಪಾಕಿಸ್ತಾನಿ ಪಡೆಗಳು ಕದನ ವಿರಾಮವನ್ನು ಉಲ್ಲಂಘಿಸಿವೆ. ಈ ಪ್ರಚೋದನೆಗಳಿಗೆ ಭಾರತೀಯ ಸೇನೆಯು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಿದೆ ಎಂದು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ.

ಭಾರತ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿತು ಮತ್ತು ಅಟ್ಟಾರಿ ಗಡಿಯನ್ನು ಸಂಚಾರಕ್ಕೆ ಮುಚ್ಚಿತು, ಆದರೆ ಪಾಕಿಸ್ತಾನವು 1972ರ ಪಾಕ್–ಸಿಮ್ಲಾ ಒಪ್ಪಂದವನ್ನು ಸ್ಥಗಿತಗೊಳಿಸುವುದಾಗಿ ಘೋಷಿಸಿತು. 24–36 ಗಂಟೆಯೊಳಗೆ ಭಾರತ ನಮ್ಮ ಮೇಲೆ ದಾಳಿ ನಡೆಸಬಹುದು ಎಂದು ಪಾಕಿಸ್ತಾನ ಸಚಿವರೊಬ್ಬರು ಹೇಳಿಕೆ ನೀಡಿದ್ದಾರೆ. ಭಾರತ ಮಿಲಿಟರಿ ದಾಳಿಯನ್ನು ಯೋಜಿಸುತ್ತಿದೆ ಎಂದು ಸೂಚಿಸುವ ವಿಶ್ವಾಸಾರ್ಹ ಗುಪ್ತಚರ ಮಾಹಿತಿಯನ್ನು ನಾವು ಹೊಂದಿದ್ದೇವೆ ಎಂದು ಪಾಕ್ ಸಚಿವ ಅತಾವುಲ್ಲಾ ತರಾರ್ ಹೇಳಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರ ದಾಳಿಯಲ್ಲಿ 26 ಅಮಾಯಕರು ಪ್ರಾಣ ಕಳೆದುಕೊಂಡಿದ್ದರು. ಲಷ್ಕರ್–ಎ–ತೊಯ್ಬಾದ ಟಿಆರ್‌ಎಫ್ ಈ ದಾಳಿ ಹೊಣೆಯನ್ನು ಹೊತ್ತುಕೊಂಡಿತ್ತು. ಆಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ ನಮ್ಮ ವೆಬ್‌ಸೈಟ್ ಯಾರೋ ಹ್ಯಾಕ್ ಮಾಡಿದ್ದಾರೆ, ನಾವು ಈ ದಾಳಿ ನಡೆಸಿಲ್ಲ ಎಂದು ಹೇಳಿಕೆ ನೀಡಿತ್ತು.

ಇದೀಗ ಭಾರತ ಏನು ಮಾಡಬಹುದು ಎನ್ನುವ ಭಯದಲ್ಲಿ ಪಾಕಿಸ್ತಾನವಿದ್ದು, ಮುಂದಿನ 36 ಗಂಟೆಯೊಳಗೆ ದಾಳಿ ನಡೆಸಬಹುದು ಎಂದು ಹೆದರಿ ಕುಳಿತಿದೆ. ಭಾರತೀಯ ಸೇನಾ ದಾಳಿಯ ಬೆದರಿಕೆ ಪಾಕಿಸ್ತಾನ ಸೇನೆಯೊಳಗೆ ಅವ್ಯವಸ್ಥೆಯನ್ನು ಹುಟ್ಟುಹಾಕಿದೆ ಎಂದು ವರದಿಯಾಗಿದೆ



ನವದೆಹಲಿಯಲ್ಲಿ ಬುಧವಾರ ನಡೆದ ಒಂದು ರಾಷ್ಟ್ರ, ಒಂದು ಚುನಾವಣೆಗಾಗಿ ಓಟದಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ದೆಹಲಿ ಸಚಿವ ಆಶಿಶ್ ಸೂದ್ ಅವರೊಂದಿಗೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಭಾಗವಹಿಸಿದ್ದರು.

# ಬೆಂಗಳೂರು–ಬೆಳಗಾವಿ ವಂದೇ ಭಾರತ್ ರೈಲು ಜೋಶಿ ಮನವಿಗೆ ಸ್ಪಂದಿಸಿದ ಅಶ್ವಿನಿ ವೈಷ್ಣವ್



**ನವದೆಹಲಿ,ಏ.30:** ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಒತ್ತಾಯದ ಮೇರೆಗೆ ರೈಲ್ವೆ ಇಲಾಖೆ ಅಂತೂ ಬೆಳಗಾವಿ–ಬೆಂಗಳೂರು ಮಧ್ಯೆ "ವಂದೇ ಭಾರತ್ ರೈಲು" ಸಂಚಾರ ಆರಂಭಿಸಲು ಮುಂದಾಗಿದೆ.

ಬೆಂಗಳೂರು–ಬೆಳಗಾವಿ ಮಧ್ಯೆ ವಂದೇ ಭಾರತ್ ರೈಲು ಸಂಚಾರದಿಂದ ಉತ್ತರ ಕರ್ನಾಟಕದ ಸಂಪರ್ಕ ಮತ್ತು ಅಭಿವೃದ್ಧಿಗೆ ದೊಡ್ಡ ಉತ್ತೇಜನ ದೊರೆಯಲಿದೆ. ಹಾಗಾಗಿ ಈ ರೈಲು ಸಂಚಾರ ಆರಂಭಿಸುವಂತೆ ಒತ್ತಾಯಿಸಿ ಪ್ರಲ್ಹಾದ ಜೋಶಿ ಅವರು ಫೆ.10ರಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಪತ್ರ ಬರೆದಿದ್ದರು. ಇದಕ್ಕೆ ಸ್ಪಂದಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಏ.28ರಂದು ಸಚಿವ ಜೋಶಿ ಅವರಿಗೆ ಪತ್ರ ಬರೆದು ತಮ್ಮ ಒತ್ತಾಸೆಯಂತೆ "ಬೆಂಗಳೂರು–ಬೆಳಗಾವಿ"ಗೆ ವಂದೇ ಭಾರತ್ ರೈಲು ಸಂಚಾರಕ್ಕೆ ಅನುಮೋದನೆ ನೀಡಿದ್ದಾಗಿ ತಿಳಿಸಿದ್ದಾರೆ. ಈ ಮಾರ್ಗದಲ್ಲಿ ವಂದೇ ಭಾರತ್ ರೈಲು ಸಂಚಾರಕ್ಕೆ ರೈಲ್ವೆ ಇಲಾಖೆ ಕ್ರಮ ಕೈಗೊಂಡ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಸಚಿವ ಜೋಶಿ ಧನ್ಯವಾದ ಅರ್ಪಿಸಿದ್ದಾರೆ

# ಪಾಕ್ ಪರ ಹೇಳಿಕೆ 30ಕ್ಕೂ ಹೆಚ್ಚು ಜನರ ಬಂಧನ



**ಗೌಹಾತಿ,ಏ.30:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ವಿವಾದಾತ್ಮಕ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳಿಗಾಗಿ ಅಸ್ಸಾಂನಲ್ಲಿ ಇದುವರೆಗೆ 30ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ. ಪಹಲ್ಗಾಮ್ ದಾಳಿಯಲ್ಲಿ ಎರಡು ಡಜನ್ಗೂ ಹೆಚ್ಚು ನಾಗರಿಕರು ಬಲಿಯಾಗಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪಾಕಿಸ್ತಾನವನ್ನು ಬೆಂಬಲಿಸಿದ್ದಕ್ಕಾಗಿ ಕೆಲವರನ್ನು ಬಂಧಿಸಲಾಗಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದರು.

ಅಪರಾಧ ಇತಿಹಾಸ ಹೊಂದಿರುವವರ ವಿರುದ್ಧ ರಾಷ್ಟ್ರೀಯ ಭದ್ರತಾ ಕಾಯ್ದೆ (ಎನ್‌ಎಸ್‌ಎ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗುವುದು ಎಂದು ಅವರು ಎಚ್ಚರಿಸಿದರು. ಭಾರತ ಮತ್ತು ಪಾಕಿಸ್ತಾನದ ನಡುವೆ ಯಾವುದೇ ಹೋಲಿಕೆಗಳಿಲ್ಲ. ಎರಡೂ ದೇಶಗಳು ಶತ್ರುಗಳು, ಮತ್ತು ನಾವು ಹಾಗೆಯೇ ಇರಬೇಕು ಎಂದು ಶರ್ಮಾ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡುತ್ತಾ ಹೇಳಿದರು. ಇದಕ್ಕೂ ಮೊದಲು, ಪಹಲ್ಗಾಮ್ ದಾಳಿಯ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಅವರ ವಿವಾದಾತ್ಮಕ ಪೋಸ್ಟ್‌ಗಳಿಗಾಗಿ ಅಸ್ಸಾಂ, ಮೇಘಾಲಯ ಮತ್ತು ತ್ರಿಪುರಾದಲ್ಲಿ ಕನಿಷ್ಠ 24 ಜನರನ್ನು ಬಂಧಿಸಲಾಗಿತ್ತು.

2019 ರ ಪುಲ್ವಾಮಾ ಮತ್ತು ಇತ್ತೀಚಿನ ಪಹಲ್ಗಾಮ್ ದಾಳಿಗಳು ಸರ್ಕಾರದ ಪಿತೂರಿಗಳು ಎಂದು ಹೇಳಿಕೆ ನೀಡಿದ್ದಕ್ಕಾಗಿ ಆಲ್ ಇಂಡಿಯಾ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಎಐಯುಡಿಎಫ್) ನ ಶಾಸಕ ಅಮೀನುಲ್ ಇಸ್ಲಾಂ ಅವರು ದೇಶದ್ರೋಹದ ಆರೋಪ ಹೊರಿಸಲ್ಪಟ್ಟ ಮೊದಲ ವ್ಯಕ್ತಿಗಳಲ್ಲಿ ಒಬ್ಬರು. ಕಳೆದ ಮಂಗಳವಾರ, ದಕ್ಷಿಣ ಕಾಶ್ಮೀರದ ಅನಂತನಾಗ್ ಜಿಲ್ಲೆಯ ಜನಪ್ರಿಯ ಪ್ರವಾಸಿ ಪಟ್ಟಣ ಪಹಲ್ಗಾಮ್ ಬಳಿಯ ಹುಲ್ಲುಗಾವಲಿನಲ್ಲಿ ಭಯೋತ್ಪಾದಕರು ಗುಂಡು ಹಾರಿಸಿ 26 ಪ್ರವಾಸಿಗರನ್ನು ಕೊಂದರು.

# ಮಣಿಪುರ ಹಿಂಸಾಚಾರಕ್ಕೆ 2 ವರ್ಷ: ಮೇ 3ಕ್ಕೆ ಬಂದ್‌ಗೆ ಆಗ್ರಹ




**ನವದೆಹಲಿ,ಏ.30:** ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರ ಪ್ರಾರಂಭವಾಗಿ ಎರಡು ವರ್ಷಗಳು ತುಂಬುತ್ತಿದ್ದು, ಅದರ ಪ್ರಯುಕ್ತ ಮೇ 3 ರಂದು ಮಣಿಪುರದ ಕೆಲವು ಭಾಗಗಳಲ್ಲಿ ಎಲ್ಲಾ ಶಿಕ್ಷಣ ಸಂಸ್ಥೆಗಳು ಮತ್ತು ವ್ಯಾಪಾರ ಸಂಸ್ಥೆಗಳನ್ನು ಸ್ಥಗಿತಗೊಳಿಸುವಂತೆ ಎರಡು ಕುಕಿ–ಜೋಮಿ ವಿದ್ಯಾರ್ಥಿ ಸಂಘಟನೆಗಳು ಜನರನ್ನು ಒತ್ತಾಯಿಸಿವೆ.

ಜೊಮಿ ವಿದ್ಯಾರ್ಥಿ ಒಕ್ಕೂಟ ಮತ್ತು ಕುಕಿ ವಿದ್ಯಾರ್ಥಿ ಸಂಘಟನೆ ಮೇ 3ರಂದು ಜನಾಂಗೀಯ ಕಲಹ ಭುಗಿಲೆದ್ದ ಎರಡು ವರ್ಷಗಳನ್ನು ಪೂರ್ಣಗೊಳಿಸುತ್ತದೆ. ಎಲ್ಲಾ ಶಿಕ್ಷಣ ಸಂಸ್ಥೆಗಳು ಮತ್ತು ವ್ಯಾಪಾರ ಸಂಸ್ಥೆಗಳನ್ನು ಮುಚ್ಚುವ ಮೂಲಕ ಮೌನವಾಗಿ ದಿನವನ್ನು ಆಚರಿಸಬೇಕು? ಎಂದು ಎಲ್ಲರನ್ನು ಒತ್ತಾಯಿಸಿವೆ.

ಮೇ 2023 ರಿಂದ ಮೈಯೇಯಿಗಳು ಮತ್ತು ಕುಕಿ–ಜೋ ಗುಂಪುಗಳ ನಡುವಿನ ಜನಾಂಗೀಯ ಹಿಂಸಾಚಾರದಲ್ಲಿ 250ಕ್ಕೂ ಹೆಚ್ಚು ಜನರು ಸಾವನ್ನಪ್ಪಿ, ಸಾವಿರಾರು ಜನರು ನಿರಾಶ್ರಿತರಾಗಿದ್ದಾರೆ. ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ರಾಜೀನಾಮೆ ನೀಡಿದ ನಂತರ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿದೆ. 2027ರವರೆಗೆ ಅಧಿಕಾರಾವಧಿಯನ್ನು ಹೊಂದಿರುವ ರಾಜ್ಯ ವಿಧಾನಸಭೆಯನ್ನು ಸ್ಥಗಿತಗೊಳಿಸಲಾಗಿದೆ. ವಿದ್ಯಾರ್ಥಿ ಸಂಘಟನೆಗಳು ಎಲ್ಲರ ನಿವಾಸಗಳಲ್ಲಿ ಕಪ್ಪು ಧ್ವಜಗಳನ್ನು ಹಾರಿಸಲು ಸಹ ಕರೆ ನೀಡಿವೆ.

ಹುತಾತ್ಮರ ಸ್ಮಶಾನದಲ್ಲಿ ಸಾಮೂಹಿಕ ಪ್ರಾರ್ಥನೆ ಮತ್ತು ಚುರಾಚಂದ್ಪುರ ಜಿಲ್ಲಾ ಕೇಂದ್ರದಲ್ಲಿರುವ ಸ್ಮರಣಾರ್ಥ ಗೋಡೆಯಲ್ಲಿ ಸಾರ್ವಜನಿಕ ಸಭೆ ನಡೆಯಲಿದೆ ಎಂದು ಈ ಸಂಘಟನೆಗಳು ತಿಳಿಸಿವೆ ಮತ್ತು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕೇಳಿಕೊಂಡಿವೆ. ಇದಕ್ಕೂ ಮೊದಲು, ಸ್ಥಳೀಯ ಬುಡಕಟ್ಟು ನಾಯಕರ ವೇದಿಕೆ ಮೇ 3 ಅನ್ನು ಪ್ರತ್ಯೇಕತಾ ದಿನ ಎಂದು ಆಚರಿಸಲಾಗುವುದು ಎಂದು ಹೇಳಿದೆ. ಒಂದು ಹೇಳಿಕೆಯಲ್ಲಿ, ಐಟಿಎಲ್‌ಎಫ್, ಕುಕಿ–ರ್ಝೋ ಸಮುದಾಯಗಳ ಮೇಲೆ ತೀವ್ರವಾಗಿ ಪರಿಣಾಮ ಬೀರಿದ ಜನಾಂಗೀಯ ಸಂಘರ್ಷದ ಬಲಿಪಶುಗಳಿಗೆ ಪ್ರತಿಬಿಂಬ ಮತ್ತು ಸ್ಮರಣಾ ದಿನ ಇರುತ್ತದೆ ಎಂದು ಹೇಳಿದೆ.

ಬಲಿಪಶುಗಳು, ಅವರ ಕುಟುಂಬಗಳಿಗೆ ಪ್ರಾರ್ಥನೆಗಳು ಮತ್ತು ಉಪದೇಶಗಳು, ಮುಖ್ಯ ಭಾಷಣ, ಸಾಂಸ್ಥಿಕ ವರದಿಗಳು ಮತ್ತು ವಿವಿಧ ಬುಡಕಟ್ಟು ನಾಯಕರ ಭಾಷಣಗಳು ಸೇರಿದಂತೆ ಹಲವಾರು ಕಾರ್ಯಕ್ರಮಗಳು ನಡೆಯಲಿವೆ ಎಂದು ಅದು ಹೇಳಿಕೆಯಲ್ಲಿ ತಿಳಿಸಿದೆ. ಇಂಫಾಲ್ ಕಣಿವೆಯ ಮೂಲದ ಕೊಕೊಮಿ, ಮೈತೇಯಿ ಸಂಘಟನೆಯು ಮಂಗಳವಾರ ಮೇ 3 ರಂದು ಎಲ್ಲ ಚಟುವಟಿಕೆಗಳನ್ನು ನಿಲ್ಲಿಸಿ, ರಾಜ್ಯದ ಭವಿಷ್ಯವನ್ನು ಚರ್ಚಿಸಲು ಖುಮಾನ್ ಲ್ಯಾಂಪಕ್ ಕ್ರೀಡಾಂಗಣದಲ್ಲಿ ಆ ದಿನದಂದು ಆಯೋಜಿಸಲಾಗುತ್ತಿರುವ ಸಾರ್ವಜನಿಕ ಸಮಾವೇಶದಲ್ಲಿ ಭಾಗವಹಿಸುವಂತೆ ಜನರಿಗೆ ಮನವಿ ಮಾಡಿತ್ತು.

ನಾಗರಿಕ ಸಮಾಜ ಸಂಸ್ಥೆಗಳ ಒಕ್ಕೂಟ ಈ ವರ್ಷದ ಮೇ 3 ಅನ್ನು ಭವಿಷ್ಯಕ್ಕಾಗಿ ವಿಭಜನೆಗಳನ್ನು ಸೇತುವೆ ಮಾಡುವುದು ಎಂಬ ವಿಷಯದ ಅಡಿಯಲ್ಲಿ ಸ್ಮರಣಾರ್ಥ ಮತ್ತು ಒಗ್ಗಟ್ಟಿನ ಗಂಭೀರ ದಿನವಾಗಿ ಆಚರಿಸಲಾಗುವುದು ಎಂದು ಘೋಷಿಸಿತು.

# ಬಾಲಕಿ ಮೇಲೆ ಗ್ಯಾಂಗ್ ರೇಪ್

**ಲಖನೌ, ಏ.30:** ಉತ್ತರ ಪ್ರದೇಶದ ಕೌಶಂಬಿ ಜಿಲ್ಲೆಯಲ್ಲಿ ದಲಿತ ಅಪ್ರಾಪ್ತ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದ ಆರೋಪ ಬೆಳಕಿಗೆ ಬಂದಿದ್ದು, ಸಂತ್ರಸ್ತೆಯ ತಂದೆಯ ದೂರಿನ ಮೇರೆಗೆ ಪೊಲೀಸರು ಮೂವರು ಯುವಕರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ. ಏ.24ರಂದು 16 ವರ್ಷದ ಬಾಲಕಿ ಯಾವುದೋ ವಿಷಯಕ್ಕೆ ಬೇಸರಗೊಂಡು ಸಂಬಂಧಿಕರ ಮನೆಗೆ ಹೋಗಿದ್ದಾಳೆ ಎಂಬ ಮಾಹಿತಿ ಬಂದಿದ್ದು, ನಾಪತ್ತೆ ದೂರು ದಾಖಲಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಜೇಶ್ ಸಿಂಗ್ ತಿಳಿಸಿದ್ದಾರೆ. ಏಪ್ರಿಲ್ 27 ರಂದು ಅದೇ ಗ್ರಾಮದ ಶೈಲೇಂದ್ರ ಸರೋಜ್ ಅಲಿಯಾಸ್ ಜಾಹಿದ್, ಆತನ ಸ್ನೇಹಿತ ಶೇರು ಅಲಿಯಾಸ್ ನಜರ್ ಅಹ್ಮದ್ ಸಾಮೂಹಿಕ ಅತ್ಯಾಚಾರ ನಡೆಸಿ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ಬಾಲಕಿಯ ತಂದೆ ಅರ್ಜಿ ಸಲ್ಲಿಸಿದ್ದಾರೆ ಎಂದು ಅವರು ಹೇಳಿದರು.

ಬಿಎನ್‌ಎಸ್, ಪೋಕ್ಸೊ ಕಾಯ್ದೆ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸ್ ಅಧಿಕಾರಿ ಸಿಂಗ್ ಹೇಳಿದರು.

# ಐಎಎಸ್ ಅಧಿಕಾರಿ ಅಶೋಕ್ ಖೇಮ್ಕಾ ನಿವೃತ್ತಿ

**ನವದೆಹಲಿ, ಏ. 30:** ಸುಮಾರು 34 ವರ್ಷಗಳ ವೃತ್ತಿಜೀವನದಲ್ಲಿ 57 ವರ್ಗಾವಣೆಗಳೊಂದಿಗೆ ಪ್ರಾಮಾಣಿಕತೆಗೆ ಹೆಸರುವಾಸಿಯಾಗಿದ್ದ ಹಿರಿಯ ಐಎಎಸ್ ಅಧಿಕಾರಿ ಅಶೋಕ್ ಖೇಮ್ಕಾ ಅವರು ಇಂದು ಬುಧವಾರ ನಿವೃತ್ತರಾಗುತ್ತಿದ್ದಾರೆ. 1991 ರ ಬ್ಯಾಚ್ ಅಧಿಕಾರಿ ಹರಿಯಾಣದಲ್ಲಿ ಸಾರಿಗೆ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿ ತಮ್ಮ ಸೇವೆಯನ್ನು ಮುಕ್ತಾಯಗೊಳಿಸಿದರು, ಅವರು ಡಿಸೆಂಬರ್ 2024 ರಲ್ಲಿ ಈ ಹುದ್ದೆಯನ್ನು ಅಲಂಕರಿಸಿದ್ದರು.

ಹರಿಯಾಣ ಕೇಡರ್ ಅಧಿಕಾರಿಯಾಗಿದ್ದ ಖೇಮ್ಕಾ, 2012ರಲ್ಲಿ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿಯವರ ಅಳಿಯ ರಾಬರ್ಟ್ ವಾದ್ರಾ ಅವರಿಗೆ ಸಂಬಂಧಿಸಿದ ಗುರುಗ್ರಾಮ್ ಭೂ ಒಪ್ಪಂದದ ರೂಪಾಂತರವನ್ನು ರದ್ದುಗೊಳಿಸಿದಾಗ ರಾಷ್ಟ್ರೀಯ ಮಟ್ಟದಲ್ಲಿ ಪ್ರಾಮುಖ್ಯತೆಯನ್ನು ಪಡೆದರು. ಖೇಮ್ಕಾ ಅವರ ವೃತ್ತಿಜೀವನವು ಅಸಾಧಾರಣವಾಗಿ ಹೆಚ್ಚಿನ ಸಂಖ್ಯೆಯ ವರ್ಗಾವಣೆಗಳಿಂದ ಗುರುತಿಸಲ್ಪಟ್ಟಿದೆ. ಒಟ್ಟು 57 ಬಾರಿ ಅವರು ಸರಾಸರಿ ಆರು ತಿಂಗಳಿಗೊಮ್ಮೆ ವರ್ಗಾವಣೆಯಾಗಿದ್ದಾರೆ. ಹರಿಯಾಣದಲ್ಲೇ ಯಾವುದೇ ಅಧಿಕಾರಿಗಿಂತ ಅತಿ ಹೆಚ್ಚು ಅವಧಿಗೆ ವರ್ಗಾವಣೆಯಾಗಿದ್ದಾರೆ.

ಮನೋಹರ್ ಲಾಲ್ ಖಟ್ಟರ್ ನೇತೃತ್ವದ ಬಿಜೆಪಿ ಸರ್ಕಾರದ ಮೊದಲ ಅವಧಿಯಲ್ಲಿ ಸಾರಿಗೆ ಆಯುಕ್ತರ ಪಾತ್ರದಿಂದ ಆರಂಭಿಕ ವರ್ಗಾವಣೆಯಾದ ಸುಮಾರು ಒಂದು ದಶಕದ ನಂತರ, ಕಳೆದ ಡಿಸೆಂಬರ್‌ನಲ್ಲಿ ಅವರು ಸಾರಿಗೆ ಇಲಾಖೆಗೆ ಮರಳಿದರು. ಅವರನ್ನು ವರ್ಗಾವಣೆ ಮಾಡು ಸಮಯದಲ್ಲಿ ಇಲಾಖೆಯಲ್ಲಿ ಕೇವಲ ನಾಲ್ಕು ತಿಂಗಳುಗಳ ಕಾಲ ಸೇವೆ ಸಲ್ಲಿಸಿದ್ದರು. ಕಳೆದ 12 ವರ್ಷಗಳಲ್ಲಿ, ಖೇಮ್ಕಾ ಅವರನ್ನು ಹೆಚ್ಚಾಗಿ ತಳ ಹಂತದ ಎಂದು ಪರಿಗಣಿಸಲಾದ ಇಲಾಖೆಗಳಿಗೆ ನಿಯೋಜಿಸಲಾಗಿದೆ. ಅವರನ್ನು ನಾಲ್ಕು ಬಾರಿ ಆರ್ಕೈವ್ಸ್ ಇಲಾಖೆಗೆ ನಿಯೋಜಿಸಲಾಗಿದೆ. ಒಮ್ಮೆ 2013 ರಲ್ಲಿ ಕಾಂಗ್ರೆಸ್ ಸರ್ಕಾರದ ಅಡಿಯಲ್ಲಿ ಮತ್ತು ಮೂರು ಬಾರಿ ಬಿಜೆಪಿ ಆಡಳಿತದಲ್ಲಿ, ಮೊದಲು ಮಹಾನಿರ್ದೇಶಕರಾಗಿ ಮತ್ತು ನಂತರ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ.

ಜನವರಿ 23, 2023 ರಂದು ಬರೆದ ತಮ್ಮ ಪತ್ರದಲ್ಲಿ, ಅಧಿಕಾರಶಾಹಿಯಲ್ಲಿನ ಕೆಲಸದ ಅಸಮ ಹಂಚಿಕೆಯನ್ನು ಅವರು ಟೀಕಿಸಿದರು. ಕೆಲವು ಅಧಿಕಾರಿಗಳಿಗೆ ಹೆಚ್ಚಿನ ಹೊರೆ ಇದೆ, ಆರ್ಕೈವ್ಸ್‌ನಂತಹ ಇಲಾಖೆಗಳಲ್ಲಿ ತಮ್ಮನ್ನು ಒಳಗೊಂಡಂತೆ ಇತರರು ಕಡಿಮೆ ಕೆಲಸ ಮಾಡಿದ್ದಾರೆ ಎಂದು ಹೇಳಿದರು. ಕೆಲಸದ ಏಕಪಕ್ಷೀಯ ಹಂಚಿಕೆಯು ಸಾರ್ವಜನಿಕ ಹಿತಾಸಕ್ತಿಗೆ ಪೂರಕವಾಗಿಲ್ಲ. ನನ್ನ ಸೇವಾ ಜೀವನದ ಅಂತ್ಯದ ವೇಳೆಗೆ, ಭ್ರಷ್ಟಾಚಾರವನ್ನು ಬೇರುಸಹಿತ ಕಿತ್ತುಹಾಕಲು ವಿಜಿಲೆನ್ಸ್ ಇಲಾಖೆಯ ಮುಖ್ಯಸ್ಥನಾಗಿ ನನ್ನ ಸೇವೆಯನ್ನು ನೀಡುತ್ತೇನೆ. ಅವಕಾಶ ನೀಡಿದರೆ, ಭ್ರಷ್ಟಾಚಾರದ ವಿರುದ್ಧ ನಿಜವಾದ ಯುದ್ಧ ನಡೆಯಲಿದೆ, ಎಷ್ಟೇ ಉನ್ನತ ಮತ್ತು ಬಲಶಾಲಿಯಾಗಿದ್ದರೂ ಯಾರನ್ನೂ ಬಿಡಲಾಗುವುದಿಲ್ಲ ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ ಎಂದು ಐಎಎಸ್ ಅಧಿಕಾರಿ ಬರೆದಿದ್ದಾರೆ. ಎರಡು ವರ್ಷಗಳ ಹಿಂದೆ, ಐಎಎಸ್ ಅಧಿಕಾರಿಗಳ ಬಡ್ತಿಗಳ ನಂತರ, ಖೇಮ್ಕಾ ಟ್ವೀಟ್ ಮಾಡಿದ್ದರು. ಹೊಸದಾಗಿ ಭಾರತ ಸರ್ಕಾರದ ಕಾರ್ಯದರ್ಶಿಗಳಾಗಿ ನೇಮಕಗೊಂಡ ನನ್ನ ಬ್ಯಾಚ್ಮೇಟ್‌ಗಳಿಗೆ ಅಭಿನಂದನೆಗಳು! ಇದು ಸಂತೋಷದ ಸಂದರ್ಭವಾಗಿದ್ದರೂ, ಒಬ್ಬ ವ್ಯಕ್ತಿಯು ಹಿಂದುಳಿದಿದ್ದಕ್ಕಾಗಿ ಇದು ಅಷ್ಟೇ ಪ್ರಮಾಣದ ನಿರಾಶೆಯನ್ನು ತರುತ್ತದೆ ಎಂದು ಹೇಳಿದ್ದರು.

### ಸಿಬಿಎಸ್‌ಇ 2025ನೇ ಸಾಲಿನ ಎಸ್‌ಎಸ್‌ಸಿ ಫಲಿತಾಂಶ

# ಕು|ನಿಶಿ ದಿವಾಕರ್ ಶೆಟ್ಟಿ ಶೇ.98.02 ಅಂಕಗಳು

**ಮುಂಬಯಿ (ಆರ್‌ಬಿಐ), ಏ.30:** ಐಸಿಎಸ್‌ಇ (ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜ್ಯುಕೇಶನ್) ತನ್ನ 2025ನೇ ಸಾಲಿನ ಎಸ್‌ಎಸ್‌ಸಿ ಫಲಿತಾಂಶವನ್ನು ಪ್ರಕಟಿಸಿದ್ದು ಎನ್.ಎಲ್. ದಾಲ್ಮಿಯಾ ಹೈಸ್ಕೂಲು ಮಿರಾರೋಡ್ ಪೂರ್ವದಲ್ಲಿನ (ಥಾಣೆ) ಇದರ ವಿದ್ಯಾರ್ಥಿನಿ ಕು| ನಿಶಿ ದಿವಾಕರ್ ಶೆಟ್ಟಿ 98.02% ಅಂಕಗಳನ್ನು ಪಡೆದು ಸರ್ವೋತ್ಕೃಷ್ಟ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಕು| ನಿಶಿ ಅವರು ಪ್ರತಿಭಾನ್ವಿತ ಲೇಖಕ, ಉದ್ಯಮಿ ಅಡ್ಯಾರ್ ನಡಿಗುತ್ತು ದಿವಾಕರ್ ಶೆಟ್ಟಿ ಮತ್ತು ಶಮ್ಮಿ ಶೆಟ್ಟಿ ದಂಪತಿ ಸುಪುತ್ರಿ ಆಗಿದ್ದಾರೆ.



# ಕೇಂದ್ರ ಸರ್ಕಾರ ನೋಟರಿ ಆಗಿ ಅಡ್ವೊಕೇಟ್ ಶೇಖರ್ ಎಸ್.ಭಂಡಾರಿ ನೇಮಕ



**ಮುಂಬಯಿ, ಏ.30:** ಸುಮಾರು ಮೂರುವರೆ ದಶಕಗಳಿಂದ ರಾಷ್ಟ್ರದ ಆರ್ಥಿಕ ರಾಜಧಾನಿ ಬೃಹನ್ಮುಂಬೈಯಲ್ಲಿ ಕ್ರಿಮಿನಲ್ ಅಡ್ವೊಕೇಟ್ ಆಗಿ ಸೇವಾ ನಿರತ ಅಡ್ವೊಕೇಟ್ ಶೇಖರ್ ಎಸ್ . ಭಂಡಾರಿ ಅವರ ಗುರುತರ ಸೇವೆಯನ್ನು ಗುರುತಿಸಿ ಭಾರತ ಸರ್ಕಾರ ಅವರನ್ನೊಳಗೊಂಡ ನೋಟರಿ ಆಗಿ ನೇಮಿಸಿದೆ . ಉಡುಪಿ ತಾಲೂಕು ಪಡುಬಿದ್ರಿ ಮೂಲತಃ ವಕೀಲ ಶೇಖರ್ ಭಂಡಾರಿ ಅವರು ವಿಜಯ ಕಾಲೇಜು ಮುಲ್ಕಿಯ ಅಲ್ಲಿ 1988 ರಲ್ಲಿ ಬಿಕಾಮ್ ಪದವಿ ಪೂರೈಸಿ ಮಹಾರಾಷ್ಟ್ರದ ಕಲ್ಯಾಣ್‌ಗೆ ಬಂದು ನೆಲೆಸಿದರು.

ಆ ಬಳಿಕ ಅಂಧೇರಿಯಲ್ಲಿ ಖಾಸಗಿ ರಫ್ತು ಕಂಪನಿಯಲ್ಲಿ ತಮ್ಮ ವೃತ್ತಿ ಜೀವನ ಆರಂಭಿಸಿದರು. ಕೆಲಸ ಜೊತೆಗೆ 1989 ರಲ್ಲಿ ಥಾಣೆ ಲಾ ಕಾಲೇಜ್ ನಲ್ಲಿ ಎಲ್ ಎಲ್ ಬಿ ವ್ಯಾಸಂಗದೊಂದಿಗೆ ಕಾನೂನು ಪದವಿಧರರಾದರು . ಬಳಿಕ ಎಲ್‌ಎಲ್‌ಎಂ ಪರಿಣಾಮರಾಗಿ ಬಾಂಬೆ ಹೆಚ್ಚಿನ ನಲ್ಲಿ ತಮ್ಮ ವಕೀಲವೃತ್ತಿ ಆರಂಭಿಸಿದರು . ಪ್ರಸ್ತುತ ಬಾಂಬೇ ಹೈಕೋರ್ಟ್ ಸಿಟಿ ಸಿವಿಲ್ ಹಾಗೂ ಸೆಶನ್ಸ್ ಕೋರ್ಟ್ ನಲ್ಲಿ ನ್ಯತ ಮತ್ತು ಪ್ರತಿಷ್ಠಿತ ವಕೀಲರಾಗಿ ಗುರುತಿಸಿ ಕೊಂಡಿದ್ದಾರೆ. ವೃತ್ತಿ ಜೊತೆಗೆ ಸಮಾಜಹಿತ ಸೇವೆಯಲ್ಲಿ ತೊಡಗಿಸಿಕೊಂಡು ಸ್ವಸಮಾಜ ಭಂಡಾರಿ ಸೇವಾ ಸಮಿತಿ ಮುಂಬೈ ಇದರ ಅಧ್ಯಕ್ಷರಾಗಿ, ಸದ್ಯ ಸಮಿತಿಯ ಕಾನೂನು ಸಲಹೆಗಾರರಾಗಿ ಮೂಲ್ಕಿ ವಿಜಯ ಕಾಲೇಜಿನ ಹಳೇ ವಿದ್ಯಾಥಿ ಸಂಘ ಮುಂಬೈ ಘಟಕ ದ ಉಪಾಧ್ಯಕ್ಷ ಆಗಿ ಮತ್ತು ಭಾಂಡೂಪ್ ನ ಭಟ್ಟಿಪಾಡ ಶನೀಶ್ವರ ಮಂದಿರ ಇದರ ಕಾನೂನು ಸಲಹೆಗಾರರಾಗಿ ಸೇವಾ ನಿರತರಾಗಿದ್ದಾರೆ.

### ಮೊದಲನೇ ಪುಟದಿಂದ

# ಪ್ರಧಾನಿ ಮೋದಿ ಆಧುನಿಕ ಪ್ರಪಂಚದ ಕಾಯಕಯೋಗಿ ಬಸವಣ್ಣ: ವಿ.ಸೋಮಣ್ಣ ಬಣ್ಣನೆ

ಇಂದು 21ನೇ ಶತಮಾನದಲ್ಲಿ ಇದೇ ತತ್ವದಡಿಯಲ್ಲಿ ಕಾಯಕ ಮಾಡುತ್ತಿದ್ದಾರೆ ಆಧುನಿಕ ಜಗತ್ತಿನ ಅಭಿವೃದ್ಧಿಯ ಹರಿಕಾರ, ಕಾಯಕಯೋಗಿ ಪ್ರದಾನಿ ಮೋದಿಯವರು ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಸಂತಸ ವ್ಯಕ್ತಪಡಿಸಿದ್ದಾರೆ. ಭಾರತ ದೇಶ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯವಾಗಿ ಪ್ರಬಲ ರಾಷ್ಟ್ರವಾಗಬೇಕೆಂಬ ಹಂಬಲದಿಂದ ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್, 1ಸಬ್ಕಾ ಪ್ರಯಾಸ್, ಎಂಬ ಧ್ಯೇಯ ಮಂತ್ರದೊಂದಿಗೆ ಪ್ರಧಾನಿ ಮೋದಿಯವರು ಈ ದೇಶವನ್ನು ಮುನ್ನೆಡುಸುತ್ತಿದ್ದಾರೆ ಮೋದಿಯವರು ಆಧುನಿಕ ಭಾರತದ ?ಕಾಯಕಯೋಗಿ ಬಸವಣ್ಣ? ಎಂದರೆ ತಪ್ಪಾಗಲಾರದು ಎಂದು ಕೇಂದ್ರ ಸಚಿವ ವಿ. ಸೋಮಣ್ಣ ನವದೆಹಲಿಯಲ್ಲಿ ಬಸವಜಯಂತಿ ಕಾರ್ಯಕ್ರಮದಲ್ಲಿ ತಿಳಿಸಿದ್ದಾರೆ.

ಜಗಜ್ಯೋತಿ ಬಸವಣ್ಣನವರ 894ನೇ ಜಯಂತಿಯನ್ನು ಸಂಸತ್ತಿನ ಆವರಣದಲ್ಲಿ ಅಚರಿಸಲು ಸನ್ಮಾನ್ಯ ಪ್ರಧಾನಿ ಮಂತ್ರಿ ನರೇಂದ್ರ ಮೋದಿಯವರು ಮತ್ತು ಲೋಕಸಭಾ ಸ್ಪೀಕರ್ ಶ್ರೀ ಓಂ ಬಿರ್ಲಾ ಅವರು ಅನುಮತಿಯನ್ನು ನೀಡಿದ್ದಾರೆ. ಬಸವಮೂರ್ತಿ ಸಂಸತ್ತಿನ ಆವರಣದಲ್ಲಿ ಸ್ಥಾಪನೆಯಾಗಿ ಸುಮಾರು 22 ವರ್ಷಗಳ ನಂತರ ಇಂತಹ ಜಯಂತಿಯ ಕಾರ್ಯಕ್ರಮವನ್ನು ಆಯೋಜಿಸಿಲು ಅವಕಾಶ ಸಿಕ್ಕಿದೆ. ಇದು ಕನ್ನಡ ನಾಡಿನ ಸಮಸ್ತ ಜನತೆಗೆ ಸಂಸತ್ತಿನ ಮುಖೇನ ಭಾರತ ಸರ್ಕಾರ ನೀಡಿದ ಮಹಾ ಗೌರವ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಈ ಸಮಾರಂಭದಲ್ಲಿ, ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿಗಳವರು ದಿವ್ಯ ಉಪಸ್ಥಿತಿ ವಹಿಸಿದ್ದರು. ಹಾಗೆಯೇ, ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್ ಅವರು, ಕಿರಣ್ ರಿಜುಜು ಅವರು, ಪ್ರಲ್ಹಾದ್ ಜೋಷಿಯವರು, ಕೇಂದ್ರದ ರಾಜ್ಯ ಖಾತೆ ಸಚಿವರಾದವಿ.ಸೋಮಣ್ಣ ಶೋಭಾ ಕರಂದ್ಲಾಜೆಯವರು, ಶ್ರೀ ರವ್ನೀತ್ ಸಿಂಗ್ ಬಿಟ್ಟು ಅವರು, ಶ್ರೀ ರಾಜ್ಭೂಷಣ್ ಚೌಧರಿ ಅವರು, ಸಂಸದರಾದ ಶ್ರೀ ಪಿ.ಸಿ ಗದ್ದಿಗೌಡರು ಅವರು, ಶ್ರೀ ತೇಜಸ್ವಿ ಸೂರ್ಯ ಅವರು, ರಾಜ್ಯಸಭಾ ಸಂಸದರಾದ ಈರಣ್ಣ ಬಿ. ಕಡಾಡಿಯವರು, ಅಣ್ಣಾಸಾಹೇಬ್ ಜೊಲ್ಲೆ ಹಾಗೂ ಶಶಿಕಲಾ ಜೊಲ್ಲೆಯವರು ಹಾಗೂ ಪ್ರಮುಖ ಗಣ್ಯಮಾನ್ಯರು, ಪರಮಪೂಜ್ಯ ಸ್ವಾಮೀಜಿಗಳವರು ಉಪಸ್ಥಿತರಿದ್ದರು.

### ಹಿಂದುಳಿದ ವರ್ಗಗಳಿಗೆ ಬಸವಣ್ಣನ ಕೊಡುಗೆ ಅಪಾರ: ಕರಂದ್ಲಾಜೆ ಬಣ್ಣನೆ

**ವಿಶ್ವಗುರು ಬಸವಣ್ಣನನ್ನು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹಾಡಿ ಹೊಗಳಿದ್ದಾರೆ. ಹಿಂದುಳಿದ ವರ್ಗಗಳ ಕ್ಷೇಮಾಭಿವೃದ್ಧಿಗೆ ಅವರು ನೀಡಿದ ಕೊಡುಗೆ ಅಪಾರ ಎಂದು ಹೇಳಿದ್ದಾರೆ. ನವದೆಹಲಿಯಲ್ಲಿ ಮಾತಾಡಿದ ಅವರು, ಬಸವಣ್ಣನ ಸಮಾನತೆ ಹೋರಾಟ ನಿಜಕ್ಕೂ ಎಲ್ಲರಿಗೂ ಮಾದರಿಯಾಗಿದೆ.ಸಮಾಜದಲ್ಲಿ ಮೇಲ್ವರ್ಗ ಹಾಗೂ ಕೀಳುವರ್ಗ ಎಂಬ ಭಾವನೆಯನ್ನು ತೊಲಗಿಸಲು ಹೋರಾಡಿದ ರೀತಿ ನಿಜಕ್ಕೂ ಅದ್ಭುತ ಎಂದು ಬಣ್ಣಿಸಿದರು. ಬ್ರಾಹ್ಮಣ ಸಮುದಾಯದಲ್ಲಿ ಹುಟ್ಟಿ ತುಳಿತಕ್ಕೊಳಗಾದ ಜನರ ಧ್ವನಿಯಾಗಿ ಬಸವಣ್ಣ ನಿಂತಿದ್ದರು. ಅವರ ತತ್ವ ಆದರ್ಶ ಇವತ್ತಿಗೂ ಪ್ರಸ್ತುತ ಎಂದು ತಿಳಿಸಿದರು. ಎಲ್ಲಾ ಜಾತಿಗಳ ನಡುವೆ ಸಮಾನತೆ ಮೂಡಿಸಿದ ಹೆಗ್ಗಳಿಕೆ ಅವರಿಗೆ ಸಲ್ಲುತ್ತದೆ. ಸಂಘರ್ಷವನ್ನು ದ್ವೇಷಿಸಿ, ಶಾಂತಿಯನ್ನು ಸಾರಿದ ಮಹಾನ್ ವ್ಯಕ್ತಿ ಬಸವಣ್ಣ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ**

# ಕುದ್ರೋಳಿ ಗಣೇಶ್ ಪ್ರಸ್ತುತಿಯ ವಿನೂತನ ಕಾರ್ಯಕ್ರಮ ಮೈಂಡ್ ಮಿಸ್ಟರಿ ವಿಜ್ಞಾನ ಮನಶಾಸ್ತ್ರ–ಜಾದೂ ಕಲಾ ಸಂಗಮದ ಮನರಂಜನಾ ಕಲಾಪ್ರಕಾರ



**ಮುಂಬಯಿ, ಏ.30:** ಸುಳ್ಯದ ಕೇರ್ಪಳದ ಬಂಟರ ಭವನದಲ್ಲಿ ಕಳೆದ ಶನಿವಾರ ಮಾಯಾವಿ ಕುದ್ರೋಳಿ ಗಣೇಶ್ ಅವರು ಪ್ರಥಮ ಬಾರಿಗೆ ಮೈಂಡ್ ಮಿಸ್ಟರಿ ವಿನೂತನ ಕಾರ್ಯಕ್ರಮ ನಡೆಸಿದ್ದು ಮೆಂಟಲಿಸಮ್ ಚಮತ್ಕಾರಕ್ಕೆ ಪ್ರೇಕ್ಷಕರು ಮೂಕ ವಿಸ್ಮಿತರಾದರು. ಜಾದೂ ರಂಗದ ಹೊಚ್ಚ ಹೊಸ ಕಲಾಪ್ರಯೋಗ ಮೈಂಡ್ ಮಿಸ್ಟರಿ ಮೂಲಕ ಸುಪ್ತ ಮನಸ್ಸಿನ ಶಕ್ತಿಯ ಅನಾವರಣ ಪ್ರೇಕ್ಷಕರಲ್ಲಿ ಅಚ್ಚರಿ ಮೂಡಿಸಿತು. ಇದೊಂದು ವಿಜ್ಞಾನ ಮನಶಾಸ್ತ್ರ ಹಾಗೂ ಮ್ಯಾಜಿಕ್ ಕಲೆಯ ಸಂಗಮದ ಮೆಂಟಲಿಸಮ್ ಎಂಬ ಹೊಸ ಪ್ರಯೋಗ ವಿಶೇಷವಾಗಿ ಗಮನ ಸೆಳೆದಿದ್ದು ಮೈಂಡ್ ರೀಡಿಂಗ್, ಭವಿಷ್ಯವಾಣಿ, ಸಮ್ಮೋಹಿನಿ, ಎನ್ ಎಲ್ ಪಿ, ಟೆಲಿಪತಿ, ಅಗೋಚರ ಸಂಪರ್ಕ, 6ನೇ ಇಂದ್ರಿಯದ ಅನುಭೂತಿಯ ರಂಗರೂಪಾತ್ಮಕ ಪ್ರಯೋಗ ನೆರೆದ ಪ್ರೇಕ್ಷರಲ್ಲಿ ನೂತನ ಅವಿಷ್ಕಾರ ಎಂದೂ ಮನೆಮಾತಾಯಿತು.

ಮೆಂಟಲಿಸಮ್ ಎಂಬ ವಿಜ್ಞಾನ ಮನಶಾಸ್ತ್ರ– ಜಾದೂ ಕಲೆಯ ಸಂಗಮದ ಮನರಂಜನಾ ಕಲಾ ಪ್ರಕಾರವನ್ನು ಮಾಯಾವಿ ಕುದ್ರೋಳಿ ಗಣೇಶ್ ಅವರು ಪ್ರೇಕ್ಷಕರ ಮನಸ್ಸಿನ ಭಾವ, ವ್ಯಕ್ತಿತ್ವದ ವರ್ತನೆ, ಮನೋ ಕಲ್ಪನೆಯ ಸ್ವರೂಪವನ್ನು ಅಭ್ಯಸಿಸಿ ತರ್ಕಕ್ಕೆ ನಿಲುಕದ ಪ್ರಯೋಗಗಳನ್ನು ಪ್ರದರ್ಶಿಸಿದರು. ಮೆಂಟಲಿಸಮ್ ಕಲೆಯ ಹೊಚ್ಚ ಹೊಸ ಪ್ರಯೋಗವಾಗಿರುವ ಮೈಂಡ್ ಮಿಸ್ಟರಿ ಪ್ರದರ್ಶನದ ಮೂಲಕ ಪ್ರೇಕ್ಷಕರಿಗೆ ಅಚ್ಚರಿಯ ಲೋಕ ತೆರೆದಿಟ್ಟರು. ಮನಸ್ಸಿನ ತರ್ಕವನ್ನೇ ಪ್ರಶ್ನಿಸುವ ಹತ್ತು ಹಲವು ಮನೋ ಭ್ರಮೆಗಳಿಂದ ತುಂಬಿರುವ ಒಂದೂವರೆ ಗಂಟೆಗಳ ಕಾಲ ಮೈಂಡ್ ಮಾಯಾವಿ ಕುದ್ರೋಳಿ ಗಣೇಶ್ ನಡೆಸಿದರು.

ಮೆಂಟಲಿಸಮ್ ಎಂಬ ವಿಜ್ಞಾನ ಮನಶಾಸ್ತ್ರ– ಜಾದೂ ಕಲೆಯ ಸಂಗಮದ ಮನರಂಜನಾ ಕಲಾ ಪ್ರಕಾರವನ್ನು ಮಾಯಾವಿ ಕುದ್ರೋಳಿ ಗಣೇಶ್ ಅವರು ಪ್ರೇಕ್ಷಕರ ಮನಸ್ಸಿನ ಭಾವ, ವ್ಯಕ್ತಿತ್ವದ ವರ್ತನೆ, ಮನೋ ಕಲ್ಪನೆಯ ಸ್ವರೂಪವನ್ನು ಅಭ್ಯಸಿಸಿ ತರ್ಕಕ್ಕೆ ನಿಲುಕದ ಪ್ರಯೋಗಗಳನ್ನು ಪ್ರದರ್ಶಿಸಿದರು. ಮೆಂಟಲಿಸಮ್ ಕಲೆಯ ಹೊಚ್ಚ ಹೊಸ ಪ್ರಯೋಗವಾಗಿರುವ ಮೈಂಡ್ ಮಿಸ್ಟರಿ ಪ್ರದರ್ಶನದ ಮೂಲಕ ಪ್ರೇಕ್ಷಕರಿಗೆ ಅಚ್ಚರಿಯ ಲೋಕ ತೆರೆದಿಟ್ಟರು. ಮನಸ್ಸಿನ ತರ್ಕವನ್ನೇ ಪ್ರಶ್ನಿಸುವ ಹತ್ತು ಹಲವು ಮನೋ ಭ್ರಮೆಗಳಿಂದ ತುಂಬಿರುವ ಒಂದೂವರೆ ಗಂಟೆಗಳ ಕಾಲ ಮೈಂಡ್ ಮಿಸ್ಟರಿ ವಿನೂತನ ಪ್ರದರ್ಶನ ಅದ್ಭುತ ಲೋಕದಲ್ಲಿ ಪ್ರೇಕ್ಷಕರನ್ನು ತೇಲಾಡಿಸಿತು. ಮನಸ್ಸನ್ನು ಓದುವ ಮೈಂಡ್ ರೀಡಿಂಗ್, ಮನಸ್ಸು ಮನಸ್ಸುಗಳ ಮಧ್ಯದ ಅಗೋಚರ ಸಂಪರ್ಕದ ಟೆಲಿಪತಿ, ವ್ಯಕ್ತಿಯ ವರ್ತನೆಯ ಮೇಲೆ ಪ್ರಭಾವ ಬೀರುವ ಎನ್. ಎಲ್.ಪಿ, ಮುಂದಾಗುವ ವಿಚಾರಗಳನ್ನು ಮೊದಲೇ ಸೂಚಿಸುವ ಭವಿಷ್ಯವಾಣಿ ಮುಂತಾದ ಹಲವು ಚಮತ್ಕಾರಗಳು ಮೈಂಡ್ ಮಿಸ್ಟರಿಯಲ್ಲಿ ತೆರೆದುಕೊಂಡಿತು.

ಕಾರ್ಯಕ್ರಮದ ಸಂಯೋಜಕರಾದ ಸುಳ್ಯ ವರ್ತಕರ ಸಂಘದ ಅಧ್ಯಕ್ಷ ಪಿ.ಬಿ.ಸುಧಾಕರ ರೈ, ಬಂಟರ ಸಂಘದ ಅಧ್ಯಕ್ಷ ಜಯಪ್ರಕಾಶ್ ರೈ, ಪದ್ಮಶ್ರೀ ಪುರಸ್ಕೃತ ಗಿರೀಶ್ ಭಾರದ್ವಾಜ್, ಉದ್ಯಮಿ ರಾಮಚಂದ್ರ ರಾವ್ ಆದ್ರೋ, ಡಾ| ಜ್ಯೋತಿ ರೇಣುಕಾಪ್ರಸಾದ್ ಕೆ.ವಿ, ಡಾ| ಲೀಲಾಧರ್ ಡಿ.ವಿ, ಲಯನ್ಸ್ ಅಧ್ಯಕ್ಷ ಲ| ರಾಮಕೃಷ್ಣ ರೈ, ರೋಟರಿ ಕ್ಲಬ್ ಅಧ್ಯಕ್ಷೆ ರೊ| ಯೋಗೀತಾ ಗೋಪಿನಾಥ್, ವಿಜಯಲಕ್ಷ್ಮಿ ಅಶೋಕ್ ಪ್ರಭು ಸುಳ್ಯ, ಲ| ಡಿ.ಎಸ್‌ಗಿರೀಶ್, ರೊ| ಗಣೇಶ್ ಭಟ್, ಕುಸುಮಾಧರ ರೈ ಬೂಡು ವೇದಿಕೆಯಲ್ಲಿ ಉಪಸ್ಥಿತರಿದ್ದು ಸುಳ್ಯದ ಪ್ರೇಕ್ಷಕರ ಪರವಾಗಿ ರಾಷ್ಟ್ರ ಮಟ್ಟದ ಅದ್ಭುತ ಜಾದೂ ಕಲಾವಿದ ಮಾಯಾವಿ ಕುದ್ರೋಳಿ ಗಣೇಶ್ ಮತ್ತು ರಂಜಿತಾ ಗಣೇಶ್ ದಂಪತಿಯನ್ನು ಸನ್ಮಾನಿಸಿ ಅಭಿನಂದಿಸಿದರು. ಸಂಯೋಜಕರಾದ ಪಿ.ಬಿ.ಸುಧಾಕರ ರೈ ಸ್ವಾಗತಿಸಿ, ಅಭಿನಂದನಾ ನುಡಿಗಳನ್ನಾಡಿ ವಂದಿಸಿದರು.

# ಬಿಯರ್ ಬಾಟಲ್‌ಗೆ ಶೇ.10 ಅಬಕಾರಿ ತೆರಿಗೆ ಹೆಚ್ಚಳಕ್ಕೆ ನಿರ್ಧಾರ

**ಬೆಂಗಳೂರು, ಏ.30:** ಕರ್ನಾಟಕ ಸರ್ಕಾರವು ಎಲ್ಲಾ ಬಿಯರ್‌ಗಳ ಮೇಲಿನ ಹೆಚ್ಚುವರಿ ಅಬಕಾರಿ ತೆರಿಗೆಯನ್ನು ಶೇ.10 ರಷ್ಟು ಹೆಚ್ಚಳ ಮಾಡಲು ನಿರ್ಧರಿಸಿದೆ. ಸದ್ಯ ರಾಜ್ಯದಲ್ಲಿ ಬಿಯರ್ ಮೇಲಿನ ತೆರಿಗೆ ಉತ್ಪಾದನಾ ವೆಚ್ಚದ ಶೇ.195 ರಷ್ಟಿದೆ. ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.205 ಕ್ಕೆ ಹೆಚ್ಚಿಸುವ ಬಗ್ಗೆ ರಾಜ್ಯದ ಹೊಸ ಕರಡು ನಿಯಮದಲ್ಲಿ ಉಲ್ಲೇಖಿಸಲಾಗಿದೆ. ಪ್ರೀಮಿಯಂ ಅಥವಾ ಇತರ ಬಿಯರ್ ಬ್ರಾಂಡ್‌ಗಳ ಬೆಲೆಯು ಉತ್ಪಾದನಾ ವೆಚ್ಚವನ್ನು ಅವಲಂಬಿಸಿ ಪ್ರತಿ ಬಾಟಲ್‌ಗೆ 10 ರೂ. ಗಳಷ್ಟು ಹೆಚ್ಚಾಗಬಹುದು ಎಂದು ನಿರೀಕ್ಷಿಸಲಾಗಿದೆ. ಒಟ್ಟಾರೆಯಾಗಿ ತೆರಿಗೆ ಹೆಚ್ಚಳದ ನಂತರ ಬಿಯರ್ ದರ 10 ರೂ.ನಷ್ಟು ಹೆಚ್ಚಳವಾಗಬಹುದು. ಮಧ್ಯಮ ಶ್ರೇಣಿಯ ಮತ್ತು ಅಗ್ಗದ ಸ್ಥಳೀಯ ಬಿಯರ್‌ಗಳಿಗೆ ಪ್ರತಿ ಬಾಟಲ್‌ಗೆ 5 ರೂಪಾಯಿ ವರೆಗೆ ದರ ಏರಿಕೆಯಾಗುವ ಸಾಧ್ಯತೆ ಇದೆ. ಬೆಲೆ ಏರಿಕೆಯು ಬ್ರ್ಯಾಂಡ್‌ನಿಂದ ಬ್ರ್ಯಾಂಡ್‌ಗೆ ವ್ಯತ್ಯಸ್ತವಾಗಿರಲಿದೆ.ಹಿಂದೆ, ಕರ್ನಾಟಕದಲ್ಲಿ ಬಿಯರ್‌ಗೆ ಎರಡು ಹಂತದ ತೆರಿಗೆ ವ್ಯವಸ್ಥೆ ಇತ್ತು. ಕೆಳ ಹಂತದ ಬ್ರಾಂಡ್‌ಗಳಿಗೆ ಲೀಟರ್‌ಗೆ 130 ರೂ. ವರೆಗೆ ತೆರಿಗೆ ವಿಧಿಸಲಾಗುತ್ತಿತ್ತು.

ಆದರೆ ಇತರ ಬ್ರಾಂಡ್‌ಗಳಿಗೆ ಶೇಕಡಾವಾರು ತೆರಿಗೆ ವಿಧಿಸಲಾಗುತ್ತಿತ್ತು. ಈ ವ್ಯವಸ್ಥೆಯನ್ನು ಈಗ ರದ್ದುಗೊಳಿಸಲಾಗಿದ್ದು, ಎಲ್ಲಾ ಬಿಯರ್‌ಗಳಿಗೆ ಏಕರೂಪದ ಶೇ.205 ರ ತೆರಿಗೆ ನಿಗದಿಪಡಿಸಲಾಗಿದೆ.ತೆರಿಗೆ ವ್ಯವಸ್ಥೆಯನ್ನು ಸರಳಗೊಳಿಸುವ ಗುರಿಯೊಂದಿಗೆ ಈ ಕ್ರಮ ಕೈಗೊಳ್ಳಲಾಗಿದೆ. ಕಡಿಮೆ ತೆರಿಗೆ ಶ್ರೇಣಿಯನ್ನು ತೆಗೆದುಹಾಕುವುದರೊಂದಿಗೆ, ಎಲ್ಲಾ ಬಿಯರ್ ಬ್ರಾಂಡ್‌ಗಳಿಗೆ ಒಂದೇ ರೀತಿಯ ತೆರಿಗೆ ವಿಧಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ. ಈಗಿನ ಪ್ರಸ್ತಾವಿತ ಬಿಯರ್ ತೆರಿಗೆ ದರ ಹೆಚ್ಚಳದೊಂದಿಗೆ, ಮೂರು ವರ್ಷಗಳ ಅವಧಿಯಲ್ಲಿ ಬಿಯರ್ ಮೇಲಿನ ತೆರಿಗೆಯನ್ನು ಮೂರನೇ ಬಾರಿ ಹೆಚ್ಚಳ ಮಾಡಿದಂತಾಗಲಿದೆ. 2023ರ ಜುಲೈನಲ್ಲಿ ಕಾಂಗ್ರೆಸ್ ಸರ್ಕಾರವು ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.175 ರಿಂದ 185ಕ್ಕೆ ಹೆಚ್ಚಿಸಿತ್ತು. 2025ರ ಜನವರಿ 20 ರಂದು ಮತ್ತೊಂದು ಪರಿಷ್ಕರಣೆ ಮಾಡಲಾಗಿತ್ತು. ಆಗ ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.195ಕ್ಕೆ ಅಥವಾ ಪ್ರತಿ ಬಲ್ಕ್ ಲೀಟರ್‌ಗೆ ರೂ 130ರ ವರೆಗೆ (ಯಾವುದು ಹೆಚ್ಚೋ ಅದಕ್ಕೆ ಅನುಗುಣವಾಗಿ) ಹೆಚ್ಚಳ ಮಾಡಿತ್ತು. ಇದೀಗ ಮತ್ತೆ ತೆರಿಗೆ ಹೆಚ್ಚಳ ಮಾಡಿದೆ. ಮೂಲ ಅಬಕಾರಿ ಸುಂಕವನ್ನು ಸಹ ಪರಿಷ್ಕರಿಸಲಾಗಿದೆ. ಫ್ಲಾಟ್ ರೇಟ್ ಬದಲಿಗೆ, ಆಲ್ಕೋಹಾಲ್ ಅಂಶವನ್ನು ಆಧರಿಸಿದ ಶ್ರೇಣೀಕೃತ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ಶೇ.5 ಅಥವಾ ಅದಕ್ಕಿಂತ ಕಡಿಮೆ ಆಲ್ಕೋಹಾಲ್ ಹೊಂದಿರುವ ಬಿಯರ್‌ಗೆ ಪ್ರತಿ ಬಲ್ಕ್ ಲೀಟರ್‌ಗೆ 12 ರೂ., ಮತ್ತು ಶೇ.5–8 ರ ಆಲ್ಕೋಹಾಲ್ ಹೊಂದಿರುವ ಬಿಯರ್‌ಗೆ 20 ರೂ. ನಿಗದಿಪಡಿಸಲಾಗಿದೆ.

# ಕಾಂಗ್ರೆಸ್‌ನ ಮೋದಿ ಗಾಯಬ್ ಪೋಸ್ಟರ್ ವಿವಾದ: ಛಲವಾದಿ ಕಿಡಿ




**ಬೆಂಗಳೂರು, ಏ.30:** ಪ್ರಧಾನಿ ಮೋದಿ ಅವರನ್ನು ಗುರಿಯಾಗಿಸಿಕೊಂಡು ಕಾಂಗ್ರೆಸ್ ಮಾಡಿರುವ ಗಾಯಬ್ ಪೋಸ್ಟ್ ಬಗ್ಗೆ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿಕಾರಿದ್ದಾರೆ. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಗಯಾಬ್ ಆಗುತ್ತದೆ ಎಂದು ಅವರು ಹೇಳಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ಅವರ ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಳ್ಳುವುದಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ನಾಯಕರು ಅವರಿಗೆ ಇಷ್ಟ ಬಂದಂತೆ ಮಾತನಾಡುತ್ತಾರೆ. ಅವರಲ್ಲಿ ಯಾವುದೇ ಸಂಬಂಧವೇ ಇಲ್ಲದಂತಿದ್ದಾರೆ. ನಿನ್ನೆಯಷ್ಟೇ ಅವರ ಎಕ್ಸ್ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ ಕಣ್ಮರೆಯಾಗಿದ್ದಾರೆ (ಗಾಯಬ್) ಎಂದು ಹೇಳಿದರು. ಅದರಲ್ಲಿ ಮೋದಿ ಅವರನ್ನು ಸೂಚಿಸುತ್ತಿದ್ದ ಚಿತ್ರದಲ್ಲಿ ತಲೆಯೇ ಇರಲಿಲ್ಲ ಎಂದು ವಾಗ್ದಾಳಿ ನಡೆಸಿದರು.

ಗಾಯಬ್ ಎಂದರೆ ಏನು? ಓಡಿಹೋಗುವುದು. ನನ್ನ ಪ್ರಕಾರ ಕಾಂಗ್ರೆಸ್ ಮುಂದಿನ ಚುನಾವಣೆಯಲ್ಲಿ ಗಾಯಬ್ ಆಗಲಿದೆ. ಕಾಂಗ್ರೆಸ್ ಭಾರತಕ್ಕಿಂತಲೂ ಪಾಕಿಸ್ತಾನದಲ್ಲೇ ಹೆಚ್ಚು ಜನಪ್ರಿಯವಾಗಿದೆ. ಈಗ ಭಾರತದ ಪ್ರತಿಯೊಬ್ಬ ಪ್ರಜೆಯೂ ಕಾಂಗ್ರೆಸ್ ಅನ್ನು ವಿರೋಧಿಸುತ್ತಿದ್ದಾರೆ. ಏಕೆಂದರೆ ಅವರ ನೈಜ ಬಣ್ಣ ಈಗ ಬಯಲಾಗಿದೆ. ಅವರು ತಲೆ ಇಲ್ಲದ ಪ್ರಧಾನಿಯನ್ನು ತೋರಿಸಿದ್ದಾರೆ. ಇದು ಕಾಂಗ್ರೆಸ್ ಪಕ್ಷಕ್ಕೆ ನಾಚಿಕೆಗೇಡಿನ ವಿಚಾರ ಎಂದು ಹೇಳಿದರು.ಇದೇ ವೇಳೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರು ಯಾರು ಎಂದು ಸ್ಪಷ್ಟಪಡಿಸಲು ಕಾಂಗ್ರೆಸ್‌ಗೆ ಒತ್ತಾಯಿಸಿದ್ದಾರೆ. ಕಾಂಗ್ರೆಸ್ ಎಂದರೆ ಎಐಸಿಸಿ. ಅದರ ಅಧ್ಯಕ್ಷರೇ ಹೈಕಮಾಂಡ್ ಹತ್ರ ಮಾತನಾಡುವುದಾಗಿ ಹೇಳಿದ್ದಾರೆ. ಹಾಗಿದ್ರೆ ಕಾಂಗ್ರೆಸ್ ಪಕ್ಷಕ್ಕೆ ಹೈಕಮಾಂಡ್ ಎಂದರೆ ಯಾರು? ಅಧ್ಯಕ್ಷರೇ ಹೈಕಮಾಂಡ್ ಅಲ್ವಾ? ಹಾಗಿದ್ದರೆ ಮಲ್ಲಿಕಾರ್ಜುನ ಖರ್ಗೆ ಅವರು ಹಾಗೆ ಏಕೆ ಹೇಳಿದರು? ನಾನು ನಿನ್ನೆ ಮಾಧ್ಯಮಗಳಲ್ಲಿ ನೋಡಿದೆ. ಜೈರಾಮ್ ರಮೇಶ್ ಅವರು ಮಾತನಾಡುತ್ತಾ, ನಮ್ಮ ಅಧ್ಯಕ್ಷ ರಾಹುಲ್ ಗಾಂಧಿ ಹೇಳಿದ್ದಾರೆ, ಯಾರು ಕೂಡಾ ಪಾಕಿಸ್ತಾನದೊಂದಿಗೆ ಯುದ್ಧದ ಬಗ್ಗೆ ಮಾತನಾಡಬಾರದು ಎಂದು. ಇದು ಗೊಂದಲಮಯವಾದ ವಿಚಾರ. ಹಾಗಿದ್ದರೆ ಅವರಲ್ಲಿ ಅಧ್ಯಕ್ಷರು ಯಾರು? ಇದನ್ನು ಕಾಂಗ್ರೆಸ್ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.



ಬೆಂಗಳೂರಿನ ವರ್ತೂರು ರಸ್ತೆಯ ಕಡೆಗೆ ಗುಂಜೂರು ಜಂಕ್ಷನ್ ಬಳಿ ಬುಧವಾರ ಕಂಡುಬಂದ ಸರಣಿ ಅಪಘಾತದ ನೋಟ. ಇದರಿಂದಾಗಿ ಈ ಮಾರ್ಗದಲ್ಲಿ ವಾಹನಗಳ ಸಂಚಾರಕ್ಕೆ ಅಡ್ಡಿಯಾಯಿತು.

# ಕೆಎಎಸ್ ಮರು ಪರೀಕ್ಷೆ ನಡೆಸಿ ಅನ್ಯಾಯ ಸರಿಪಡಿಸಿ: ಪ್ರತಿಪಕ್ಷ ನಾಯಕ ಅಶೋಕ್ ಆಗ್ರಹ

**ಬೆಂಗಳೂರು, ಏ.30:** ಕರ್ನಾಟಕದಲ್ಲಿ 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ' ವೃಂದದ 384 ಹುದ್ದೆಗಳ ನೇಮಕಾತಿ ಬಹಳ ಚರ್ಚೆಯ ವಿಷಯವಾಗಿದೆ. ಕೆಎಎಸ್ ಹುದ್ದೆಗಳ ನೇಮಕಾತಿಯ ಪೂರ್ವಭಾವಿ ಪರೀಕ್ಷೆ ಪಶ್ನೆ ಪತ್ರಿಕೆಯ ಕನ್ನಡ ದೋಷ ಅಭ್ಯರ್ಥಿಗಳ ಆಕ್ರೋಶಕ್ಕೆ ಕಾರಣವಾಗಿತ್ತು. ಪೂರ್ವಭಾವಿ ಪರೀಕ್ಷೆಯನ್ನು ಎರಡು ಬಾರಿ ಮಾಡಲಾಗಿದ್ದು, ಈಗ ಮುಖ್ಯ ಪರೀಕ್ಷೆಯ ವೇಳಾಪಟ್ಟಿಯನ್ನು ಸಹ ಘೋಷಣೆ ಮಾಡಲಾಗಿದೆ. ಕೆಎಎಸ್ ನೇಮಕಾತಿ ಪೂರ್ವಭಾವಿ ಪರೀಕ್ಷೆ ಕುರಿತ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಸರ್ಕಾರದ ಗಮನ ಸೆಳೆದಿದ್ದಾರೆ. ಈ ಕುರಿತು ಅವರು ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಪತ್ರವನ್ನು ಬರೆದಿದ್ದಾರೆ. ವಿಧಾನಸಭೆಯ ಅಧಿವೇಶನದಲ್ಲಿ ಆಶ್ವಾಸನೆ ಕೊಟ್ಟಂತೆ ದೋಷಪೂರಿತ ಕೆಎಎಸ್ ಪೂರ್ವಭಾವಿ ಪರೀಕ್ಷೆಯನ್ನು ರದ್ದುಪಡಿಸಿ, ಮರು ಪರೀಕ್ಷೆಗೆ ಆದೇಶಿಸುವ ಮೂಲಕ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ 70,000ಕ್ಕೂ ಹೆಚ್ಚು ಗ್ರಾಮೀಣ ಅಭ್ಯರ್ಥಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಆರ್. ಅಶೋಕ ತಮ್ಮ ಪತ್ರದಲ್ಲಿ ಕರ್ನಾಟಕ ಲೋಕಸೇವಾ ಆಯೋಗವು 2023–24 ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 509/ ಇ(1)/ 2023–24, ದಿನಾಂಕ 26–02–2024ರಂದು ಹೊರಡಿಸಲಾಗಿತ್ತು.

# ಜನಗಣತಿ–ಜಾತಿಗಣತಿ ಮಾಡಲು ಕೇಂದ್ರದ ನಿರ್ಧಾರ ಸ್ವಾಗತಾರ್ಹ: ಮಾಜಿ ಡಿಸಿಎಂ ಅಶ್ವತ್ಥನಾರಾಯಣ್ ಸ್ವಾಗತ



**ಬೆಂಗಳೂರು, ಏ.30:** ಕೇಂದ್ರ ಸರಕಾರವು ಜನಗಣತಿ ಜೊತೆಗೆ ಜಾತಿಗಣತಿ ಮಾಡಲು ಮುಂದಾಗಿರುವುದು ಸ್ವಾಗತಾರ್ಹ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್.ಅಶ್ವತ್ಥನಾರಾಯಣ್ ಅವರು ತಿಳಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜ್ಯ ಸರಕಾರಕ್ಕೆ ಜಾತಿ ಗಣತಿ ಮಾಡಲು ಅಧಿಕಾರ ಇಲ್ಲದಿದ್ದರೂ ಸಾಮಾಜಿಕ ಮತ್ತು ಶೈಕ್ಷಣಿಕ ಸರ್ವೇ ಅಡಿಯಲ್ಲಿ ಜಾತಿ ಗಣತಿ ನಡೆದಿತ್ತು. ಆದರೆ, ಕರ್ನಾಟಕದಲ್ಲಿ ಈ ವಿಷಯದಲ್ಲಿ ಗೊಂದಲವಾಗಿತ್ತು. ಇದು ಸರಿಯಾಗಿ ಮಾಡಿಲ್ಲ; ಕಾನೂನುಬದ್ಧವಾಗಿ ಇಲ್ಲ; ಪ್ರತಿ ಮನೆಗೆ ಹೋಗಿಲ್ಲ ಹಾಗೂ ಎಲ್ಲ ಜಾತಿಯ ಗಣತಿ ಸರಿಯಾಗಿ ನಡೆದಿಲ್ಲ ಎಂಬ ಕೂಗು ಕೇಳಿಸಿತ್ತು ಎಂದು ಗಮನ ಸೆಳೆದರು. ಕಾಂಗ್ರೆಸ್ ಸರಕಾರ ಈ ವಿಷಯದಲ್ಲಿ ಗೊಂದಲ ನಿರ್ಮಾಣ ಮಾಡಿತ್ತು. ಸಮಾಜದಲ್ಲಿ ಗೊಂದಲ, ಜಾತಿಗಳ ನಡುವೆ ಗೊಂದಲಕ್ಕೆ ಕಾರಣವಾಗಿತ್ತು. ಇದಕ್ಕೆಲ್ಲ ಅಂತ್ಯ ಕಾಣಿಸಲು ಮತ್ತು ತೆರೆ ಎಳೆಯಲು ಕೇಂದ್ರ ಸರಕಾರ ಸ್ಪಷ್ಟ, ವೈಜ್ಞಾನಿಕ ಹಾಗೂ ಕಾನೂನುಬದ್ಧ, ಅಧಿಕಾರದ ಭಾಗವಾಗಿ ಜಾತಿ ಗಣತಿಯನ್ನು ಮಾಡಲಿದೆ. ವ್ಯವಸ್ಥಿತವಾಗಿ ಇದು ನಡೆಯಲಿದೆ ಎಂದು ತಿಳಿಸಿದರು. ಸಮಾಜದ ಎಲ್ಲರ ಸ್ಥಿತಿಗತಿ ಗೊತ್ತಾಗಲಿದೆ.

**ಸ್ವಾತಂತ್ರ್ಯದ ಬಳಿಕ ಇದೇ ಮೊದಲ ಬಾರಿಗೆ ಕೇಂದ್ರ ಸರಕಾರ ಜಾತಿ ಗಣತಿ ಮಾಡುತ್ತಿದೆ. ಈ ನಿರ್ಧಾರವನ್ನು ಬಿಜೆಪಿ ಕರ್ನಾಟಕ ಘಟಕ ಸ್ವಾಗತಿಸುತ್ತದೆ ಎಂದು ಅವರು ಹೇಳಿದರು. ದೇಶದ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಪರಿಸ್ಥಿತಿಗಳ ಬಗ್ಗೆ ನಿರ್ಧಾರ ಮಾಡಲು ಮತ್ತು ಭವಿಷ್ಯದ ಅನೇಕ ನಿರ್ಧಾರಕ್ಕೆ ಇದು ಸಹಾಯಕ ಎಂದು ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು ವಿಶ್ಲೇಷಿಸಿದ್ದಾರೆ.**

ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಬಿಜೆಪಿ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

# ಪ್ರಜ್ವಲ್ ರೇವಣ್ಣ ಪರ ವಾದ ಮಾಡಲು ಪ್ರತ್ಯೇಕ ವಕೀಲರ ನೇಮಕ

**ಬೆಂಗಳೂರು, ಏ.30:** ಕೆಲಸದಾಕೆ ಮೇಲಿನ ಅತ್ಯಾಚಾರ ಪ್ರಕರಣದ ಆರೋಪಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಪ್ರತ್ಯೇಕ ವಕೀಲರನ್ನು ನೇಮಕ ಮಾಡಿ ಜನಪ್ರತಿನಿಧಿಗಳ ನ್ಯಾಯಾಲಯ ಆದೇಶ ಹೊರಡಿಸಿದೆ. ಪ್ರಜ್ವಲ್ ರೇವಣ್ಣ ಪರ ವಕೀಲರು ಹಿಂದೆ ಸರಿದ ಹಿನ್ನೆಲೆಯಲ್ಲಿ ಹೊಸ ವಕೀಲರ ನೇಮಕಕ್ಕೆ ಸಮಯ ಕೊಡಬೇಕೆಂದು ಕೋರಿದ್ದರು. ಜನಪ್ರತಿನಿಧಿಗಳ ನ್ಯಾಯಾಲಯ ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್, ಮಂಗಳವಾರ ವಿಚಾರಣೆ ಕೈಗೊಂಡು ಈಗಾಗಲೇ ಸಾಕಷ್ಟು ಕಾಲಾವಕಾಶ ನೀಡಲಾಗಿದೆ ಎಂದು ತಿಳಿಸಿದರು.

ಟ್ರಯಲ್ ಪ್ರಾರಂಭ ಮಾಡಲು ನನ್ನ ಬಳಿ ವಕೀಲರು ಇಲ್ಲ ಎಂದು ಪ್ರಜ್ವಲ್ ರೇವಣ್ಣ ಎಂದು ಕೋರ್ಟ್ ಗಮನಕ್ಕೆ ತಂದರು. ನಿಮಗೆ ವಕೀಲರನ್ನು ನೇಮಿಸಿಕೊಳ್ಳಲು ಸಾಕಷ್ಟು ಸಮಯ ನೀಡಲಾಗಿತ್ತು ಎಂದು ಮನವಿಯನ್ನು ತಿರಸ್ಕರಿಸಿತು.

ಕೊನೆಗೆ ಕಾನೂನು ಸೇವೆಗಳ ಪ್ರಾಧಿಕಾರದಿಂದ ಉಚಿತ ಕಾನೂನು ಸೇವೆ ಒದಗಿಸಲು ವಕೀಲೆ ಆರ್. ಎಸ್. ಜಯಶ್ರೀ ಅವರನ್ನು ಪ್ರಜ್ವಲ್ ಪರ ವಾದಕ್ಕೆ ನಿಯೋಜನೆ ಮಾಡಿತು. 2 ತಿಂಗಳಲ್ಲಿ ಟ್ರಯಲ್ ಮುಗಿಸುವುದಾಗಿ ಕೋರ್ಟ್ ಸೂಚಿಸಿ ಮೇ 2ಕ್ಕೆ ವಿಚಾರಣೆ ಮುಂದೂಡಿದರು.

# ತಿಮ್ಮಾಪುರ ವಿರುದ್ಧ ಸಂಸದ ಜಗದೀಶ್ ಶೆಟ್ಟರ್ ಕಟು ಟೀಕೆ



**ಬೆಂಗಳೂರು, ಏ.30:** ತಿಮ್ಮಾಪುರ ಅವರು ಬಾಗಲಕೋಟೆಯಲ್ಲಿ ಕುಳಿತು ಈ ರೀತಿ ಮಾತನಾಡುವುದು ಸರಿಯಲ್ಲ. ದಾಳಿ ನಡೆದ ಸ್ಥಳದಲ್ಲಿ ತಿಮ್ಮಾಪುರ ಅವರು ಹೋಗಬೇಕಿತ್ತು. ಆಗ ಗೊತ್ತಾಗುತ್ತಿತ್ತು ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಮಾತನಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ರೀತಿ ಮಾತಾನಾಡುತ್ತಿರುವುದಕ್ಕೆ ಅವರು ಇಂತಹ ಸರ್ಕಾರದಲ್ಲಿ ಸಚಿವರಾಗಿರುವುದು. ಜನರ ಮನಸ್ಸನ್ನು ವಿಷಯಾಂತರ ಮಾಡುವ ಉದ್ದೇಶದಿಂದಲೇ ಇದೀಗ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದಾರೆ. ಕಾಂಗ್ರೆಸ್‌ನವರಿಗೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುವುದಕ್ಕೆ ಯಾವುದೇ ನೇತಿಕತೆ ಇಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.ಸಿಂಧೂ ನದಿ ವಿಚಾರವಾಗಿ ಮಾತನಾಡಿದ ಜಗದೀಶ್ ಶೆಟ್ಟರ್, ಜವಾಹರಲಾಲ್ ನೆಹರೂ ಮಾಡಿದ ತಪ್ಪಿನಿಂದಾಗಿ ಇಂದು ದೇಶ ಕಷ್ಟ ಅನುಭವಿಸುತ್ತಿದೆ. ಸಿಂಧೂ ನದಿ ವಿಚಾರವಾಗಿ ನೆಹರೂ ಮಾಡಿದ ತಪ್ಪನ್ನು ಇಂದು ಮೋದಿ ಸರಿ ಮಾಡುತ್ತಿದ್ದಾರೆ. ಹೀಗಾಗಿ ಕಾಂಗ್ರೆಸ್ ನವರಿಗೆ ಮೋದಿ ವಿರುದ್ಧ ಮಾತನಾಡುವ ಯಾವುದೇ ನೈತಿಕ ಹಕ್ಕು ಇಲ್ಲ ಎಂದು ಹುಬ್ಬಳ್ಳಿಯಲ್ಲಿ ಜಗದೀಶ್ ಶೆಟ್ಟರ್ ಹೇಳಿಕೆ ನೀಡಿದ್ದಾರೆ.

# ನಾಳೆ–ನಾಡಿದ್ದು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಸಾಧ್ಯತೆ

**ಮೇ 2 ಇಲ್ಲವೇ 3 ರಂದು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಬಿಡುಗಡೆ ಆಗುವ ನಿರೀಕ್ಷೆ ಇದೆ.**

**ಬೆಂಗಳೂರು, ಏ. 30:** ಕರ್ನಾಟಕದಲ್ಲಿ ಎಸ್‌ಎಸ್‌ಎಲ್ಸಿ ಪರೀಕ್ಷೆ ಬರೆದಿದ್ದ ಲಕ್ಷಾಂತರ ವಿದ್ಯಾರ್ಥಿಗಳು ಮತ್ತವರ ಪೋಷಕರ ಚಿತ್ತ ಫಲಿತಾಂಶ ಬಿಡುಗಡೆಯತ್ತ ನೆಟ್ಟಿದೆ. ಫಲಿತಾಂಶ ಬಿಡುಗಡೆಗೆ ಸಿದ್ಧತೆ ಆರಂಭಿಸಿರುವ ಕರ್ನಾಟಕ ರಾಜ್ಯ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ತನ್ನ ಅಧಿಕೃತ ವೆಬ್‌ಸೈಟ್‌ಲ್ಲಿ ಬಿಡುಗಡೆ ಮಾಡಲಿದೆ.ಮಾ.21ರಿಂದ ಏ.04 ರವರೆಗೆ ಕರ್ನಾಟಕದ ಸಾವಿರಾರು ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಸೂಸೂತ್ರವಾಗಿ ನಡೆದಿವೆ. ಪರೀಕ್ಷೆಗಳ ಮೌಲ್ಯಮಾಪನ ಕಾರ್ಯವನ್ನು ಕರ್ನಾಟಕ ರಾಜ್ಯ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ಪೂರ್ಣಗೊಳಿಸಿದೆ. ಅಂತಿಮ ಹಂತದ ಕೆಲಸಗಳು ನಡೆಯುತ್ತಿವೆ. ಅದಾಗುತ್ತಿದ್ದಂತೆ ಇದೇ ವಾರವೇ ಬಹುನಿರೀಕ್ಷೆ SSLC exam result 2025 karnataka ಬಿಡಗಡೆ ಆಗಲಿದೆ ಎಂದು ಮೂಲಗಳು ತಿಳಿಸಿವೆ.ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಎಸ್‌ಎಸ್‌ಎಲ್ಸಿ ಫಲಿತಾಂಶ ಪರಿಶೀಲನೆಗೆ ಹೇಗೆ? ಯಾವ ವೆಬ್‌ಸೈಟ್‌ನಲ್ಲಿ ಪರಿಶೀಲಿಸಬೇಕು.

ದಿನಾಂಕ ಅಥವಾ 10ನೇ ತರಗತಿ ಫಲಿತಾಂಶ ಡೌನ್‌ಲೋಡ್ ಹೇಗೆ ಎಂಬ ಮಾಹಿತಿ ಇಲ್ಲಿದೆ. ಪರೀಕ್ಷೆ ಮೌಲ್ಯಮಾಪನ ಪೂರ್ಣಗೊಳಿಸಿರುವ ಕರ್ನಾಟಕ ರಾಜ್ಯ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ (KSEAB) ತಾಂತ್ರಿಕ ಕೆಲಸಗಳಲ್ಲಿ ನಿರತವಾಗಿದೆ. ಆ ಪ್ರಕ್ರಿಯೆ ಇನ್ನೇನು ಪೂರ್ಣಗೊಳ್ಳಲಿದೆ. ಮೇ 1ರಂದು ಕಾರ್ಮಿಕ ರಜೆ ಹಿನ್ನೆಲೆಯಲ್ಲಿ ಮೇ 2 ಇಲ್ಲವೇ 3 ರಂದು ಪರೀಕ್ಷೆ ಫಲಿತಾಂಶ ಬಿಡುಗಡೆ ಆಗುವ ನಿರೀಕ್ಷೆ ಇದೆ. ಮಂಡಳಿಯು ಅಗತ್ಯ ಎಲ್ಲ ಸಿದ್ಧತೆ ಮಾಡಿಕೊಂಡಿದೆ.

ಬಳಿಕ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ 2025 ಲಿಂಕ್ ಆಯ್ಕೆ ಮಾಡಿಕೊಳ್ಳಬೇಕು.

ಪರದೇ ಮೇಲೆ ಕಾಣಿಸಿಕೊಳ್ಳುವ ಖಾಲಿ ಬಾಕ್ಸ್‌ಗಳಲ್ಲಿ ನಿಮ್ಮ ಪರೀಕ್ಷಾ ನೋಂದಣಿ ಸಂಖ್ಯೆ, ಜನ್ಮ ದಿನಾಂಕ ಸೇರಿದಂತೆ ಅಗತ್ಯ ಮಾಹಿತಿ ದಾಖಲಿಸಬೇಕು.

# ಅಲೆಮಾರಿ ಜನಾಂಗ ಅಭಿವೃದ್ಧಿಗೆ 75 ಕೋಟಿ ರೂ. ಬಿಡುಗಡೆ



**ಬೆಂಗಳೂರು, ಏ.30:** ಗುಡಿಸಲು ಮುಕ್ತ ಸಮಾಜದ ನಿರ್ಮಾಣದ ಕನಸನ್ನು ನನಸು ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶೇಷ ಕಾಳಜಿ ವಹಿಸಿದ್ದು, ಈ ನಿಟ್ಟಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಸರ್ಕಾರ 75 ಕೋಟಿ ಅನುದಾನ ಬಿಡುಗಡೆ ಮಾಡಿದೆ ಎಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ತಿಳಿಸಿದರು. ತಾಲೂಕಿನ ಕೆಲವು ಗ್ರಾಮಗಳಲ್ಲಿ ವಾಸ ಮಾಡುತ್ತಿರುವ ಅಲೆಮಾರಿ ಸಮುದಾಯದ ಜನರ ಸ್ಥಿತಿಗತಿ ಕುರಿತು ಖುದ್ದಾಗಿ ಆಯ ಗ್ರಾಮಗಳಿಗೆ ಭೇಟಿ ನೀಡಲು ಬಂದಿದ್ದ ಸಂದರ್ಭದಲ್ಲಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ವಸತಿ ಮತ್ತು ನಿವೇಶನ ರಹಿತ ಅಲೆಮಾರಿ ಸಮುದಾಯದವರಿಗೆ ಸವಲತ್ತುಗಳನ್ನು ಒದಗಿಸಿಕೊಡಲು ವಿಶೇಷವಾಗಿ ನಮ್ಮ ಸರ್ಕಾರ ಆದ್ಯತೆ ನೀಡುತ್ತಿದೆ' ಎಂದರು.ತಾಲ್ಲೂಕಿನ ಅಗ್ರಹಾರ ಗೇಟ್ ಬಳಿ ಅಲೆಮಾರಿ ಸಮುದಾಯದವರು ವಾಸ ಮಾಡುತ್ತಿದ್ದು, ಅವರಿಗೆ ಕನಿಷ್ಠ ಮೂಲಸೌಲಭ್ಯಗಳನ್ನು ಒದಗಿಸಿಕೊಡು ವಲ್ಲಿ ಸಂಬಂಧಪಟ್ಟವರು ಕಾಳಜಿ ವಹಿಸದ ಪರಿಣಾಮ ಇಂದಿಗೂ ಸಹ ಕೆಟ್ಟ ಪರಿಸ್ಥಿತಿಯಲ್ಲಿ ಹೀನಾಯವಾಗಿ ಬದುಕು ಸಾಗುತ್ತಿದೆ ಎಂದು ಎಂದು ಹಲವರು ಪಲ್ಲವಿ ಅವರ ಗಮನ ಸೆಳೆದರು.ಸಭೆಯಲ್ಲಿ ಉಪಸ್ಥಿತರಿದ್ದ ತಹಶೀಲ್ದಾರ್ ವೈ.ಎಂ.ರೇಣುಕುಮಾರ್, ತಾಲ್ಲೂಕು ಪಂಚಾಯಿತಿ ಇಒ ಮುನಿರಾಜು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ ಅವರನ್ನು ಉದ್ದೇಶಿಸಿ ಮಾತನಾಡಿದ ಅಧ್ಯಕ್ಷೆ ಜಿ.ಪಲ್ಲವಿ, ಗುರುವಾರ ಬೆಳಿಗ್ಗೆ ಆ ಗ್ರಾಮಕ್ಕೆ ನಾನು ತೆರಳಲಿದ್ದು, ಆ ಗ್ರಾಮ ಸಂಪೂರ್ಣ ಶುಚಿತ್ವದಿಂದ ಕೂಡಿರಬೇಕು. ಸ್ವಚ್ಛಗೊಳಿಸುವ ವಿಷಯದಲ್ಲಿ ಇಂದೇ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು. ತಾಲ್ಲೂಕು ಕಚೇರಿ ಸಿಬ್ಬಂದಿ ಸತೀಶ್ ಸಾವನ್ನಪ್ಪಿದ್ದು, ಕಚೇರಿಯ ಮುಂಭಾಗದಲ್ಲಿ ಇರಿಸಿದ್ದ ಮೃತದೇಹದ ಬಳಿ ತೆರಳಿ ಸಂತಾಪ ಶ್ರದ್ಧಾಂಜಲಿ ಸಲ್ಲಿಸಿದ ಪಲ್ಲವಿ, ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದರು.ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ. ಲಕ್ಷ್ಮಣ, ಪಲ್ಲವಿ ಅವರನ್ನು ಸನ್ಮಾನಿಸಿದರು.

# ವೈಟ್ ಕ್ಯಾಟಗರಿಗೆ ಜೈವಿಕ ಇಂಧನ ಸೇರ್ಪಡೆಗೆ ಕ್ರಮ: ಎಸ್.ಇ.ಸುಧೀಂದ್ರ



**ಬೆಂಗಳೂರು, ಏ.30–** ಪರಿಸರ ಸ್ನೇಹಿ ಜೈವಿಕ ಇಂಧನವನ್ನು ಮಾಲಿನ್ಯಕಾರಕವಲ್ಲದ ಇಂಧನದ ಗುಂಪಿಗೆ (ವೈಟ್‌ಕ್ಯಾಟಗರಿ) ಸೇರ್ಪಡೆ ಮಾಡುವ ನಿಟ್ಟಿನಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಕಾರದೊಂದಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ನಿ.ಸುಧೀಂದ್ರ ಹೇಳಿದರು. ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ವತಿಯಿಂದ ಜೈವಿಕ ಇಂಧನ ನೀತಿ ನಿರೂಪಣೆಯಲ್ಲಿನ ಬದಲಾವಣೆ ಹಾಗೂ ನಿಲುವುಗಳ ಕುರಿತು ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಲಾಗಿದ್ದ ಸಂವಾದದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಂವಾದದ ವೇಳೆ ಜೈವಿಕ ಇಂಧನವನ್ನು ರಾಜ್ಯದಲ್ಲಿ ಮಾಲಿನ್ಯಕಾರಕವಲ್ಲದ ಇಂಧನ (ವೈಟ್‌ಕ್ಯಾಟಗರಿ)ಗೆ ಸೇರ್ಪಡೆ ಮಾಡುವ ಕುರಿತು ಸಂವಾದಕರೊಬ್ಬರು ಪ್ರಸ್ತಾಪಿಸಿದರು. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ಈಗಾಗಲೇ ಎಲ್ಲಾ ಮಾದರಿಯ ಜೈವಿಕ ಇಂಧವನ್ನು ಮಾಲಿನ್ಯಕಾರಕವಲ್ಲದ ಇಂಧನದ ಗುಂಪಿಗೆ ಸೇರಿಸಿದೆ, ರಾಜ್ಯದಲ್ಲೂ ಈ ಕೆಲಸ ಆಗಬೇಕು ಎಂದು ಪ್ರಸ್ತಾಪಿಸಿದರು, ಪ್ರಸ್ತುತದಲ್ಲಿ ಜೈವಿಕ ಇಂಧನ ಬಳಕೆ ಮಾಡುವವರ ಸಂಖ್ಯೆ ಹೆಚ್ಚಿಸಬೇಕು ಎಂಬುದು ಅನಿವಾರ್ಯ ಹೀಗಾಗಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರನ್ನೂ ಸಂವಾದನಕ್ಕೆ ಆಹ್ವಾನಿಸಿ, ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದೆವು. ಇದಕ್ಕೆ ಸ್ಪಂದಿಸಿದ ಅಧ್ಯಕ್ಷರು, ಕ್ರಮ ಕೈಗೊಳ್ಳುವ ಬಗ್ಗೆ ಆಶ್ವಾಸನೆ ನೀಡಿದರು.ಇನ್ನು, ರಾಜ್ಯದಲ್ಲಿ ಜೈವಿಕ ಇಂಧನ ಉತ್ಪಾದನಾ ಘಟಕ ಆರಂಭಕ್ಕೆ ವಿಫುಲ ಅವಕಾಶಗಳಿದ್ದು, ಹೂಡಿಕೆದಾರರು ಮುಂದೆ ಬರಬೇಕು. ನಮ್ಮಲ್ಲಿ ಮೂಲಸೌಕರ್ಯ, ತೆರಿಗೆ ಪದ್ಧತಿ, ಕಚ್ಚಾವಸ್ತುಗಳ ಲಭ್ಯತೆ, ನೇಪಿಯರ್ ಗ್ರಾಸ್, ಕೃಷಿತ್ಯಾಜ್ಯ ಸೇರಿದಂತೆ ಜೈವಿಕ ಇಂಧನ ಉತ್ಪಾದನೆಗೆ ಸಾಕಷ್ಟು ಪೂರಕ ವಾತಾವರಣವಿದ್ದು, ಹೂಡಿಕೆದಾರರಿಗೆ ರಾಜ್ಯ ಸೂಕ್ತ ಸ್ಥಳವಾಗಿದೆ ಎಂದು ಹೇಳಿದರು. ಕ್ರಿಯಾಶೀಲ ಮಹಿಳಾ ಉದ್ಯಮಿಗಳೂ ಕೂಡ ಜೈವಿಕ ಇಂಧನ ಕ್ಷೇತ್ರದಲ್ಲಿ ಹೆಚ್ಚೆಚ್ಚು ತೊಡಗಿಕೊಳ್ಳಬೇಕು, ಈಗಾಗಲೇ ಎಲ್ಲಾ ಕ್ಷೇತ್ರದಲ್ಲಿ ತಮ್ಮ ಪಾತ್ರದ ಪ್ರಾಮುಖ್ಯತೆ ಎತ್ತಿಹಿಡಿದಿದ್ದಾರೆ, ಈ ಕ್ಷೇತ್ರವು ಮಹಿಳೆಯರು ಸಬಲೀಕರಣಗೊಳ್ಳಲು ಉತ್ತಮ ವೇದಿಕೆಯಾಗಲಿದೆ ಎಂದು ಆಹ್ವಾನಿಸಿದರು.ಇನ್ನು, ಸಂವಾದದಲ್ಲಿ ಕೇಳಿಬಂದ ಪ್ರಶ್ನೆಗೆ ಉತ್ತರಿಸಿದ ಅಧ್ಯಕ್ಷರು, ಮಂಡಳಿಯು ರಾಜ್ಯದಲ್ಲಿ ಜೈವಿಕ ಇಂಧನ ಕ್ಷೇತ್ರದಲ್ಲಿ ಎಲ್ಲಾ ವಿಭಾಗಗಳಲ್ಲಿ ಮೊದಲ ಸ್ಥಾನದಲ್ಲಿ ನಿಲ್ಲುವಂತೆ ಮಾಡಲು ಕಟಿಬದ್ಧವಾಗಿದ್ದು ಎಲ್ಲಾ ಕೈಗಾರಿಕಾ ಪ್ರತಿನಿಧಿಗಳು ನೀಡಿರುವ ಸಲಹೆಗಳನ್ನು ಕ್ರೋಢೀಕರಿಸಿ ಉದ್ದೇಶಿತ ಜೈವಿಕ ಇಂಧನ ನೀತಿಯಲ್ಲಿ ಅಳವಡಿಸಿಕೊಳ್ಳಲು ಶ್ರಮಿಸುವುದಾಗಿ ಭರವಸೆ ನೀಡಿದರು. ಇಂದಿನ ಕಾರ್ಯಕ್ರಮವು ಯಶಸ್ವಿಯಾಗಿ ಆಯೋಜನೆಯಾಗಿದ್ದು ಇದೇ ಸಂದರ್ಭದಲ್ಲಿ ಶುಭ ಕೋರುವ ವಿಶ್ವವಿದ್ಯಾನಿಲಯದೊಂದಿಗೆ ಜೈವಿಕ ಇಂಧನ ಕ್ಷೇತ್ರದಲ್ಲಿ ಕೈಜೋಡಿಸಲು ಶೀಘ್ರದಲ್ಲಿಯೇ ಒಡಂಬಡಿಕೆ ಮಾಡಿಕೊಳ್ಳಲು ಸಿದ್ಧತೆ ನಡೆದಿದ್ದು ಮುಂಬರುವ ದಿನಗಳಲ್ಲಿ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಗೆ ವಿಶ್ವವಿದ್ಯಾಲಯಗಳು, ಕೃಷಿ ವಿಶ್ವವಿದ್ಯಾಲಯಗಳು, ತಾಂತ್ರಿಕ ಸಂಸ್ಥೆಗಳು, ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ನಿರತರಾಗಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಂಸ್ಥೆಗಳು ಪ್ರಧಾನ ಪಾತ್ರ ವಹಿಸಲಿದ್ದು ಜೈವಿಕ ಇಂಧನ ಕ್ಷೇತ್ರದಲ್ಲಿ ಕೆಲವೇ ತಿಂಗಳಲ್ಲಿ ಮಹತ್ತರ ಬದಲಾವಣೆಯನ್ನು ತರಲು ಮುನ್ನುಡಿ ಬರೆದಂತಾಗಿದೆ ಎಂದು ಅಭಿಪ್ರಾಯಪಟ್ಟರು.ಈ ಕಾರ್ಯಕ್ರಮದಲ್ಲಿ ಮಂಡಳಿಯ ಲೋಹಿತ್ ಬಿ.ಆರ್. ತಾಂತ್ರಿಕ ಅಧಿಕಾರಿಗಳು, ಯೋಜನಾ ಸಲಹೆಗಾರರಾದ ಡಾ. ದಯಾನಂದ ಜಿ ಎನ್, ಅಧ್ಯಕ್ಷರ ಸಲಹೆಗಾರರಾದ, ನಿಮೇಶ್ ದೀಪ್ ಸಿಂಗ್, ತಾಂತ್ರಿಕ ಸಲಹೆಗಾರರಾದ ಪ್ರಸಾದ್, ರಾಜೀವ್, ಸುಜಯ್ ಮಂಡಳಿಯ ಅಧಿಕಾರಿಗಳು ಭಾಗವಹಿಸಿದ್ದರು.

# ತೆರಿಗೆಯೂರು ಮಾಡಿದ್ದೇ ದರಾಸುರ ಡಿಸಿಎಂ ಸಾಧನೆ: ಜೆಡಿಎಸ್ ಟೀಕೆ

**ಬೆಂಗಳೂರು, ಏ.30–** ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಬೆಂಗಳೂರನ್ನು ತೆರಿಗೆಯೂರು ಮಾಡಿದ್ದೇ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಾಧನೆಯಾಗಿದೆ ಎಂದು ಜೆಡಿಎಸ್ ಟೀಕಿಸಿದೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನಗರದಲ್ಲಿ ಗುಂಡಿ ಬಿದ್ದಿರುವ ರಸ್ತೆಗಳು ಇನ್ನೂ ದುರಸ್ತಿಯಾಗಿಲ್ಲ. ಎಲ್ಲೆಂದರಲ್ಲಿ ಕಸದ ರಾಶಿಯೇ ತುಂಬಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರ ದಿನ ಬೆಳಗಾದರೇ ಒಂದಲ್ಲ ಒಂದು ತೆರಿಗೆ ಹೆಚ್ಚಿಸಿ, ಜನಸಾಮಾನ್ಯರ ಬದುಕನ್ನು ನರಕಮಾಡಿದೆ ಎಂದು ಆರೋಪಿಸಿದೆ.ಸಾಕಪ್ಪ ಸಾಕು, ಕಾಂಗ್ರೆಸ್ ಸರ್ಕಾರ ಎಂದಿರುವ ಜೆಡಿಎಸ್, ದರಾಸುರ ಸರ್ಕಾರ ಬೆಲೆ ಏರಿಕೆ ಗ್ಯಾರಂಟಿ ಮೂಲಕವೇ ರಾಜ್ಯದಲ್ಲಿ ಆಡಳಿತ ನಡೆಸುತ್ತಿದೆ. ಅದು ಯಾವ ಪರಿ ಎಂದರೇ ಕಸ ಸಂಗ್ರಹ ನೆಪದಲ್ಲಿ ಜನಸಾಮಾನ್ಯರಿಂದ ಸಾವಿರಾರು ಕೋಟಿ ರೂ. ವಸೂಲಿಗೆ ಇಳಿದಿದೆ ಎಂದು ಆಪಾದಿಸಿದೆ. 30x40 ಅಳತೆಯ ನಿವೇಶನಕ್ಕೆ 2024ರಲ್ಲಿ ಘನತ್ಯಾಜ್ಯ ಉಪಕರ 600 ರೂ. ವಿಧಿಸಲಾಗುತ್ತಿತ್ತು. 2025ರಲ್ಲಿ ಹೊಸ ಆದೇಶದ ಪ್ರಕಾರ 30x40 ಅಳತೆಯ ನಿವೇಶನಕ್ಕೆ ಬರೋಬ್ಬರಿ 3,000 ರೂ.ವಸೂಲಿ ಮಾಡಲಾಗುತ್ತಿದೆ ಎಂದು ಜೆಡಿಎಸ್ ಟೀಕಿಸಿದೆ.

ಮೊದಲನೇ ಪುಟದಿಂದ

# ಸಮಾನತೆಯ ಹರಿಕಾರ ಜಗಜ್ಯೋತಿ ಬಸವಣ್ಣ ವಿಶ್ವಗುರು: ಮುಖ್ಯಮಂತ್ರಿ

ಬಸವಣ್ಣ ಸಾಮಾಜಿಕ ಕ್ರಾಂತಿ ಮಾಡಿದ್ದಷ್ಟೇ ಅಲ್ಲ, ಸಾಮಾಜಿಕ ಪರಿವರ್ತನೆಗೆ ಇತಿಹಾಸದಲ್ಲೇ ಶಾಶ್ವತವಾಗಿ ಉಳಿಯುವ ಪ್ರಯತ್ನಗಳನ್ನು ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಅವರನ್ನು ಸಾಮಾಜಿಕ ಕ್ರಾಂತಿ ಮಾಡಿದರೂ ಎಂದು ಸೀಮಿತಗೊಳಿಸಬಾರದು. ಸಮಾಜದ ಪರಿವರ್ತನೆಗೆ ಇತಿಹಾಸದಲ್ಲಿ ಶಾಶ್ವತವಾಗಿ ನೆನಪಿನಲ್ಲಿ ಉಳಿಯುವ ಕೆಲಸವನ್ನು ಬಸವಣ್ಣ ತಮ ಜೀವಿತ ಅವಧಿಯಲ್ಲಿ ಮಾಡಿದ್ದಾರೆ. ಅವರನ್ನು ನೆನೆಯುವುದು ಭಾರತದ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿ ಎಂದರು.

ರಾಜ್ಯ ಸರ್ಕಾರ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದೆ. ನಾಡಿನ ಜನತೆಗೆ ವಿಶ್ವ ಬಸವ ಜಯಂತಿಯ ಶುಭಾಶಯವನ್ನು ಅವರು ಕೋರಿದರು. ಈ ಸಂದರ್ಭದಲ್ಲಿ ಸಚಿವ ಎಂ.ಬಿ. ಪಾಟೀಲ್, ಬಸವ ಸಮಿತಿಯ ಅಧ್ಯಕ್ಷರಾದ ಅರವಿಂದ ಜತ್ತಿ, ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್, ನಿವೃತ್ತ ಐಎಎಸ್ ಅಧಿಕಾರಿ ಡಾ. ಸಿ. ಸೋಮಶೇಖರ್, ಅಖಿಲ ಭಾರತ ವೀರಶೈವ ಮಹಾಸಭಾದ ಕಾರ್ಯದರ್ಶಿ ರೇಣುಕಪ್ರಸನ್ನ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ ಗುಡುಗು ಸಹಿತ ಭಾರಿ ಮಳೆ ಹವಾಮಾನ ಇಲಾಖೆ ಮುನ್ಸೂಚನೆ

**ಬೆಂಗಳೂರು, ಏ.30:** ಬೆಂಗಳೂರು ಸೇರಿದಂತೆ ರಾಜ್ಯದ 15ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಒಂದು ವಾರ ಗುಡುಗು ಸಹಿತ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಸೇರಿದಂತೆ ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಮೇ. 6 ರವರೆಗೆ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಇಂದಿನಿಂದ ಮೇ. 6 ರವರೆಗೆ ದಕ್ಷಿಣ ಕನ್ನಡ, ಬೆಳಗಾವಿ, ಧಾರವಾಡ, ಗದಗ, ಕೊಪ್ಪಳ, ರಾಯಚೂರು, ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ, ಮೈಸೂರು, ತುಮಕೂರು, ವಿಜಯನಗರ, ಯಾದಗಿರಿ, ಬಳ್ಳಾರಿ, ಚಾಮರಾಜನಗರದಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಹಾಗೂ Common Alerting Protocol ಮುಖಾಂತರ ಬರುವ Alerts/ಸಂದೇಶಗಳನ್ನು ಮೊಬೈಲ್‌ನಲ್ಲಿ ಗಮನಿಸುವುದು. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು. ಗುಡುಗು–ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಲ್ಲಿ ಆಶ್ರಯ ಪಡೆಯುವುದು. ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಖರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿಕೊಂಡು ಆಶ್ರಯ ಪಡೆಯುವುದು. ನೀರಿನ ಮೂಲಗಳಾದ ಕೆರೆ ಮತ್ತು ನದಿಗಳಿಂದ ದೂರವಿರುವುದು. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು, ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರುವುದು.

# ಬೀದರ್‌ನಲ್ಲಿ ಬಸವ ಜಯಂತಿ ಆಚರಣೆ: ಬಸವೇಶ್ವರ ಭಾವಚಿತ್ರಕ್ಕೆ ಸಚಿವರಾದ ಖಂಡ್ರೆ – ರಹೀಮ್ ಖಾನ್‌ರಿಂದ ಮಾಲಾರ್ಪಣೆ



**ಬೀದರ್, ಏ. 30:** ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯನ್ನು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಬುಧವಾರ ಸಡಗರ, ಸಂಭ್ರಮ ಹಾಗೂ ಶ್ರದ್ಧಾ, ಭಕ್ತಿಯಿಂದ ಆಚರಿಸಲಾಯಿತು.ನಗರದ ಹಾರೂರಗೇರಿ, ಓಲ್ಡ್ ಸಿಟಿಯ ಬಸವ ಮಂಟಪ, ಆದರ್ಶ ಕಾಲೊನಿಯ ಶರಣ ಉದ್ಯಾನ, ಪಾಪನಾಶದ ಬಸವಗಿರಿ, ಬಸವ ಕೇಂದ್ರ, ರಾಷ್ಟ್ರೀಯ ಬಸವ ದಳದಿಂದ ಬಸವೇಶ್ವರರ ತೊಟ್ಟಿಲು ಕಾರ್ಯಕ್ರಮ ನೆರವೇರಿಸಲಾಯಿತು.ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ, ಜಯಘೋಷ ಹಾಕಿದರು. ಅಲಂಕರಿಸಿದ ವಾಹನದಲ್ಲಿ ಬಸವೇಶ್ವರರ ಭಾವಚಿತ್ರ ಇರಿಸಿ, ಮೆರವಣಿಗೆ ಮಾಡಿದರು. ಗಾಂಧಿ ಗಂಜ್‌ನಲ್ಲಿ ಪಲ್ಲಕ್ಕಿ ಮೆರವಣಿಗೆ ನೆರವೇರಿಸಿದರು. ಮಹಿಳೆಯರು ಕೋಲಾಟ ಆಡಿ ಗಮನ ಸೆಳೆದರೆ, ಪುರುಷರು ವಚನ ಸಂಗೀತಕ್ಕೆ ಹೆಜ್ಜೆ ಹಾಕಿದರು. ಗಾಂಧಿ ಗಂಜ್ ಸೇರಿದಂತೆ ಹಲವು ಕಡೆಗಳಲ್ಲಿ ಅನ್ನದಾಸೋಹದ ವ್ಯವಸ್ಥೆ ಮಾಡಲಾಗಿತ್ತು. ದಿನವಿಡೀ ವಿವಿಧ ಕಡೆಗಳಿಂದ ಜನ ಬಸವೇಶ್ವರ ವೃತ್ತಕ್ಕೆ ತೆರಳಿ, ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಸೆಲ್ಫಿ, ಛಾಯಾಚಿತ್ರ ತೆಗೆದುಕೊಂಡರು.ಜಿಲ್ಲಾಡಳಿತ ಹಾಗೂ ಬಸವ ಜಯಂತಿ ಉತ್ಸವ ಸಮಿತಿ ಸಹಯೋಗದಲ್ಲಿ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್ ಅವರು ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಿದರು. ಬಳಿಕ ಕಾರ್ಯಕ್ರಮ ಉದ್ಘಾಟಿಸಿದರು. ಆನಂತರ ನಗರದ ಬಸವೇಶ್ವರ ವೃತ್ತದಲ್ಲಿ ಪುತ್ಥಳಿಗೆ ಸಚಿವದ್ವಯರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಸಚಿವ ಈಶ್ವರ ಬಿ. ಖಂಡ್ರೆಯವರು ಷಟಸ್ಥಲ ಧ್ವಜಾರೋಹಣ ನೆರವೇರಿಸಿದರು. ಬಳಿಕ ವಚನ ಸಂಗೀತಕ್ಕೆ ಇಬ್ಬರು ಸಚಿವರು ಭಕ್ತಿಭಾವದಿಂದ ಹೆಜ್ಜೆ ಹಾಕಿದರು.ಬಳಿಕ ಮಾತನಾಡಿದ ಸಚಿವ ಈಶ್ವರ ಬಿ. ಖಂಡ್ರೆ, 'ಜಗತ್ತಿನಲ್ಲಿ ಹೆಣ್ಣು, ಹೊನ್ನು ಹಾಗೂ ಮಣ್ಣಿಗಾಗಿ ಸಾಕಷ್ಟು ಕ್ರಾಂತಿಗಳು ನಡೆದಿವೆ. ಆದರೆ, ಸರ್ವರಿಗೂ ಸಮಾನತೆ ಕಲ್ಪಿಸಲು ನಡೆದದ್ದು ಕಲ್ಯಾಣ ಕ್ರಾಂತಿ. ಬಸವಾದಿ ಶಿವಶರಣರು ಸಕಲ ಜೀವಾತ್ಮರಿಗೆ ಲೇಸು ಬಯಸಿದವರು. ಅವರು ಕೊಟ್ಟ ವಚನ ಸಾಹಿತ್ಯದಲ್ಲಿ ಎಲ್ಲವೂ ಇದೆ. ಸಾಮಾಜಿಕ ನ್ಯಾಯಕ್ಕೆ ಹೆಚ್ಚಿನ ಮಹತ್ವ ಕೊಟ್ಟರು. ಅವರ ತತ್ವಾದರ್ಶಗಳ ಹಾದಿಯಲ್ಲಿ ನಾವೆಲ್ಲರೂ ಮುನ್ನಡೆಯಬೇಕಿದೆ' ಎಂದು ತಿಳಿಸಿದರು.'ನಾವೆಲ್ಲರೂ ವಚನಗಳನ್ನು ಹೇಳುತ್ತೇವೆ. ಆದರೆ, ಅವುಗಳಂತೆ ನಡೆಯುವುದು ಕಷ್ಟಸಾಧ್ಯ. ಆದರೆ, ಆ ನಿಟ್ಟಿನಲ್ಲಿ ನಡೆಯಲು ಪ್ರಯತ್ನಿಸಬೇಕು. ಆಗ ಬಸವ ಜಯಂತಿ ಆಚರಿಸಿದರೆ ಸಾರ್ಥಕವಾಗುತ್ತದೆ. ಜಾತಿರಹಿತ, ಶೋಷಣೆ ರಹಿತ ಸಮಾಜ ನಿರ್ಮಿಸಲು ಶ್ರಮಿಸೋಣ' ಎಂದರು. ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷ ಜೈರಾಜ್ ಖಂಡ್ರೆ, ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ, ನಗರಸಭೆ ಸದಸ್ಯೆ ಉಲ್ಲಾಸಿನಿ, ಡಿಸಿಸಿ ಬ್ಯಾಂಕ್ ನಿರ್ದೇಶಕಿ ಶಕುಂತಲಾ ಬೆಲ್ದಾಳೆ, ಮುಖಂಡರಾದ ವಿಜಯಕುಮಾರ ಪಾಟೀಲ ಖಾಜಾಪೂರ, ಸುರೇಶ ಸ್ವಾಮಿ, ಶರಣಪ್ಪ ಮಿಠಾರೆ, ಆನಂದ ದೇವಪ್ಪ, ಬಸವರಾಜ ಭತಮುರ್ಗೆ, ಗುರುನಾಥ ಕೊಳ್ಳೂರ, ಬಂಡೆಪ್ಪ ಕಾಶೆಂಪುರ್, ರಮೇಶ ಪಾಟೀಲ ಸೋಲಪೂರ, ಸುರೇಶ ಚನಶೆಟ್ಟಿ, ಸಂಜಯ್ ಜಾಹಗೀರದಾರ್, ವಿಠ್ಠಲದಾಸ ಪ್ಯಾಗೆ, ಮಾರುತಿ ಬೌದ್ಧೆ, ಗಣೇಶ ಬಿರಾದಾರ, ವಿವೇಕ ಪಟ್ನೆ, ಬಾಬುವಾಲಿ, ಪಂಡಿತರಾವ್ ಚಿದ್ರಿ, ಈಶ್ವರ ಸಿಂಗ್ ಠಾಕೂರ್, ವಿಜಯಕುಮಾರ ಸೋನಾರೆ ಮತ್ತಿತರರು ಪಾಲ್ಗೊಂಡಿದ್ದರು.

# ಮಹಾನ್ ಮಾನವತಾವಾದಿ ಬಸವಣ್ಣನ ಧ್ಯೇಯೋದ್ದೇಶ ಮನೆ ಮನ ತಲುಪಿದರೆ ಮಾತ್ರ ಕಲ್ಯಾಣ ರಾಜ್ಯ ಸಾಧ್ಯ: ಶರಣಪ್ಪ ಕೋಟಗಿ ಪ್ರತಿಪಾದನೆ



**ಹುಬ್ಬಳ್ಳಿ, ಏ.30:** ಮಹಾನ್ ಮಾನವತಾವಾದಿ, ಮಹಾಶರಣ, ಕಲ್ಯಾಣ ರಾಜ್ಯದ ಹರಿಕಾರ, ವಿಶ್ವಗುರು ಶ್ರೀ ಬಸವೇಶ್ವರ ಇವರ ವಿಚಾರಗಳು ವಿಶ್ವದ ಮನೆ ಮನ ಮುಟ್ಟಿದರೆ ಮಾತ್ರ ಕಲ್ಯಾಣ ರಾಜ್ಯ ಸಾಧ್ಯ ಎಂದು ಶ್ರೀ ಬಸವೇಶ್ವರ ರೂರಲ್ ಎಜುಕೇಷನ್ ಮತ್ತು ಡೆವಲಪ್ಮೆಂಟ್ ಅಧ್ಯಕ್ಷ ಶರಣಪ್ಪ ಕೋಟಗಿ ತಿಳಿಸಿದರು. ಶ್ರೀ ಬಸವೇಶ್ವರ ಜಯಂತಿ ಅಂಗವಾಗಿ ನಗರದ ಗ್ಲಾಸಹೌಸ್ ಎದುರಿನ ಶ್ರೀ ಬಸವೇಶ್ವರ ಪುತಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದರು. ಕನ್ನಡ ನೆಲದ ಮೇಲೆ ಸಮಾಜ ಕಲ್ಯಾಣ ಚಳುವಳಿ ಆರಂಭಿಸಿ, ಅನುಭವ ಮಂಟಪದ ಮೂಲಕ ಸರ್ವ ಜನಾಂಗದ ಜನರ ಅಂತರಾತ್ಮದ ಕಣ್ಣು ತೆರೆಸಿದ ವಿಶ್ವಗುರು ಬಸವಣ್ಣನವರು. ವಿಶ್ವದ ಸರ್ವ ಜನರ ಮನೆ ಮನ ಮುಟ್ಟಲು ಇಂದಿನ ಪ್ರತಿಯೊಬ್ಬ ಲಿಂಗಾಯತ ಪ್ರಯತ್ನಿಸಬೇಕೆಂದು ಶರಣಪ್ಪ ಕೋಟಗಿ ಈ ಸಂದರ್ಭದಲ್ಲಿ ಕರೆ ನೀಡಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರ ಶೀಘ್ರವೇ ಲಿಂಗಾಯತ ಧರ್ಮಕ್ಕೆ ಮಾನ್ಯತೆ ಕೊಡಬೇಕಾದ ಅವಶ್ಯಕತೆ ಇದೆ. ಅಂದಾಗ ಮಾತ್ರ ಬಸಣ್ಣನವರ ವಚನಗಳು ಮತ್ತು ಲಿಂಗಾಯತ ಧರ್ಮದ ಮಹತ್ವ ಜಗತ್ತಿಗೆ ಲೋಕಪ್ರಿಯ ಆಗುವುದರಲ್ಲಿ ಸಂದೇಹವಿಲ್ಲ ಎಂದು ಶರಣಪ್ಪ ಕೋಟಗಿ ತಿಳಿಸಿದರು. ವೀರಶೈವ ಲಿಂಗಾಯತ ಒಳ ಪಂಗಡಗಳ ಒಕ್ಕೂಟ ರಾಜ್ಯ ಘಟಕ ಆಶ್ರಯದಲ್ಲಿ ಮೂರು ಸಾವಿರ ಮಠದ ಪೂಜ್ಯ ಜಗದ್ಗುರು ಶ್ರೀ ಗುರುಸಿದ್ದ ರಾಯೋಗೇಂದ್ರ ಮಹಾ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ರಾಜಶೇಖರ್ ಮೆಣಸಿನಕಾಯಿ ಬಂಗಾರೇಶ್ ಹಿರೇಮಠ್, ಉಪಾಧ್ಯಕ್ಷರಾದ ಸುರೇಶ ಸವಣೂರ, ನಾಗರಾಜ್ ಕೋಟಗಿ, ಜಿಲ್ಲಾಧ್ಯಕ್ಷರಾದ ಶಂಕರಣ್ಣ ನೇಗಿನಹಾಳ್ ಹಾಗೂ ಪದಾಧಿಕಾರಿಗಳಾದ ನಂದಕುಮಾರ್ ಪಾಟೀಲ, ಎಂ ಪಿ ಶಿವಕುಮಾರ್ ಪಿ ಸಿ ಕಮ್ಮಾರ ರವಿ ಹೊಸೂರ್ ವಿ ಜಿ ಪಾಟೀಲ ವೀರಣ್ಣ ನೀರಲಗಿ ಸೇರಿದಂತೆ ಗಣ್ಯರು, ಗುರಿಹಿರಿಯರು, ಸದಸ್ಯರು ಹಾಜರಿದ್ದರು.

# ಅದ್ದೂರಿಯಾಗಿ ಬಸವ ಜಯಂತಿ ಅಚರಣೆ–ಮಾಜಿ ಶಾಸಕ ಸೋಮಲಿಂಗಪ್ಪ

**ಬಳ್ಳಾರಿ ಏ 30.** ವಿಶ್ವಗುರು ಬಸವಣ್ಣನವರ 891ನೇ ಜಯಂತೋತ್ಸವದ ಅಂಗವಾಗಿ ಸಿರುಗುಪ್ಪ ನಗರದ ದೇವಲಾಪುರ ಕ್ರಾಸ್ ಬಳಿ ಸ್ಥಾಪಿಸಿರುವ ಜಗಜ್ಯೋತಿ ಬಸವಣ್ಣನವರ ಪುತ್ತಳಿಗೆ ಹೂವಿನಹಾರ ಹಾಕಿ ನಮನಗಳನ್ನು ಸಲ್ಲಿಸಲಾಯಿತು. ಮತ್ತು ಭಾ.ಜ.ಪಾ. ತಾಲೂಕು ಕಚೇರಿಯಲ್ಲಿ ಬಸವಣ್ಣನವರ ಜಯಂತಿಯನ್ನ ಆಚರಣೆ ಮಾಡಲಾಯಿತು.

ಹಾಗೂ ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಹಳೆಕೋಟೆ ಗ್ರಾಮದಲ್ಲಿ ನಡೆದ ಶ್ರೀ ಜಗಜ್ಯೋತಿ ಬಸವಣ್ಣನವರ ಮೆರವಣಿಗೆಯ ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಎಂ.ಎಸ್. ಸೋಮಲಿಂಗಪ್ಪ ಮತ್ತು ಅವರ ಪುತ್ರ, ಬಿಜೆಪಿ ಯುವಮೋರ್ಚ ಜಿಲ್ಲಾದ್ಯಕ್ಷರಾದ ಎಂ.ಎಸ್. ಸಿದ್ದಪ್ಪ ಭಾಗಿಯಾಗಿ ಬಸವಣ್ಣನವರ ಪಾದಗಳಿಗೆ ಪುಷ್ಪಾನಮನಗಳನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ತಾಲೂಕು ಘಟಕದ ಅಧ್ಯಕ್ಷರಾದ ಕುಂಟ್ನಾಳ್ ಮಲ್ಲಿಕಾರ್ಜುನ ಅಣ್ಣನವರು ಹಿರಿಯರಾದ ಎಂ ಆರ್ ಗೌಡ್ರು ನಗರಸಭೆಯ ಸದಸ್ಯರಾದ ಮೇಕೆಲಿ ವೀರೇಶ್ ನಟರಾಜ ಮಹದೇವ ಮೋಹನ್ ರೆಡ್ಡಿ ವೆಂಕಟೇಶ್ ಶೇಖಪ್ಪ ಶಂಕ್ರಪ್ಪ ಈರಣ್ಣ ಮುಂತಾದ ಮುಖಂಡರು ಭಾಗವಹಿಸಿದ್ದರು.



## ಬಸವ ಜಯಂತಿ: ಕಲಬುರಗಿಯಲ್ಲಿ ಮಹಿಳೆಯರಿಂದ ಬೈಕ್ ರ‍್ಯಾಲಿ

# ಬಸವಣ್ಣನವರ ಆಚಾರ–ವಿಚಾರ ಪಾಲಿಸಿ: ಡಾ.ಶರಣಪ್ರಕಾಶ ಪಾಟೀಲ್ ಕರೆ



**ಕಲಬುರಗಿ, ಏ.30:** ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ಬಸವಾದಿ ಶರಣರ ಆಚಾರ, ವಿಚಾರಗಳನ್ನು ಪ್ರತಿಯೊಬ್ಬರೂ ಪಾಲಿಸುವ ಮೂಲಕ ಬಸವಣ್ಣನವರ ಸಮಸಮಾಜ ನಿರ್ಮಾಣವನ್ನು ಸಾಕಾರಗೊಳಿಸಬೇಕೆಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಹೇಳಿದರು.

ನಗರದ ಶ್ರೀ ಶರಣಬಸವೇಶ್ವರ ಜಾತ್ರಾ ಮೈದಾನದಲ್ಲಿ ಬಸವ ಜಯಂತ್ಯುತ್ಸವದ ಅಂಗವಾಗಿ ಬಸವ ಅಭಿಮಾನಿಗಳ ಬೃಹತ್ ಬಹಿರಂಗ ಸಮಾವೇಶದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಪರಿವರ್ತನೆ ನಮ್ಮಿಂದ ಆರಂಭ ಗೊಳ್ಳಬೇಕು ಎಂದು ಬಸವಾದಿ ಶರಣರು ಬಯಸಿದರು. ಅದೇ ರೀತಿ ಲೋಕದ ಡೊಂಕ ನೀವೇಕೆ ತಿದ್ದುವಿರಿ, ನಿಮ್ಮ ನಿಮ್ಮ ಮನವ ಸಂತೈಸಿಕೊಳ್ಳಿ, ನಿಮ್ಮ ನಿಮ್ಮ ತನುವ ಸಂತೈಸಿಕೊಳ್ಳಿ ಎಂದು ತಿಳಿಸಿದರು ಎಂದರು. ಜೀವನದಲ್ಲಿ ಅಧಿಕಾರ, ಆಸ್ತಿ, ಅಂತಸ್ತು ಶಾಶ್ವತ ಅಲ್ಲ. ಅದರ ಬದಲು ನಮ್ಮ ನಡೆ ಮತ್ತು ನುಡಿ ಶುದ್ಧವಾಗಿದ್ದಲ್ಲಿ ಅದು ಶಾಶ್ವತವಾಗಿರುತ್ತದೆ. ಆ ರೀತಿ ಎಲ್ಲರೂ ನಡೆಯೋಣ. ಬಸವಧರ್ಮ ಎಲ್ಲ ಧರ್ಮಗಳನ್ನು ಅಪ್ಪಿಕೊಳ್ಳುವಂತಹ ಧರ್ಮವಾಗಿದೆ. ನಾವೇ ಶ್ರೇಷ್ಠರು ಅಲ್ಲ, ವಚನಗಳನ್ನು ಶೋಷಿತ ಶರಣರು ಕೊಟ್ಟಿದ್ದಾರೆ. ಸಿಂಹಪಾಲು ವಚನಗಳು ಶೋಷಿತ ಶರಣರದ್ದೇ ಆಗಿದೆ. ಷಟಸ್ಥಲ, ಭಕ್ತ, ಮಹೇಶ, ಪ್ರಸಾದ, ಪ್ರಾಣಲಿಂಗಿ, ಶರಣ, ಐಕ್ಯ ಅರ್ಥ ಮಾಡಿಕೊಳ್ಳಬೇಕು. ಅನುಕರಿಸಬೇಕು. ಅಂದಾಗ ಮಾತ್ರ ಜೀವನ ಪಾವನವಾಗಲಿದೆ ಎಂದು ಅವರು ಹೇಳಿದರು. ಲಿಂಗ, ಲಿಂಗಪೂಜೆ, ವಿಭೂತಿ ಧರಿಸುವುದರಿಂದ ಜೀವನದಲ್ಲಿ ಶಾಂತಿ, ಸಹನೆ, ಸಂಯಮತೆ, ಕ್ರಿಯಾಶೀಲತೆ ಎಲ್ಲವೂ ಸಿಗುತ್ತದೆ. ಲಿಂಗಪೂಜೆ ಮಾಡಿದರೆ ಮನಸ್ಸಿನ ಭಾವನೆಗಳನ್ನು ನಿಗ್ರಹಿಸಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ. ಅಷ್ಟೇ ಅಲ್ಲದೇ ಜೀವನದ ಏರುಪೇರುಗಳನ್ನು ನಿಯಂತ್ರಿಸುವಂತಹ ಮನಸ್ಸಿನ ಜತೋಟಿಯೂ ಸಹ ಸಿಗುತ್ತದೆ. ಒಳ್ಳೆಯ ವಿಚಾರಗಳು ಬರುತ್ತವೆ ಎಂದು ಅವರು ತಿಳಿಸಿದರು.

ಶಿರೂರಿನ ಬಸವಲಿಂಗ ಮಹಾ ಸ್ವಾಮೀಜಿ ಮಾತನಾಡಿ, ಕಲ್ಯಾಣ ಕರ್ನಾಟಕದ ಹೆಬ್ಬಾಗಿಲು ಎನ್ನಿಸಿಕೊಂಡಿರುವ ದಾಸೋಹ ಮಾರ್ಗದಲ್ಲಿ ಮುನ್ನಡೆದ ಶರಣಬಸವೇಶ್ವರರು ಈ ಭಾಗದಲ್ಲಿ ಬಸವಣ್ಣನಾಗಿಯೇ ಕಲ್ಯಾಣವಾಗಿಸಿದರು. 892ನೇ ಜಯಂತಿಯನ್ನು ಇಡೀ ಜಿಲ್ಲೆಯ ಎಲ್ಲ ಲಿಂಗವಂತ ಸಮುದಾಯದವರು, ಎಲ್ಲ ಸಮುದಾಯದವರು ಹಮ್ಮಿಕೊಂಡಿದ್ದು ಸಂತೋಷ ತಂದಿದೆ. ಶರಣಬಸವೇಶ್ವರರ ಜಾತ್ರೆ ಮಹಾಸಾಗರ ಹರಿಯುತ್ತಿತ್ತು. 2025ನೇ ಸಾಲಿನಲ್ಲಿ ಪ್ರತಿ ವರ್ಷ ಶರಣಬಸಪ್ಪನಂತಹ ಬಸವಣ್ಣನವರ ಜಾತ್ರೆ ಮಹಾಸಾಗರ ಈಗ ಆರಂಭಗೊಂಡಿದೆ ಎಂದರು.

ಕರ್ನಾಟಕ, ಭಾರತ, ವಿಶ್ವ ಎಂದು ಕರೆಯುತ್ತಿದ್ದೇವೆ. ಅದೆಲ್ಲಕ್ಕೂ ದಿಕ್ಸೂಚಿ, ಮಾರ್ಗದರ್ಶನ, ಎಲ್ಲ ಸಮಸ್ಯೆಗಳಿಗೆ ಉತ್ತರ ಕೊಡುವ ಶಕ್ತಿ ಬಸವಣ್ಣನವರ ವಚನಗಳಲ್ಲಿದೆ. 12ನೇ ಶತಮಾನದ ವಚನಗಳು ಇಂದಿನ ಸಂವಿಧಾನದ ಆಶಯಗಳನ್ನು ಒಳಗೊಂಡಿದೆ. ಪ್ರಜಾಪ್ರಭುತ್ವದ ಕನಸು ವಚನಗಳಲ್ಲಿ ಸೇರಿ ಕೊಂಡಿವೆ ಎಂದು ಅವರು ಹೇಳಿದರು.

ಬಸವಣ್ಣನವರ ನಾಮದ ಬಲದಿಂದ ದೊಡ್ಡ ವರಾಗಬೇಕು. ಅಂದಾಗ ಅವರು ಮುಖ್ಯರಾಗುತ್ತಾರೆ. ದಾಸೋಹ, ಕಾಯಕ, ಸ್ತ್ರೀಸಮಾನತೆ ಎನ್ನುತ್ತೀರಿ. ಈ ಮೂರು ಶಬ್ದಗಳು ವೇದ, ಆಗಮಗಳು, ಶಾಸ್ತ್ರಗಳಲ್ಲಿ ಸಿಗುವುದಿಲ್ಲ. ಇದು ಕೇವಲ ವಚನಗಳಲ್ಲಿ ಮಾತ್ರ ಸಿಗುತ್ತದೆ. ಬಸವಣ್ಣನವರು ಬಂದ ಮೇಲೆ ದಾಸೋಹ ಕಾಯಕ ಬಂದಿತು. ಪಂಕ್ತಿ ಬೇಧವನ್ನು ತಡೆದರು. ಅದುವೇ ದಾಸೋಹ. ದಾಸೋಹದ ಮೂಲ ಬೀಜ ಬಿತ್ತಿದವರು ಬಸವಣ್ಣ. ಕಾಯಕವನ್ನು ಕಲಿಸಿದವರು ನಾಯಕರು ಬಸವಣ್ಣ. ಹೆಣ್ಣು ಸಾಕ್ಷಾತ್ ಪಾರ್ವತಿ ಎಂದು ಹೇಳಿದರು. 300ಕ್ಕೂ ಹೆಚ್ಚು ವಚನಕಾರ್ತಿಯರು 12ನೇ ಶತಮಾನದಲ್ಲಿದ್ದರು. ಅವರ ಕುರಿತು ಈಗ ಪಿಎಚ್‌ಡಿ ಮಾಡುತ್ತಿದ್ದಾರೆ. ಹುಡುಗಿಯರ ಚಾರಿತ್ರ್ಯ ನೋಡಿ ಮದುವೆ ಮಾಡಿ ಎಂದು ಹೇಳಿದರು. ಸಾಲಾವಳಿ ಬೇಡ. ಅವರ ಶೀಲ, ಚಾರಿತ್ರ್ಯ ನೋಡಿ ಮದುವೆ ಮಾಡಿ ಎಂದು ವಚನಕಾರರು ಹೇಳಿದರು. ಈಗಲೂ ವಚನಕಾರರು ಪ್ರಸ್ತುತ ಎಂದು ಅವರು ತಿಳಿಸಿದರು.

ಈ ಮುನ್ನ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್ಪರ್ಸನ್ ಡಾ. ದಾಕ್ಷಾಯಣಿ ಎಸ್. ಅಪ್ಪಾ ಅವರು ಸಮಾವೇಶವನ್ನು ಉದ್ಘಾಟಿಸಿದರು. ಚಿ. ದೊಡ್ಡಪ್ಪ ಅಪ್ಪ ಅವರು ವಚನವನ್ನು ಹೇಳಿದರು. ನೇತೃತ್ವವನ್ನು ಹುಕ್ಕೇರಿಯ ಬೆಳವಿಯ ಶರಣಬಸವದೇವರು, ಅಧ್ಯಕ್ಷತೆಯನ್ನು ಶಾಸಕ ಎಂ.ವೈ. ಪಾಟೀಲ್ ಅವರು

ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಚಿವ ಶರಣಬಸಪ್ಪಗೌಡ ದರ್ಶ ನಾಪೂರ್, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಡಾ. ಬಿ.ಜಿ. ಪಾಟೀಲ್, ತಿಪ್ಪಣ್ಣಪ್ಪ ಕಮಕನೂರ್, ಶಶೀಲ್ ಜಿ. ನಮೋಶಿ, ಜಗದೇವ್ ಗುತ್ತೇದಾರ್ ಕಾಳಗಿ, ಮಾಜಿ ಶಾಸಕ ದತ್ತಾತ್ರೇಯ್ ಪಾಟೀಲ್ ರೇವೂರ್, ಮಹಾಪೌರ ಯಲ್ಲಪ್ಪ ನಾಯಕೋಡಿ, ಮಾಜಿ ಮಹಾಪೌರ ಶರಣಕುಮಾರ್ ಮೋದಿ, ಸೋಮಶೇಖರ್ ಗೋನಾಯಕ್, ಶರಣಬಸಪ್ಪ ಪಪ್ಪಾ, ನೀಲಕಂಠರಾವ್ ಮೂಲಗೆ, ಮುಂತಾದವರು ಆಗಮಿಸಿದ್ದರು.

**ಮಹಿಳೆಯರಿಂದ ದ್ವಿಚಕ್ರ ವಾಹನಗಳ ರ‍್ಯಾಲಿ:** ಇದಕ್ಕೂ ಮುನ್ನ ಸಾಯಂಕಾಲ ಮಾಲಾ ಕಣ್ಣಿ ಮತ್ತು ಜ್ಯೋತಿ ಮರಗೋಳ್ ಅವರ ನೇತೃತ್ವದಲ್ಲಿ ದ್ವಿಚಕ್ರವಾಹನಗಳ ರ‍್ಯಾಲಿ ಜರುಗಿತು. ಶ್ರೀ ಶರಣಬಸವೇಶ್ವರ ದೇವಸ್ಥಾನದಿಂದ ಆರಂಭಗೊಂಡ ದ್ವಿಚಕ್ರವಾಹನಗಳ ರ‍್ಯಾಲಿಯು ಸೂಪರ್ ಮಾರ್ಕೆಟ್ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದ ಮೂಲಕ ಸಂಚರಿಸಿ, ಪುನಃ ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಮುಕ್ತಾಯಗೊಂಡಿತು.

ಬಸಮ್ಮ ಕಿರಣಗಿ, ವಿಜಯಲಕ್ಷ್ಮೀ ನೇಪೇರಿ, ಮಾಲತಿ ರೇಷ್ಮಿ, ನೀಲಾಂಬಿಕಾ ಚೌಕಿಮಠ್, ಕಾವೇರಿ ಪಾಟೀಲ್, ಪದ್ಮಾವತಿ ತುಪ್ಪದ್, ಪೂಜಾ ಆರ್. ಲೋಹಾರ್, ಬನಶಂಕರಿ ಪಾಟೀಲ್ ಕುಸನೂರು ಮುಂತಾದ ಮಹಿಳೆಯರೂ ಸಹ ದ್ವಿಚಕ್ರವಾಹನಗಳ ರ‍್ಯಾಲಿಯಲ್ಲಿ ಪಾಲ್ಗೊಂಡಿದ್ದರು.

ತಲೆಗೆ ರುಮಾಲು ಸುತ್ತಿಕೊಂಡು ದ್ವಿಚಕ್ರ ವಾಹನಗಳ ರ‍್ಯಾಲಿಯಲ್ಲಿ ಮಹಿಳೆಯರು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

# ಕಾಂಗ್ರೆಸ್‌ನಿಂದ ಗೂಂಡಾರಾಜ್ಯ ಸ್ಥಾಪಿಸುವ ಪ್ರಕ್ರಿಯೆ ಆರಂಭ: ಸಂಸದ ಶೆಟ್ಟರ್ ಕಿಡಿ

**ಹುಬ್ಬಳ್ಳಿ, ಏ. 30:** ಕರ್ನಾಟಕ ಕಾಂಗ್ರೆಸ್ ಪಕ್ಷದ ಮಿತಿ ಮೀರಿದ ಓಲೈಕೆಯಿಂದ ಈಗಾಗಲೇ ಕೆಲವು ನಿರ್ದಿಷ್ಟ ಸಮುದಾಯದ ಪುಂಡರು ಈ ನೆಲದ ಕಾನೂನಿನ ಮೇಲೆ ಸವಾರಿ ಮಾಡುತ್ತಿದ್ದಾರೆ. ಇಷ್ಟು ದಿನ ಅವರು ಮಾಡುತ್ತಿದ್ದರು, ಇದೀಗ ಮುಖ್ಯಮಂತ್ರಿ ಹಾಗೂ ರಾಜ್ಯ ಸಚಿವರೇ ಪೊಲೀಸರ ಜೊತೆಗೆ ನಡೆದುಕೊಂಡ ರೀತಿ ಖಂಡನೀಯ ಎಂದು ಬಿಜೆಪಿ ಸಂಸದ ಜಗದೀಶ್ ಶೆಟ್ಟರ್ ದೂರಿದರು.

ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಬೆಳಗಾವಿಯಲ್ಲಿ ನಡೆದ ಪ್ರತಿಭಟನಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಪೊಲೀಸರೊಂದಿಗೆ ನಡೆದುಕೊಂಡ ರೀತಿ ಸರಿಯಲ್ಲ. ಕಾಂಗ್ರೆಸ್ ಓಲೈಕೆ ರಾಜಕಾರಣದಿಂದ ಕೆಲವು ನಿರ್ದಿಷ್ಟ ಸಮುದಾಯದ ಪುಂಡರು ಅಹಿಕರತವಾಗಿ ವರ್ತಿಸಿದ್ದಾರೆ. ಅದಕ್ಕೆ ಪೂರಕವಾದ ಪ್ರಕರಣಗಳು ರಾಜ್ಯದಲ್ಲಿ ನಡೆದಿವೆ. ದಾವಣಗೆರೆಯ ಚನ್ನಗಿರಿ, ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಗಳ ಮೇಲೆ ದಾಳಿಗೆ ಸ್ಪಷ್ಟ ನಿದರ್ಶನ ಎಂದರು. ಹಳೆಹುಬ್ಬಳ್ಳಿ ಗಲಭೆ ಕೇಸ್‌ನಲ್ಲಿಯೂ ಅತೀ ಗಂಭೀರ ಪ್ರಕರಣದಲ್ಲಿ ಭಾಗಿಯಾದವರ ಮೇಲಿನ ಪ್ರಕರಣಗಳನ್ನು ಹಿಂಪಡೆಯುವ ಮೂಲಕ ಕಾಂಗ್ರೆಸ್ ಪಕ್ಷವು ದೇಶದ ಸಂವಿಧಾನ ಹಾಗೂ ಇಲ್ಲಿನ ಕಾನೂನು ಹಾಗೂ ಸುವ್ಯವಸ್ಥೆಗೆ ಧಕ್ಕೆ ತಂದಿತ್ತು. ಮಾತ್ರವಲ್ಲದೇ ಕಾಂಗ್ರೆಸ್ ಸರ್ಕಾರ ಗಲಭೆಕೋರರ ಬೆನ್ನಿಗೆ ನಿಂತಿತು. ಗೂಂಡಾರಾಜ್ಯ ಸ್ಥಾಪಿಸುವ ಪ್ರಕ್ರಿಯೆ ಆರಂಭ ಇದೀಗ ಸೋಮವಾರ ಬೆಳಗಾವಿಯಲ್ಲಿ ಸಾರ್ವಜನಿಕರ ಸಮ್ಮುಖದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಪೊಲೀಸ್ ಅಧಿಕಾರಿಗಳೊಂದಿಗೆ ಖಂಡನಾರ್ಹ ರೀತಿಯಲ್ಲಿ ನಡೆದುಕೊಂಡಿದ್ದಾರೆ. ರಾಜ್ಯ ಪೊಲೀಸ್ ಇಲಾಖೆಯ ಘನತೆ ಹಾಗೂ ಗೌರವವನ್ನು ತಗ್ಗಿಸಿ, ರಾಜ್ಯದಲ್ಲಿ ಗೂಂಡಾರಾಜ್ ಸ್ಥಾಪಿಸುವ ಪ್ರಕ್ರಿಯೆಯ ಮೊದಲ ಹೆಜ್ಜೆಯಂತೆ ಭಾಸವಾಗುತ್ತಿದೆ ಎಂದು ಅವರು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.

ರಾಜ್ಯದಲ್ಲಿ ಈಗಾಗಲೇ ಹದಗೆಟ್ಟಿರುವ ಕಾನೂನು ಮತ್ತು ಸುವ್ಯವಸ್ಥೆಯನ್ನು ಸರಿಪಡಿಸಲು, ಪೊಲೀಸ್ ಇಲಾಖೆಗೆ ನೈತಿಕ ಸ್ಥೈರ್ಯ ತುಂಬಬೇಕಾಗಿದ್ದು ರಾಜ್ಯ ಸರ್ಕಾರ. ಆದರೆ ಸರ್ಕಾರವೇ ಇಂದು ಪೊಲೀಸರ ಆತ್ಮಸ್ಥೈರ್ಯವನ್ನು ಕುಗ್ಗಿಸುವ ಯತ್ನ ನಡೆಸಿದ್ದು ನಾಚಿಗೇಡಿನ ವಿಚಾರ ಎಂದು ಸಿದ್ದರಾಮಯ್ಯ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ನಡೆ ಟೀಕಿಸಿದರು. ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆಯನ್ನು ಬಲಿಕೊಡಲಾಗಿದೆ. ಸಂವಿಧಾನದ ಆಶಯಗಳನ್ನು ಗಾಳಿಗೆ ತೂರಿದ್ದಾರೆ. ರಾಜ್ಯದ ಪೊ?ಲೀಸ್ ಇಲಾಖೆಯನ್ನು ದುರ್ಬಲಗೊಳಿಸಲಾಗಿದೆ. ಕರ್ನಾಟಕದಲ್ಲಿ ಅರಾಜಕತೆ ಸೃಷ್ಟಿಸುವ ಕಾಂಗ್ರೆಸ್ ಸರ್ಕಾರದ ಟೂಲ್‌ಕಿಟ್ ಅನ್ನು ಇಂದಿನ ಬೆಳಗಾವಿಯ ಪ್ರಕರಣ ಬಯಲುಮಾಡಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಈ ನೆಲದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ, ಕುಂದುಂಟಾದರೆ ಅದಕ್ಕೆ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆಯಾಗುತ್ತದೆ ಎಂದು ಜಗದೀಶ್ ಶೆಟ್ಟರ್ ಎಚ್ಚರಿಸಿದರು.



# ಹಿಂದೂ ಧರ್ಮ ರಕ್ಷಣೆಯಗಿದ್ದು ಶಿವಾಜಿ ಮಹಾರಾಜರಿಂದ: ಬಸನಗೌಡ ಯತ್ನಾಳ್



**ಬೀದರ್, ಏ. 30:** ಮಹಾರಾಷ್ಟ್ರದಲ್ಲಿ ಹಿಂದೂ ಧರ್ಮದ ಹರಹರ ಮಹಾದೇವ ಎಂಬ ಜ್ಯೋತಿ ಇಡೀ ರಾಷ್ಟ್ರದಲ್ಲಿ ಬೆಳಗಿದ ಛತ್ರಪತಿ ಶಿವಾಜಿ ಮಹಾರಾಜರು ಹಿಂದೂ ಹೃದಯ ಸಾಮ್ರಾಟ್ ಆಗಿದ್ದಾರೆ. ಶಿವಾಜಿ ಅವರಿಂದಲೇ ಹಿಂದೂ ಧರ್ಮದ ರಕ್ಷಣೆಯಾಗಿದೆ ಮತ್ತು ಇದುವರೆಗೂ ಉಳಿದಿದೆ ಎಂದು ವಿಜಯಪುರ ಕ್ಷೇತ್ರದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ತಿಳಿಸಿದರು.

ಛತ್ರಪತಿ ಶಿವಾಜಿ ಮಹಾರಾಜ ಜನತಾ ಸಂಘದ ವತಿಯಿಂದ ತಾಲ್ಲೂಕಿನ ಮಿರ್ಜಾಪುರ(ಕೆ) ಗ್ರಾಮದಲ್ಲಿ ಹಿಂದೂ ಹೃದಯ ಸಾಮ್ರಾಟ್ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಈ ಹಿಂದೆ ಹಿಂದೂಗಳ ಮೇಲೆ ದಾಳಿಯಾಗುತ್ತಿದ್ದಾಗ ಗೆರಿಲ್ಲಾ ಯುದ್ಧದ ಮೂಲಕ ಶಿವಾಜಿ ಹಿಂದೂ ಧರ್ಮವನ್ನು ಉಳಿಸಿದರು. ಇಂದು ಹಿಂದೂಗಳು ಐಕ್ಯತೆಗೊಳ್ಳುವ ಅವಶ್ಯಕತೆ ಇದೆ ಎಂದರು. ಕೆಲವು ದಿವಸಗಳ ಹಿಂದೆ ಧರ್ಮ ಕೇಳಿ ಉಗ್ರವಾದಿಗಳು ಕಾಶ್ಮೀರದಲ್ಲಿ ಹಿಂದೂಗಳ ಮೇಲೆ ದಾಳಿ ಮಾಡಿದ್ದಾರೆ ಎಂದು ಪ್ರಸ್ತಾಪಿಸಿದರಲ್ಲದೆ, ನಾವು ಹಿಂದೂಗಳು ಒಗ್ಗಟ್ಟಾಗದಿದ್ದರೆ ಹಿಂದೂ ಧರ್ಮ ಮತ್ತು ಹಿಂದೂಗಳ ಉಳಿಸುವದು ಅಸಾಧ್ಯ. ದುರ್ದೈವದ ಸಂಗತಿ ಎಂದರೆ ಹಿಂದೂಗಳೇ ಹಿಂದೂಗಳ ವೈರಿಗಳಾಗಿದ್ದಾರೆ. ನಮಗೆ ನೆರೆಯ ಪಾಕಿಸ್ತಾನ ವೈರಿಯಲ್ಲ. ನಮ್ಮ ದೇಶದೊಳಗಿರುವ ಹಿಂದೂ ವಿರೋಧಿಗಳೇ ನಮ್ಮ ವೈರಿಗಳು ಎಂದರು. ಶಿವಾಜಿ ಮಹಾರಾಜರ ಮೂರ್ತಿ ಹೆಚ್ಚು ಹೆಚ್ಚು ಸ್ಥಾಪನೆಯಾಗುವ ಮೂಲಕ ಅವರು ಹಿಂದೂ ಧರ್ಮ ಉಳಿಸಲು ನಡೆಸಿದ ಹೋರಾಟದ ಕಿಚ್ಚು ಎಲ್ಲೆಡೆ ಬೆಳಗಲಿ. ಪ್ರತಿ ಗ್ರಾಮದಲ್ಲೂ ಹಿಂದೂ ಸಾಮ್ರಾಟ್ ಶಿವಾಜಿ ಬೆಳಗುವಂತೆ ಮಾಡಬೇಕಾದ್ದು ಇಂದಿನ ಯುವಕರ ಕರ್ತವ್ಯವಾಗಿದೆ. ಯುವಕರು ಮುಂದೆ ಬರದೇ ಹೋದರೆ, ನಮ್ಮ ಮನೆಯ ಹೆಣ್ಣು ಮಕ್ಕಳ ಮಾನ ಮರ್ಯಾದೆಯನ್ನು ಹಿಂದೂ ವಿರೋಧಿಗಳು ದೋಚುತ್ತರೆ. ಇತಿಹಸ ಪುಟಗಳನ್ನು ನೋಡಿದಾಗ ಹಿಂದೂ ವಿರೋಧಿ ಮುಸ್ಲಿಮರು ನಮ್ಮ ಹೆರ್ಣಣು ಮಕ್ಕಳನ್ನು ಅಪಹರಿಸಿ ಅಮಾನವೀಯವಾಗಿ ಅತ್ಯಾಚಾರಗೈದು ನಡುಬೀದಿಯಲ್ಲಿ ಕೊಂದು ಹಾಕಿದ್ದಾರೆ. ಈ ತಿಹಾಸವನ್ನು ಯುವಕರು ಹೆಚ್ಚು ಹೆಚ್ಚು ಪ್ರಚುರಗೊಳಿಸಬೇಕು ಎಂದರು.

ಮಿರ್ಜಾಪುರ ಕೆ ಗ್ರಾಮದಲ್ಲಿ ಶಿವಾಜಿ ಮಹಾರಾಜರ ಪುತ್ಥಳಿಗಾಗಿ ದಾಸೋಹಗೈದ ಈಶ್ವರಸಿಂಗ್ ಠಾಕೂರ್ ಸೋತರೂ ಕೂಡಾ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದ್ದಾರೆ. ನಿಮ್ಮೆಲ್ಲರ ಸಹಕಾರ ಅವರಿಗಿರಲಿ ಎಂದು ಅವರು ಹೇಳಿದರು. ಉತ್ತರ ಕ್ಷೇತ್ರದ ನಾಯಕ ಈಶ್ವರಸಿಂಗ್ ಠಾಕೂರ್ ಅವರು ಸ್ವಾಗತಿಸಿ ಮಾತನಾಡಿ, ಚುನಾವಣೆ ಸಂದರ್ಭದಲ್ಲಿ ಈ ಗ್ರಾಮಕ್ಕೆ ಶಿವಾಜಿ ಮಹಾರಾಜರ ಮೂರ್ತಿ ಸ್ಥಾಪನೆಗೆ ಸಹಕಾರ ನೀಡುತ್ತೇನೆ ಎಂದು ಹೇಳಿದ್ದೆ. ನುಡಿದಂತೆ ನಡೆದುಕೊಂಡಿದ್ದೇನೆ. ಶಿವಾಜಿ ಮಹಾರಾಜರ ಧರ್ಮಪ್ರಜ್ಞೆ ಮತ್ತು ವೀರತನ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಶಿವಾಜಿ ಮಹಾರಾಜ ಜನತಾ ಸಂಘದ ಅಧ್ಯಕ್ಷ ಸಂದೀಪ್ ಪಾಟೀಲ್ ಅವರು ಅಧ್ಯಕ್ಷತೆ ವಹಿಸಿದ್ದರು. ವೇದಿಕೆ ಮೇಲೆ ಶಂಕರಲಿಂಗ ಮಹಾರಾಜರು ಕಲಮೂಡ, ಮಚೇಂದ್ರನಾಥ ಮುತ್ಯ ಔದತಪುರ, ಬಾಬುರಾವ್ ಮುತ್ಯಾ ಹಳೆಂಬುರ, ಕಾಶಿನಾಥ ಮಹಾರಾಜರು ರಾಜನಾಳ್, ಅಂಬಾದಾಸ್ ಮಹಾರಾಜರು ಪಂಡರಪುರ, ಮಾಜಿ ಶಾಸಕ ಪ್ರಕಾಶ್ ಖಂಡ್ರೆ, ದಿಗಂಬರ್ ಮಾನಕಾರಿ, ಜನಾರ್ಧನ ಬಿರಾದಾರ, ಪ್ರದೀಪ ಬಿರಾದಾರ, ದತ್ತು ಮೂಲಗೆ ಖಾಜಾಪುರ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಮಹೇಶ್ವರ ಸ್ವಾಮಿ, ಪ್ರಮುಖರಾದ ರಾಜಕುಮಾರ ಜಮಾದಾರ, ಬಾಬುರಾವ್ ಮಲ್ಕಾಪುರ, ಮಲ್ಲಿಕಾರ್ಜುನ್ ಪರಿಹಾರ, ಲೋಕೇಶ್ ಮರ್ಜಾಪುರ, ವಿಲ್ಸನ್ ಚಿಲ್ಲರ್ಗಿ, ವೆಂಕಟರಾವ್ ಬಿರಾದಾರ್, ಧನರಾಜ್ ಪಾಂಡ್ರೆ, ರಮೇಶ್ ಬಲಂಡೆ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಭಕ್ತ ಕುಂಬಾರ್ ಅವರು ಕಾರ್ಯಕ್ರಮ ನಿರೂಪಿಸಿದರು. ವೆಂಕಟ ಅವರು ವಂದಿಸಿದರು. ಮೂರ್ತಿ ಅನಾವರಣ ಸಂದರ್ಭದಲ್ಲಿ ಸಾವಿರಾರು ಜನರು ಪಾಲ್ಗೊಂಡಿದ್ದರು. ಮಕ್ಕಳಿಂದ ಜರುಗಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಸಭಿಕರ ಗಮನ ಸೆಳೆದವು.

## ಉಗ್ರರ ದಾಳಿ ಬಳಿಕ ಕೇಂದ್ರದ ಕ್ರಮ ಶ್ಲಾಘನೀಯ

# ಪಿಓಕೆ ವಶಪಡಿಸಿಕೊಂಡು ಪಾಕ್‌ಗೆ ತಕ್ಕ ಪಾಠ ಕಲಿಸಿ: ಲಕ್ಷ್ಮಣ್ ಸವದಿ




**ಬೆಳಗಾವಿ, ಏ. 30:** ಜಮ್ಮು ಮತ್ತರು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಇತ್ತೀಚೆಗೆ ಹಿಂದೂಗಳನ್ನು ಗುರಿಯಾಗಿಸಿಕೊಂಡು ನಡೆದ ಭಯೋತ್ಪಾದಕ ಭೀಕರ ದಾಳಿ ಘಟನೆ ಬಳಿಕ ಕೇಂದ್ರ ಸರ್ಕಾರ ಕೈಕೊಂಡ ಕ್ರಮವನ್ನು ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಅವರು ಶ್ಲಾಘಿಸಿದ್ದು, ಆದಷ್ಟೂ ಬೇಗ ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ವಶಪಡಿಸಿಕೊಂಡು ಪಾಕಿಸ್ತಾನಕ್ಕೆ ತಕ್ಕ ಪಠ ಕಲಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಅಥಣಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 26 ಅಮಾಯಕ ಪ್ರವಾಸಿಗರು ಉಗ್ರರ ಗುಂಡಿನ ದಾಳಿಗೆ ಬಲಿಯಾಗಿದ್ದಾರೆ. ಮೃತರ ಆತ್ಮಗಳಿಗೆ ಶಾಂತಿ ಸಿಗಲಿ ಮತ್ತು ಅವರ ದುಃಖಿತ ಕುಟುಂಬಗಳಿಗೆ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಭಾರತದ ಶಾಶ್ವತ ನೆಮ್ಮದಿಗಾಗಿ ಮತ್ತು ಪಾಕ್ ಮತ್ತೊಮ್ಮೆ ಭಾರತದ ವಿರುದ್ಧ ಸೊಲ್ಲೆತ್ತದಂತೆ ಮಾಡಬೇಕು ಎಂದರು.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾನಲ್ಲಿ ನಡೆದ ಉಗ್ರರ ದಾಳಿಯನ್ನು ಯಾರೂ ಸಹಿಸಿಕೊಳ್ಳಲು ಸಾಧ್ಯವಿಲ್ಲ. ನಾವು ಭಾರತೀಯ ಪ್ರಜೆಗಳಾಗಿ ಒಟ್ಟಾಗಿದ್ದೇವೆ. ಉಗ್ರಾಮಿಗಳನ್ನು ನಿಗ್ರಹ ಮಾಡಲು ಕೇಂದ್ರ ಸರಕಾರ ಮೊದಲು ಪಿಓಕೆಯನ್ನು ವಶಪಡಿಸಿಕೊಳ್ಳಬೇಕು ಎಂದು ಹೇಳಿದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರವಾಸೋದ್ಯಮ ಬಹಳ ದೊಡ್ಡದಾಗಿ ಬೆಳೆಯುತ್ತಿದೆ. ಅಲ್ಲಿರುವ ಸಾರ್ವಜನಿಕರು ನೆಮ್ಮದಿಯಿಂದ ಜೀವನ ಕಟ್ಟಿಕೊಂಡು ಬದುಕು ಸಾಗಿಸುತ್ತಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಎಂದರೆ ಅದು ಭೂಲೋಕದ ಸ್ವರ್ಗ ಎಂದು ಪ್ರಖ್ಯಾತಿಯನ್ನು ಪಡೆದಿದೆ. ನಾನು ಕೂಡ ಕಳೆದ ಆರು ತಿಂಗಳ ಹಿಂದೆ ಭೇಟಿ ನೀಡಿದ್ದೆ. ಈ ಘಟನೆಯಿಂದಾಗಿ ಅಲ್ಲಿನ ಪ್ರವಾಸೋದ್ಯಮ ಕುಗ್ಗಿದೆ. ಈ ಉಗ್ರಾಮಿಗಳ ನಿರ್ಮೂಲನೆಗೆ ನಾವು ಎಲ್ಲರೂ ಒಗ್ಗಟ್ಟಾಗಿ ಬೆಂಬಲವನ್ನು ನೀಡುತ್ತೇವೆ. ಈಗಾಗಲೇ ಕೇಂದ್ರ ಸರಕಾರ ಪಾಕಿಸ್ತಾನ ವಿರುದ್ಧ ರಾಜತಾಂತ್ರಿಕ ನಿರ್ಣಯಗಳನ್ನು ಕೈಗೊಂಡಿದೆ. ಉಗ್ರರ ದಾಳಿ ಬಳಿಕ ಕೇಂದ್ರ ಸರ್ಕಾರ ಕೈಗೊಂಡಿರುವ ಕ್ರಮ ಶ್ಲಾಘನೀಯವಾಗಿದ್ದು, ಇದಕ್ಕೆ ನನ್ನ ಬೆಂಬಲವಿದೆ ಎಂದು ತಿಳಿಸಿದ್ದಾರೆ.

**ವಿಜಯಪುರ ಜಿಲ್ಲಾಡಳಿತದಿಂದ ಬಸವೇಶ್ವರ ಜಯಂತಿ ಆಚರಣೆ**

# ಸಾಮಾಜಿಕ ಬದಲಾವಣೆಗೆ ಬಸವಣ್ಣನ ತತ್ವಾದರ್ಶಗಳ ಅಳವಡಿಕೆ ಅವಶ್ಯ- ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅಭಿಮತ





**ವಿಜಯಪುರ ಏ. 30:** ಪ್ರತಿಯೊಬ್ಬರು ದಯೆ ಗುಣ ಬೆಳೆಸಿಕೊಳ್ಳಬೇಕು ಎಂದು ಬಸವಣ್ಣನವರು ಬುದ್ಧ ಕರುಣೆಯ ಮಹತ್ವವನ್ನು ಸಾರಿದವರು. ಸಮಾಜದ ಅಂಕುಡೊಂಕುಗಳನ್ನು ತಿದ್ದಿದ, ಬಸವಣ್ಣನವರ ತತ್ವಾದರ್ಶಗಳು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಾಮಾಜಿಕ ಬದಲಾವಣೆ ತರಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಬುಧವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಬಸವ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮಾತನಾಡಿದ ಅವರು, ಜಾತಿ ವ್ಯವಸ್ಥೆ ಹೊಡೆದೊಡಿಸಲು ಶರಣರು ವಚನಗಳ ಮೂಲಕ ಸಾರಿದ್ದಾರೆ. 12ನೇ ಶತಮಾನದಲ್ಲಿಯೇ ಪ್ರಜಾಪ್ರಭುತ್ವದ ತತ್ವಗಳನ್ನು ಜನಸಾಮಾನ್ಯರಿಗೆ ತಿಳಿಸಿ, ಸಮಸಮಾಜ ಕನಸು ಕಂಡ ಬಸವಣ್ಣನವರು, ಪ್ರತಿಯೊಬ್ಬರು ಕೆಲಸ ಮಾಡಬೇಕು ಎಂಬ ಕಾಯಕವೇ ಕೈಲಾಸ ಎಂದು ಸಾರಿದರು. ಸಂಸ್ಕೃತಿ, ರೀತಿ ನೀತಿಗಳ ಬಗ್ಗೆಯೂ ಅವರ ವಚನಗಳು ಬೆಳಕು ಚೆಲ್ಲುತ್ತವೆ. ಅವರ ಆದರ್ಶ ವಿಚಾರಗಳು, ವಚನಗಳ ಸಾರ ಅರಿತುಕೊಂಡು ನಾವು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಸಮಾಜದಲ್ಲಿನ ಮೌಢ್ಯತೆಯನ್ನು ಹೋಗಲಾಡಿಸುವ ನಿಟ್ಟಿನಲ್ಲಿ ತಮ್ಮ ವಚನಗಳ ಮೂಲಕ ಜನಸಾಮಾನ್ಯರಿಗೆ ಅರಿವು ಮೂಡಿಸಿದ ಬಸವಣ್ಣನವರು, ತನ್ನರಿವೆ ತನಗೆ ಗುರು ಎಂದು ಸರಳ ಹಾಗೂ ಜನಸಾಮಾನ್ಯರಾಡುವ ಮಾತಿನಲ್ಲಿ 12ನೇ ಶತಮಾನದಲ್ಲಿಯೇ ವಿಶ್ವಗುರು ಬಸವಣ್ಣನವರು ಸಾರಿದರು. ಈ ಸಮಾಜದ ಒಳಿತಿಗಾಗಿ ಜನಸಾಮಾನ್ಯರ ಸುಂದರ ಬದುಕಿಗೆ ಶರಣರ ದಾರಿದೀಪವಾಗಿವೆ ಎಂದು ಹೇಳಿದರು.

ಬಸವಣ್ಣನವರ ವಿಚಾರಧಾರೆಗಳು ಪ್ರಜಾಪ್ರಭುತ್ವದ ಆಶಯಗಳು ನಮ್ಮ ಸಂವಿಧಾನದ ಪೀಠಿಕಾಭಾಗದಲ್ಲಿ ಪ್ರಸ್ತಾಪಿಸಿರುವ ಸಾಮಾಜಿಕ ಸಮಾನತೆ, ಜಾತ್ಯಾತೀತತೆ ಹಾಗೂ ಸಹೋದರತ್ವ ವಿಷಯಗಳು ಕಾಣಬಹುದಾಗಿವೆ. ಅನುಭವ ಮಂಟಪದಲ್ಲಿ ಪ್ರಜಾಪ್ರಭುತ್ವದ ಆಶಯಗಳನ್ನು ಎಲ್ಲರನ್ನೂ ಒಗ್ಗೂಡಿಸಿ ಕಾಯಕ ಹಾಗೂ ದಾಸೋಹ ತತ್ವಗಳನ್ನು ಬಿತ್ತರಿಸಿ, ಎಲ್ಲರೂ ಸಮಾನರು ಎಂಬುದನ್ನು ತಿಳಿಸಿದ ಮಹಾನ್ ಮಾನವತಾವಾದಿ?ಬಸವಣ್ಣನವರು, ಜಾತಿ ರಹಿತವಾದ ಕಾಯಕ ತತ್ವವನ್ನು ಸಾರಿದರು. ಬಸವಾದಿ ಶರಣರ ಚಿಂತನೆಗಳಾದ ಕಾಯಕ ಮತ್ತು ದಾಸೋಹದ ಪರಿಕಲ್ಪನೆಯ ತಳಹದಿ ಸಂವಿಧಾನದಲ್ಲಿ ಅಡಕವಾಗಿದೆ ಎಂದು ಅವರು ಹೇಳಿದರು.

ಬುದ್ಧ, ಬಸವಣ್ಣ ಹಾಗೂ ಅಂಬೇಡ್ಕರ ಅವರು ಪ್ರಸ್ತುತವಾಗಿದ್ದಾರೆ. ಅವರ ತತ್ವ ಸಿದ್ಧಾಂತ ನಮಗೆ ಮಾರ್ಗದರ್ಶನವಾಗಿವೆ ಹಾಗೂ ದಾರಿದೀಪವಾಗಿವೆ. ಸಾಂಸ್ಕೃತಿಕ ನಾಯಕ ಬಸವಣ್ಣನವರ ವಚನಗಳನ್ನು ಯುವಪೀಳಿಗೆ ಅರಿಯಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಮಂಜುನಾಥ ಜುನಗೊಂಡ ಅವರು ಮಾತನಾಡಿ, ಸಮ ಸಮಾಜದ ಕನಸು ಕಂಡವರು, ಅಜ್ಞಾನವೆಂಬ ಕತ್ತಲೆ ತೊಲಗಿಸಲು ಅವರ ವಚನಗಳು ದೀವಿಗೆಯಾಗಿವೆ. ಸಮಾಜದ ಅಂಕುಡೊಂಕುಗಳ ಹೋಗಲಾಡಿಸಲು ವಚನಗಳ ಮೂಲಕ ಬೆಳಕು ಚೆಲ್ಲಿದ ಅವರು, ಸ್ತ್ರೀ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಾರಿದ ಬಸವಣ್ಣನವರು ಸಮಾನತೆ ಹರಿಕಾರ, ಕಾಯಕ ಹಾಗೂ ದಾಸೋಹ ತತ್ವ ನೀಡಿದ ಬಸವಣ್ಣ ಭಕ್ತಿ ಭಂಡಾರಿಯಾಗಿದ್ದರು. ಕಾಯಕ ತತ್ವ ಕಷ್ಟಪಟ್ಟು ದುಡಿಯಬೇಕು..ದುಡಿದಿದ್ದರಲ್ಲಿ ಹಂಚಿ ಉಣ್ಣಬೇಕು ಎಂಬುದು ನಿಲುವಾಗಿತ್ತು ಎಂದು ಅವರು ಹೇಳಿದರು.

ಹೆಚ್ಚುವರಿ ಪೊಲೀಸ್ ವರಿ?ಾ?ಧಿಕಾರಿಗಳಾದ ರಾಮನಗೌಡ ಹಟ್ಟಿ ಮಾತನಾಡಿ,ಕಾಯಕವೇ ಕೈಲಾಸ ಎಂದು ಸಾರಿದ ಬಸವಣ್ಣನವರ ಆಚಾರ-ವಿಚಾರಗಳ ಕುರಿತು ಮಕ್ಕಳಿಗೆ ತಿಳಿಸಬೇಕು. ಶರಣ ಸಾಹಿತ್ಯ ಜನಸಾಮಾನ್ಯರ ಸಾಹಿತ್ಯವಾಗಿದೆ. ಕಾಯಕ ಹಾಗೂ ದಾಸೋಹ ತತ್ವಗಳು ಶರಣರ ತತ್ವಗಳನ್ನು ಪರಿಪಾಲಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ವಿ ಸಿ ನಾಗಠಾಣ ಅವರು ಮಾತನಾಡಿದರು. ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಬಿ.ಎಸ್ ರಾಠೋಡ ಮಹಾನಗರ ಪಾಲಿಕೆ ವಲಯ ಆಯುಕ್ತರಾದ ಮಹಾವೀರ ಬೋರಣ್ಣವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಮಾಲಾರ್ಪಣೆ: ಬೆಳಿಗ್ಗೆ ಬಸವೇಶ್ವರ ವೃತ್ತದಲ್ಲಿರುವ ವಿಶ್ವಗುರು ಬಸವಣ್ಣನವರ ಪ್ರತಿಮೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.ಭವ್ಯ ಮೆರವಣಿಗೆಗೆ ಚಾಲನೆ : ನಗರದ ಶ್ರೀ ಸಿದ್ಧೇಶ್ವರ ದೇವಸ್ಥಾನದ ಆವರಣದಲಿ ವಿಶ್ವಗುರು ಬಸವಣ್ಣನವರ ಭಾವಚಿತ್ರ ಮೆರವಣಿಗೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಚಾಲನೆ ನೀಡಿದರು. ಭವ್ಯ ಮೆರವಣಿಗೆಯೂ ವಿವಿಧ ಜಾನಪದ ಕಲಾತಂಡದೊಂದಿಗೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ಸಾಗಿ ಸಮಾವೇಶಗೊಂಡಿತು.

# ವಿಯೆಟ್ನಾಮ್ ಗೌರವ ಸ್ವೀಕರಿಸಿದ ಡಾ.ಅವನೀಂದ್ರನಾಥ್ ರಾವ್



ಕೇಂದ್ರ ಸಚಿವಾಲಯ ಗ್ರಂಥಾಲಯದ ವರಿಷ್ಠ ಅಧಿಕಾರಿ, ಕನ್ನಡಿಗ ಡಾ.ವೈ.ಅವನೀಂದ್ರನಾಥ್ ರಾವ್ ಅವರು ವಿಯೆಟ್ನಾಮ್ ದೇಶದ 'ಮರು ಏಕೀಕರಣದ ಸ್ವರ್ಣಮಹೋತ್ಸವ ಗೌರವ' ಸ್ವೀಕರಿಸಿದ್ದಾರೆ. ಭಾರತದಲ್ಲಿನ ವಿಯೆಟ್ನಾಮ್ ರಾಯಭಾರಿ ನೂಯೆನ್ ಥಾನ್ ಹೈ ಅವರು ಡಾ.ರಾವ್ ಅವರಿಗೆ ಆ ದೇಶದ ಅಂಚೆ ಚೀಟಿ ಚಿತ್ರಗಳ ವಿಶೇಷ ಉಡುಗೊರೆ ಮತ್ತು ಕೃತಿಗಳನ್ನು ನೀಡಿ ಗೌರವಿಸಿದರು. ಭಾರತ ಸರಕಾರ ಸಂಸ್ಕೃತಿ ಮಂತ್ರಾಲಯದ ಭಾಗವಾಗಿರುವ ಕೇಂದ್ರ ಸಚಿವಾಲಯ ಗ್ರಂಥಾಲಯದಲ್ಲಿ ಏಳು ವರ್ಷಗಳ ಹಿಂದೆ 'ವಿಯೆಟ್ನಾಮ್ ಕಾರ್ನರ್' ಸ್ಥಾಪಿಸಲಾಗಿತ್ತು. ಈ ಸಾಂಸ್ಕೃತಿಕ ಸಹಕಾರದ ಹಿನ್ನಲೆಯಲ್ಲಿ ಈಚೆಗೆ ಉಡುಗೊರೆ ಸಮಾರಂಭವನ್ನು ಆಯೋಜಿಸಲಾಗಿತ್ತು.

# ನರೇಗಾ ಕಾಯಕಯೋಗಿ ಕಾಮಗಾರಿ ಸ್ಥಳಕ್ಕೆ ಸಿಇಓ ಭಂವರ್‌ಸಿಂಗ್ ಮೀನಾ ಭೇಟಿ



**ಕಲಬುರಗಿ, ಏ. 30:** ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಕೋಳಕೂರ್, ನೆಲೋಗಿ ಮತ್ತು ಜೇರಟಗಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೈಗೆತ್ತಿಕೊಂಡ ಕೆರೆ ಮತ್ತು ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಗಳಿಗೆ ಸೋಮವಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವ್ವಾರಸಿಂಗ್ ಮೀನಾ ಅವರು ಭೇಟಿ ನೀಡಿ ಕಡತ ಹಾಗೂ ಕಾಮಗಾರಿಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮೀನಾ ಅವರು ಮಾತನಾಡಿ, ಕೆರೆಗೆ ಮಳೆಗಾಲದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಮಳೆ ನೀರು ಹರಿದು ಬಂದು, ಹೆಚ್ಚು ಸಂಗ್ರಹವಾಗಿ ಅಂತರ್ಜಲ ಮಟ್ಟ ಹೆಚ್ಚಳವಾಗುವಂತೆ ಕೆರೆ ಅಭಿವೃದ್ಧಿ ಕಾಮಗಾರಿ ವೈಜ್ಞಾನಿಕವಾಗಿ ಮತ್ತು ಕಾಮಗಾರಿ ಗುಣಮಟ್ಟದಾಗಿ ಅನುಷ್ಠಾನ ಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆರಗಳ ಅಭಿವದ್ಧಿಯಿಂದ ನೀರಿನ ಅಂತರ್ಜಲಮಟ್ಟ ಹೆಚ್ಚಾಗುತ್ತದೆ. ಜನ ಜಾನುವಾರು ಪಕ್ಷಿಗಳಿಗೆ ಕುಡಿಯಲು ಮತ್ತು ಬಳಸಲು ಕೆರೆ ನೀರು ಅನುಕೂಲವಾಗಲಿದೆ. ಕೂಲಿ ಕಾರ್ಮಿಕರಿಗೆ ನರೇಗಾದಡಿ ನೀರಂತರವಾಗಿ 100 ದಿನ ಕೂಲಿ ಕೆಲಸ ಕೊಡಲಾಗುತ್ತಿದೆ. ಗಂಡು-ಹೆಣ್ಣಿಗೆ ಸಮಾನ ಕೆಲಸಕ್ಕೆ ಸಮಾನ ಕೂಲಿ. ಏಪ್ರಿಲ್ 1ರಿಂದ ಒಂದು ಮಾನವ ದಿನಕ್ಕೆ 370 ರೂ. ಕೂಲಿ ಮೊತ್ತ ಕೊಡಲಾಗುತ್ತಿದ್ದು, ಯಾರು ವಲಸೆ ಹೋಗದೆ ಇದ್ದೂರಲ್ಲೇ ನರೇಗಾದಡಿ ಕೆಲಸ ಮಾಡಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಿ ಎಂದು ಅವರು ಹೇಳಿದರು.

ಬೇಸಿಗೆಯಲ್ಲಿ ಬೀಸಿಲಿ ತಾಪ ಹೆಚ್ಚಾಗಿದ್ದರಿಂದ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಕಾಮಗಾರಿ ಸ್ಥಳದಲ್ಲಿ ಆರೋಗ್ಯ ತಪಾಸಣೆ ಶಿಬಿರ, ಕುಡಿಯುವ ನೀರು, ನೆರಳಿನ ವ್ಯವಸ್ಥೆ ಮಾಡಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಅವರು ತಿಳಿಸಿದರು.

ಎನ್ ಎ ಎಮ್ ಎ ಎಮ್ ಎಸ್ ಹಾಜರಾತಿ ಪಾರದರ್ಶಕವಾಗಿರಲಿ. ಪ್ರತಿ ನಿತ್ಯ ಕೂಲಿಕಾರರಿಗೆ ಕೆಲಸದ ಅಳತೆ ಪ್ರಮಾಣ ಹಾಕಿಕೊಟ್ಟು ಅವರಿಂದ ಕೆಲಸ ಪಡೆಯಬೇಕು. ಗುಣಮಟ್ಟದ ಕಾಮಗಾರಿಗಳಿಗೆ ಒತ್ತುಕೊಡಬೇಕು/ ಒಂದು ವೇಳೆ ನರೇಗಾ ಕಾಯ್ದೆ ನಿಯಮ ಉಲ್ಲಂಘಿಸಿ ಕಳಪೆ ಮಟ್ಟದ ಕಾಮಗಾರಿಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂದಿಗಳ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ನಂತರ ಭಂವರಸಿಂಗ್ ಮೀನಾ ಅವರು ನೆಲೋಗಿ ಹಾಗೂ ಜೇರ ಟಗಿ ಗ್ರಾಮ ಪಂಚಾಯಿತಿಗಳಲ್ಲಿ ಡಿಜಿ ಟಲ್ ಗ್ರಂಥಾಲಯಗಳಾಗಿ ನವಿಕರ ಣಗೊಳ್ಳುತ್ತಿರುವ ಅರಿವು ಕೇಂದ್ರಗಳ (ಗ್ರಂಥಾಲಯ) ಗುಣಮಟ್ಟ ಪರಿಶೀ ಲನೆ ಮಾಡಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ರವಿಚಂದ್ರ ರೆಡ್ಡಿ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ರಾಜೇಶ್ವರಿ, ನಾಗೇಂದ್ರಪ್ಪ ದಿಗ್ಗಾವಿ, ಮಂಜುಳಾ ಬಾಣಿ, ತಾಲ್ಲೂಕು ಪಂಚಾಯಿತಿ ಐಇಸಿ ಸಂಯೋಜಕ ಚಿದಂಬರ್ ಪಾಟೀಲ್, ತಾಂತ್ರಿಕ ಸಂಯೋಜಕ ಸಂತೋಷ ತಡಿಬಿಡಿ, ತಾಂತ್ರಿಕ ಸಹಾಯಕ ಸ್ನೇಹಿತ ಹರಾನಾಳ್, ಕಾರ್ಯದರ್ಶಿ ಯಲ್ಲಪ್ಪ ಕಡಬಿನ್, ದೇವರಾಜ್, ಎಫ್. ಎ ಮಾಪಣ್ಣ, ಕಾಯಕ ಬಂಧುಗಳು, ಕೂಲಿಕಾರ್ಮಿಕರು, ಸಿಬ್ಬಂದಿಗಳು, ಉಪಸ್ಥಿತರಿದ್ದರು.

# ಪಹಲ್ಗಾಮ್ ಉಗ್ರರ ದಾಳಿ: ಹುತಾತ್ಮರಿಗೆ ಮೌನ ಮೆರವಣಿಗೆ ಮೂಲಕ ಶ್ರದ್ಧಾಂಜಲಿ



ಕಲಬುರಗಿ.ಏ. 30: ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಎಲ್ಲಾ ವೃಂದಗಳ ಅಧಿಕಾರಿಗಳು ಹಾಗೂ ನೌಕರರ ವತಿಯಿಂದ. ಜಮ್ಮು ಕಾಶ್ಮೀರದ ಪಹಲ್ಗಾಮನಲ್ಲಿ ಭಯೋತ್ಪಾದಕರ ದಾಳಿಗೆ ಹುತಾತ್ಮರಾದವರಿಗೆ, ಮೇಣದ ಬತ್ತಿ ಹಿಡಿದುಕೊಂಡು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಕಲಬುರಗಿ ಎಲ್ಲಾ ವೃಂದಗಳ ಅಧಿಕಾರಿಗಳು ಹಾಗೂ ನೌಕರರ ವತಿಯಿಂದ ಜಮ್ಮು ಕಾಶ್ಮೀರದ ಪಹಲ್ಗಾಮನಲ್ಲಿ ಭಯೋತ್ಪಾದಕರ ದಾಳಿಗೆ ಹುತಾತ್ಮ ರಾದವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಹಾಗೂ ಮೇಣದ ಬತ್ತಿ ಮೆರವಣಿಗೆ ಸಂಯುಕ್ತಾಶ್ರಯಗಳಲ್ಲಿ ಕಾಶ್ಮೀರದ ಪಹಲ್ಗಾಂನಲ್ಲಿ ನಡೆದ ಉಗ್ರರ ಪೈಶಾಚಿಕ ಕೃತ್ಯ ಖಂಡಿಸಿ ನಗರದ ಸರ್ದಾರ ವಲ್ಲಭಭಾಯಿ ಪಟೇಲ್ ದಿಂದ ಜಿಲ್ಲಾಧಿಕಾರಿ ಕಚೇರಿ ದವರೆಗೆ ಕ್ಯಾಂಡಲ್ ಮಾರ್ಚ್ ಮತ್ತು ಮೌನ ಮೆರವಣಿಗೆ ನಡೆಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಡಾ. ಶಂಕ್ರಪ್ಪ ಮೈಲಾರಿ, ವಿಭಾಗಿಯ ಜಂಟಿ ನಿರ್ದೇಶಕರು ಡಾ. ಶರಣಬಸಪ್ಪ ಗಣಜಲಖೇಡ್, ಡಾ. ಶರಣಬಸವಪ್ಪಾ ಕ್ಯಾತನಾಳ. ಡಾ. ಸಿದ್ದು ಪಾಟೀಲ್, ಡಾ. ಪ್ರಭುಲಿಂಗ್ ಮಾನಕರ್, ಡಾ. ಜಯಮ್ಮ ಗಣಜಲಖೇಡ್, ಡಾ. ಸಂಧ್ಯಾ ಕನೇಕರ್, ಡಾ. ರಾಘವೇಂದ್ರ ಕುಲಕರ್ಣಿ, ಡಾ. ವಿವೇಕಾನಂದ ರೆಡ್ಡಿ, ಡಾ. ವಿನೋದ್ ಕುಮಾರ್, ಡಾ. ರವೀಂದ್ರ ನಾಗಲೇಕಾರ್, ಡಾ. ಡಿ ಎಸ್. ಸಜ್ಜನ, ಡಾ. ಜಯಮ್ಮ. ಡಾ. ರಾಜೇಂದ್ರ. ಜಿಮ್ಸ್ ಆಸ್ಪತ್ರೆ ಸಹಾಯಕ ಆಡಳಿತಧಿಕಾರಿ ಮಲ್ಲಿಕಾರ್ಜುನ ಸಂಗೋಳಗಿ, ಸತೀಶ್ ಜೋಶಿ, ಮಂಜುನಾಥ್ ಕಂಬಳಿಮಠ್, ಚಂದ್ರಕಾಂತ್ ಏರಿ, ರಾಜಶೇಖರ್ ಕುರಕೋಟಿ, ವಿಜಯಕುಮಾರ್ ಖಜೂರಿ, ಮೋಹನ್ ಗಾಯಕ್ವಾಡ್, ರಾಚಣ್ಣ ಬಿಸುಗುಂಡೆ, ಬಸು ನೆಲೋಗಿ, ಶರಣು ಅರಳಿ ಮರದ, ಡಾಕ್ಟರ್ ಅವರ ನೇತೃತ್ವದಲ್ಲಿ ವೈದ್ಯರು ಹಾಗೂ ಆರೋಗ್ಯ ಕಾರ್ಯಕರ್ತರು ಭಾಗವಹಿಸಿದ್ದರು.

# ಜಿಲ್ಲೆಯನ್ನು ದರೋಡೆಕೋರರಿಂದ ರಕ್ಷಿಸಿ ಸಚಿವರೆ: ಭಗವಂತ ಖೂಬಾ



**ಬೀದರ್, ಏ. 30:** ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಹಾಡುಹಗಲೇ ಕಳ್ಳತನ, ದರೋಡೆ, ಕೊಲೆ ನಡೆಯುವುದರ ಜೊತೆಗೆ ಭಯದ ವಾತಾವರಣ ನಿರ್ಮಾಣವಾಗಿದೆ. ಜಿಲ್ಲೆಯಲ್ಲಿ ನಡೆಯುತ್ತಿರುವುದು ಸರ್ಕಾರಿ ಪ್ರಾಯೋಜಿತ ದರೋಡೆ ಎಂದು ಈ ಎಲ್ಲಾ ನಿರಂತರ ಪ್ರಕರಣಗಳಿಂದ ನಮಗೆ ಅನುಮಾನ ಮೂಡುತ್ತಿದೆ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಹುಡಗಿ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬಿಜೆಪಿ ವತಿಯಿಂದ ಸೋಮವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣ, ಹಲವು ಮನೆಗಳ ದರೋಡೆ, ಎಟಿಎಂ ದರೋಡೆ, ಮೊಬೈಲ್ ಲ್ಯಾಪ್‌ಟಾಪ್ ಕಳ್ಳತನ ಜಿಲ್ಲೆಯಲ್ಲಿ ನಿರಂತರವಾಗಿ ನಡೆಯುತ್ತಿವೆ. ಹೆಚ್ಚು ಬಂಗಾರ ಕಳ್ಳತನವಾದರೆ ಕಡಿಮೆ ಬಂಗಾರ ಬರೆಸುವಂತೆ ಪೊಲೀಸರೇ ಸಂತ್ರಸ್ತರಿಗೆ ಹೇಳಿಕೊಡುತ್ತಿದ್ದಾರೆ ಎಂದು ಪಾಟೀಲ ಆರೋಪಿಸಿದರು.

ಹಾಗಾದರೆ ಉಳಿದ ಬಂಗಾರ ಎಲ್ಲಿ ಹೋಯಿತು? ಎಂದು ಪ್ರಶ್ನಿಸಿದರು. ಜಿಲ್ಲೆಗೆ ದಕ್ಷ ಮತ್ತು ಪ್ರಾಮಾಣಿಕ ಅಧಿಕಾರಿಗಳ ಅವಶ್ಯಕತೆ ಇದೆ. ಜಿಲ್ಲಾ ಪೊಲೀಸ್ ಅಧೀಕ್ಷಕರನ್ನು ಕೂಡಲೇ ಬದಲಾವಣೆ ಮಾಡಿ ಎಂದರು. ನಗರದಲ್ಲಿ ಮನೆಮಾಡಲು ಜನ ಹೆದರುತ್ತಿದ್ದಾರೆ. ಆದರೂ ಕೂಡಾ ವಿಷಯ ಹೊರಗೆ ಬರದಂತೆ ವ್ಯವಸ್ಥಿತವಾಗಿ ನೋಡಿಕೊಳ್ಳಲಾಗುತ್ತಿದೆ. ಇಷ್ಟೆಲ್ಲಾ ದುರ್ಘಟನೆಗಳು ಜಿಲ್ಲೆಯಲ್ಲಿ ನಡೆಯುತ್ತಿದ್ದರೂ ಜಿಲ್ಲಾ ಉಸ್ತುವಾರಿ ಸಚಿವರು ಕೇಂದ್ರದ ಗೃಹಸಚಿವರ ರಾಜೀನಾಮೆ ಕೇಳುತ್ತಿದ್ದಾರೆ. ನೀವೇಕೆ ರಾಜೀನಾಮೆ ನೀಡಬಾರದು ಎಂದು ಪಾಟೀಲ ಸಚಿವರಿಗೆ ಪ್ರಶ್ನೆ ಮಾಡಿದರು.

ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರೆ ಕಳ್ಳ-ರಿಂದ, ದರೋಡೆಕೋರರಿಂದ, ಭ್ರಷ್ಟ ಅಧಿಕಾ-ರಿಗಳಿಂದ ಜಿಲ್ಲೆಯ ಜನರನ್ನು ರಕ್ಷಿಸಿ. ನೀವು ಶಾಸಕರಾಗಿದ್ದಾಗ ಭಾಲ್ಕಿಗೆ ಸೀಮಿತವಾಗಿದ್ದ ದರೋಡೆ ಕಳ್ಳತನ ಪ್ರಕರಣಗಳು ಸಚಿವರಾದ ಮೇಲೆ ಇಡೀ ಜಿಲ್ಲೆಗೆ ವ್ಯಾಪಿಸಿದೆ ಎಂದರು. ದರೋಡೆ ಪ್ರಕರಣಗಳು ಸಚಿವರ ನಿರ್ದೇಶನದ ಮೇರೆಗೆ ನಡೆಯುತ್ತಿವೆ ಎಂದು ಗೋಚರಿಸುತ್ತಿದೆ ಎಂದು ಆರೋಪಿಸಿದರಲ್ಲದೆ ಮನವಿ ಕೊಡುವವರ ಮೇಲೆ ಪ್ರಕರಣ ದಾಖಲಾಗುತ್ತಿವೆ. ಸರಣಿ ಕಳ್ಳತನಗಳಾಗುತ್ತಿವೆ. ಜನರು ಆತಂಕದಲ್ಲಿದ್ದಾರೆ. ಇದಕ್ಕೆ ಉಸ್ತುವಾರಿ ಸಚಿವರೇ ನೇರ ಹೊಣೆ ಎಂದು ತಿಳಿಸಿದರು.

ಮಾನವೀಯತೆ, ಸಂವಿಧಾನ, ಪ್ರಜಾಪ್ರಭುತ್ವ, ಜನಪ್ರತಿನಿಧಿಗಳ ಜವಾಬ್ದಾರಿ ಮತ್ತು ಕರ್ತವ್ಯದ ಬಗ್ಗೆ ನೀವು ಯಾವತ್ತಾದರೂ ಯೋಚನೆ ಮಾಡಿದ್ದಿರಾ? ಎಂದು ಉಸ್ತುವಾರಿ ಸಚಿವರಿಗೆ ಖೂಬಾ ಪ್ರಶ್ನೆ ಮಾಡಿದರು. ವಕ್ಫ್ ಬಿಲ್ ವಿರುದ್ಧ ಇಂದು ಸಚಿವ ರಹಿಂಖಾನ್ ಪ್ರತಿಭಟನೆ ನಡೆಸಿದ್ದನ್ನು ಖಂಡಿಸಿದ ಖೂಬಾ ಅವರು ಬಡ ಮುಸ್ಲಿಂ ಜನತೆಗಾಗಿ ಮತ್ತು ಹಿಂದೂಗಳ ಆಸ್ತಿ ರಕ್ಷಣೆಗಾಗಿ ವಕ್ಫ್ ಕಾಯಿದೆಯನ್ನು ಪ್ರಧಾನಿ ಮೋದಿಯವರು ಜಾರಿಗೆ ತಂದಿದ್ದಾರೆ. ಅದನ್ನು ಸಚಿವರು ಅರ್ಥಮಾಡಿಕೊಳ್ಳಬೇಕು. ಸಿಂಧೂ ನದಿ ನೀರು ಪಾಕಿಸ್ತಾನಕ್ಕೆ ಬಿಡುವುದನ್ನು ನಿಲ್ಲಿಸಿದ್ದಕ್ಕಾಗಿ ರಹಿಂಖಾನ್ ಪ್ರತಿಭಟನೆಯಲ್ಲಿ ಪ್ರಶ್ನೆ ಮಾಡಿದ್ದಕ್ಕೆ, ನೀವು ಜನಿಸಿದ್ದು ಪಾಕಿಸ್ತಾನದಲ್ಲೋ ಅಥವಾ ಬೀದರನಲ್ಲೋ ಎಂದು ರಹಿಂಖಾನ್ ಅವರಿಗೆ ಖೂಬಾ ಪ್ರಶ್ನೆ ಮಾಡಿದ್ದಾರೆ. ಸಂಸದ ಸಾಗರ ಖಂಡ್ರೆ ವಕ್ಫ್ ಕಾಯಿದೆ ವಿರುದ್ಧ ಮತ ಚಲಾಯಿಸಿದ್ದಾರೆ ಎಂದರಲ್ಲದೆ ವಕ್ಫ್ ನಿಂದ ಬಂದ ಆದಾಯದಿಂದ ಬಡವರಿಗೆ ಏನು ಸಹಾಯ ಮಾಡಿದ್ದೀರಿ? ದಾಖಲೆ ಬಿಡುಗಡೆ ಮಾಡಿ ಎಂದು ಖೂಬಾ ತಿಳಿಸಿದರು.

ಇದೇ ತಿಂಗಳ 22 ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಪ್ರಸ್ತಾಪಿಸಿದ ಭಗವಂತ ಖೂಬಾ ಯುದ್ಧದ ಅವಶ್ಯಕತೆ ಇಲ್ಲ ಎಂದು ಹೇಳಿರುವ ಸಿಎಂ ಸಿದ್ಧರಾಮಯ್ಯ ಅವರಿಗೆ ತಿರುಗೇಟು ನೀಡಿದರು. ನಿಮ್ಮ ಮನೆಯವರ ಮೇಲೆ ದಾಳಿ ಮಾಡಿದಾಗ ಮಾತ್ರ ಅದು ಅಧಿಕೃತ ಅನಿಸುತ್ತಾ ಎಂದು ಪ್ರಶ್ನಿಸಿದರು. ತುಷ್ಟಿಕರಣ ನೀತಿ ಅನುಸರಿಸುವುದನ್ನು ಬಿಟ್ಟು ಸಿದ್ಧರಾಮಯ್ಯ ಅವರು ಇಸ್ಲಾಂ ಧರ್ಮ ಸ್ವೀಕರಿಸುವುದು ಉತ್ತಮ ಎಂದು ಟಾಂಗ್ ನೀಡಿದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಕಿರಣ ಪಾಟೀಲ, ಪ್ರಶಿಕ್ಷಣ ಪ್ರಕೋಷ್ಟದ ರಾಜ್ಯ ಸಂಚಾಲಕ ರಾಜಶೇಖರ ನಾಗಮೂರ್ತಿ, ನಗರಸಭೆ ಸದಸ್ಯ ಶಶಿ ಹೊಸಳ್ಳಿ, ಸಂತೋಷರೆಡ್ಡಿ ಆಣದೂರ, ಬಸವರಾಜ ಪವಾರ್, ವೀರೂ ದಿಗ್ವಾಲ್ ಸೇ-ರಿದಂತೆ ಹಲವರು ಉಪಸ್ಥಿತರಿದ್ದರು.



ಕಲಬುರಗಿಯಲ್ಲಿ ಬುಧವಾರ ನಡೆದ ಬಸವ ಜಯಂತಿ ಮೆರವಣಿಗೆಯಲ್ಲಿ ಜನರು ಪಾಲ್ಗೊಂಡಿದ್ದರು.

# ಯುವಕರಿಗೆ ಕೌಶಲ್ಯ ಅಭಿವೃದ್ಧಿ ಮುಖ್ಯ: ಸುಚಿತ್ರಾ ಬೀಸೆನ್



**ರಾಯಚೂರು, ಏ. 30:** ಜಿಲ್ಲೆಯ ಮಾನ್ವಿ ತಾಲೂಕಿನ ನಕ್ಕುಂಡಿ ಗ್ರಾಮ ಪಂಚಾಯತ ಆವರಣದಲ್ಲಿಂದು ಜೀವನ್ ಪ್ರಕಾಶ ಚಾರಿಟೇಬಲ್ ಸೊಸೈಟಿ ಮತ್ತು ಬ್ಲ್ಯೂ ಫೈನ್ ಎನರ್ಜಿ ಸಂಸ್ಥೆಗಳ ಆಶ್ರಯದಲ್ಲಿ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮದಡಿ ಆರು ತಿಂಗಳ ಅವಧಿಯ ಉಚಿತ ಡಿಜಿಟಲ್ ಮಾರ್ಕೆಟಿಂಗ್ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ 33 ಪ್ರಶಿಕ್ಷಣಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬ್ಲ್ಯೂ ಫೈನ್ ಸೋಲಾರ್ ಎನರ್ಜಿಯ ಸುಚಿತ್ರಾ ಬೀಸೆನ್ ಅವರು ಪ್ರಮಾಣ ಪತ್ರಗಳನ್ನು ವಿತರಿಸಿ ಮಾತನಾಡುತ್ತ, ಯುವಜನರಿಗೆ ಕೌಶಲ್ಯ ಅಭಿವೃದ್ಧಿ ವಿಶೇಷವಾಗಿ ಮುಖ್ಯವಾಗಿದೆ. ಏಕೆಂದರೆ ಅದು ಅವರಿಗೆ ಪ್ರಸ್ತುತ ಉದ್ಯೋಗ ಮಾರುಕಟ್ಟೆಯ ಅವಶ್ಯ ಕತೆಗಳನ್ನು ಪೂರೈಸಲು ಅಧಿಕಾರ ನೀಡುತ್ತದೆ. ಆರ್ಥಿಕ ಸ್ವಾತಂತ್ರ್ಯವನ್ನು ಬೆಳೆಸುತ್ತದೆ ಮತ್ತು ಒಟ್ಟಾರೆ ವೈಯಕ್ತಿಕ ಬೆಳವಣಿಗೆಗೆ ಕೊಡುಗೆ ನೀಡುತ್ತದೆ. ಪರಿಣಾಮಕಾರಿ ಕೌಶಲ್ಯ ಅಭಿವೃದ್ಧಿ ಉಪಕ್ರಮಗಳು, ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದಲ್ಲದೆ, ಸಮರ್ಥ, ಕ್ರಿಯಾತ್ಮಕ ಕಾರ್ಯಪಡೆಯನ್ನು ಸೃಷ್ಟಿಸುವ ಮೂಲಕ ಆರ್ಥಿಕ ಅಭಿವೃದ್ಧಿ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಅಧ್ಯಕ್ಷತೆಯನ್ನು ಜೀವನ್ ಪ್ರಕಾಶ ಚಾರಿಟೇಬಲ್ ಸೊಸೈಟಿ ಅಧ್ಯಕ್ಷ ಶಿವಧರ್ ಧುಬೆ ಅವರು ವಹಿಸಿದ್ದರು. ಸ್ಟೇಟ್ ಕೋ ಆರ್ಡಿನೇಟರ್ ಪವನಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ತರಬೇತಿ ಬೋಧಕರಾದ ಸಿರಾಜುದ್ದೀನ್ ಅವರು ಸ್ವಾಗತಿಸಿದರು. ಮಹಮ್ಮದ್ ಸುಹೈಲ್ ಕಾರ್ಯಕ್ರಮ ನಿರೂಪಿಸಿ 'ವಂದಿಸಿದರು.

# ಉದ್ಯಮಿ, ಮುಖಂಡ ಕೆ.ಬಿ.ಶ್ರೀನಿವಾಸ ರೆಡ್ಡಿಯವರ ಮನೆಯ ಗೃಹಪ್ರವೇಶದಲ್ಲಿ ಸುತ್ತೂರು ಶ್ರೀ ಆಶೀರ್ವಚನ



**ಹೊಸಪೇಟೆ, ಏ.30:** ಉದ್ಯಮಿ, ವೀರಶೈವ ಲಿಂಗಾಯತ ಸಮುದಾಯದ ಮುಖಂಡ ಕೆ.ಬಿ.ಶ್ರೀನಿವಾಸ ರೆಡ್ಡಿಯವರ ಹೊಸಪೇಟೆಯ ನೂತನ ನಿವಾಸ "ಇಂದ್ರಪ್ರಸ್ಥ" ಗೃಹಪ್ರವೇಶಕ್ಕೆ ಸುತ್ತೂರಿನ ಜಗುದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನದ ಡಾ.ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಮಂಗಳವಾರ ಬೆಳಿಗ್ಗೆ ಪಾದ ಪೂಜೆ ಸ್ವೀಕರಿಸುವ ಮೂಲಕ ಚಾಲನೆ ನೀಡಿದರು.

ಸೋಮವಾರ ರಾತ್ರಿ ಶ್ರೀನಿವಾಸ ರೆಡ್ಡಿಯವರ ನೂತನ ನಿವಾಸ ಇಂದ್ರಪ್ರಸ್ಥಕ್ಕೆ ಭೇಟಿ ನೀಡಿದ ಸುತ್ತೂರು ಶ್ರೀಗಳು, ನೂತನ ನಿವಾಸದಲ್ಲಿ ಆತಿಥ್ಯ ಸ್ವೀಕರಿಸಿ, ಶಾಸ್ತ್ರೋಕ್ತವಾಗಿ ಇಷ್ಟಲಿಂಗ ಪೂಜೆಯ ನಂತರ, ಕೆ.ಬಿ.ಶ್ರೀನಿವಾಸ ರೆಡ್ಡಿ, ರೆಡ್ಡಿ ಅವರ ಪತ್ನಿ ಕಾಂಗ್ರೆಸ್ ಮುಖಂಡೆ ರಾಣಿ ಸಂಯುಕ್ತಾ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹಾಗೂ ಅವರ ಪತ್ನಿ ನಾರಾ ವೈಜಯಂತಿ ರೆಡ್ಡಿ ಹಾಗೂ ಶ್ರೀನಿವಾಸ ರೆಡ್ಡಿ ಅವರ ಪುತ್ರ ರಾಜವರ್ಧನ ರೆಡ್ಡಿ ಅವರು ಶ್ರೀಗಳಿಗೆ ಪಾದ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ಪಾದಪೂಜೆ ಸ್ವೀಕರಿಸಿದ ಸುತ್ತೂರು ಶ್ರೀಗಳು ನೂತನ ನಿವಾಸದಲ್ಲಿ ವಾಸಿಸುವವರೆಲ್ಲರ ಮೇಲೆ ಬಸವಾದಿ ಪ್ರಮಥರ ಆಶೀರ್ವಾದ ಇರಲಿ ಎಂದು ಹಾರೈಸಿದರು.


1 ಮೇ 2025
ಜನಪ್ರಿಯ ಪೌರಾಡಳಿತ ಹಾಗೂ
ಹಜ್ ಖಾತೆ ಸಚಿವರಾದ ಸನ್ಮಾನ್ಯಶ್ರೀ
ರಹೀಂಖಾನ್
ಅವರಿಗೆ...
ಜನ್ಮದಿನದ
ಶುಭಾಶಯಗಳು
ಶುಭಕೋರುವವರು:
ಅಭಿಮಾನಿಗಳು ಹಾಗೂ ಹಿತೈಷಿಗಳು,
ಬೀದರ್ (ಉತ್ತರ)ವಿಧಾನಸಭಾ ಕ್ಷೇತ್ರ